ಸಂಪುಟ : 13 Volume ಸಂಚಿಕೆ : 221 Issue ಪುಟಗಳು : 08 Pages ಶುಕ್ರವಾರ 17 ಅಕ್ಟೋಬರ್ 2025 ₹2 RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ । ಕಲಬುರಗಿ । ಯಾದಗಿರಿ । ರಾಯಚೂರು । ಬಳ್ಳಾರಿ । ವಿಜಯನಗರ । ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಮಲ್ಲಮ್ಮ ನುಡಿ

MN ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಬೆಳಗು

ಪ್ರೀತಿ ಇದ್ದಲ್ಲಿ ನಂಬಿಕೆ ಇರಲೇ ಬೇಕೆಂದಿಲ್ಲ ಆದರೆ ನಂಬಿಕೆ ಇದ್ದಲ್ಲ ಪ್ರೀತಿ ಇದ್ದೇ ಇರುವುದು ' . ಸಂತ ಕಬೀರ .

. ಸ್ವಾಮಿ ವಿವೇಕಾನಂದ .

ಸಂಪಾದಕರು: ರಮೇಶ ರೆಡ್ಡಿ

2. ಅ.23 ರಂದು ಮತದಾನಕ್ಕೆ ದಿನಾಂಕ ನಿಗದಿ

4. ಪ್ರಗತಿ ಕಾಮಗಾರಿಗಳಿಗೆ ಭೇಟಿ : ಸಿಇಓ ಒರಡಿಯಾ

8. ರಾಜ್ಯ ಮಾಹಿತಿ ಆಯುಕ್ತರ ಪ್ರಮಾಣ ವಚನ

ಸಚಿವ ಪ್ರಿಯಾಂಕ್ ಖರ್ಗೆಗೆ ಬೆದರಿಕೆ ಹಾಕಿದ್ದ ಆರೋಪಿ ಬಂಧನ



ಕಲಬುರಗಿ:ಅ.16: ಸಚಿವ ಪ್ರಿಯಾಂಕ್ ಖರ್ಗೆಗೆ ಬೆದರಿಕೆ ಹಾಕಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಮಹಾರಾಷ್ಟ್ರದ ಲಾತೂರ್‌ನಲ್ಲಿ ಆರೋಪಿ ಅರೆಸ್ಟ್ ಆಗಿದ್ದಾನೆ.

ಬೆದರಿಕೆ ಕರೆ ಮಾಡಿದ ಸೋಲಾಪುರ ಮೂಲದ ದಾನೇಶ್ ನರೋಣಿ ಬಂಧಿತ ಆರೋಪಿ. ಫೋನ್ ಕರೆ ಮಾಡಿದ ಬಳಿಕ ಸೋಲಾಪುರದಿಂದ ಲಾತೂರ್‌ಗೆಪರಾರಿಯಾಗಿದ್ದ.ಹೀಗಾಗಿ,ಬೆಂಗಳೂರುಹಾಗೂಕಲಬುರಗಿ ಪೊಲೀಸರುಜಂಟಿಕಾರ್ಯಚರಣೆನಡೆಸಿಆರೋಪಿಯನ್ನು ಬಂಧಿಸಿದ್ದಾರೆ.

ಸಚಿವಪ್ರಿಯಾಂಕ್‌ಖರ್ಗೆಅವಾಚ್ಯಶಬ್ದಗಳಿಂದನಿಂದಿಸಿದ್ದ.ಆರೋಪಿಯನ್ನು ಸದಾಶಿವನಗರಠಾಣೆಪೊಲೀಸರಿಗೆಕಲಬುರಗಿಪೊಲೀಸರುಒಪ್ಪಿಸಲಿದ್ದಾರೆ. ಸೋಲಾಪುರದಿಂದ ಬೆಂಗಳೂರಿಗೆ ಕರೆದುಕೊಂಡು ಹೋಗಲಿದ್ದಾರೆ.

ಗೂಗಲ್‌ನಲ್ಲಿಸಚಿವರನಂಬರ್ ತೆಗೆದುಕೊಂಡುದಾನಪ್ಪಕರೆಮಾಡಿದ್ದ. ಫೋನ್ ಕರೆ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ. ಈ ಸಂಬಂಧ ಸಚಿವರು ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಸಚಿವ ಪ್ರಿಯಾಂಕ ಖರ್ಗೆ ರವರಿಗೆ ಜೀವ ಬೆದರಿಕೆ - ಮಾಜಿ ಸಚಿವ ರಾಜಶೇಖರ ಪಾಟೀಲ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಸಚಿವ ಪ್ರಿಯಾಂಕ ಖರ್ಗೆ ರವರಿಗೆನೀಡಲಾದಜೀವ ಬೆದರಿಕೆಯನ್ನು ಮಾಜಿ ಸಚಿವ ರಾಜಶೇಖರಪಾಟೀಲ ಅವರು ತೀವ್ರವಾಗಿ ಖಂಡಿಸಿದ್ದಾರೆ. ಪ್ರಜಾತಂತ್ರದಲ್ಲಿ ಇಂತಹ ಧಮ್ಕಿಗಳುಅಸಹ್ಯಕರಮತ್ತುಅಪ್ರಜಾಸತ್ತಾತ್ಮಕವೆಂದು ಅವರುತಿಳಿಸಿದ್ದಾರೆ.ಜನರಸೇವೆಯಲ್ಲಿತೊಡಗಿರುವ ಜನಪ್ರತಿನಿಧಿಗಳ ಮೇಲೆ ಇಂತಹ ಬೆದರಿಕೆಗಳು ನಡೆಯುವುದುದುಃಖದಸಂಗತಿಯಾಗಿದೆಎಂದು ಅವರು ಅಭಿಪ್ರಾಯಪಟ್ಟರು.

ಪೊಲೀಸರುತ್ವರಿತವಾಗಿಕ್ರಮಕೈಗೊಂಡುಅಪರಾಧಿಗಳನ್ನು ಕಾನೂನಿನ ಮುಂದೆತರಬೇಕುಎಂದುರಾಜಶೇಖರಪಾಟೀಲರವರುಆಗ್ರಹಿಸಿದರು. ಪ್ರಿಯಾಂಕಖರ್ಗೆಅವರೊಂದಿಗೆನಾವುಎಲ್ಲರೂಏಕತೆಯಿಂದನಿಲ್ಲುತ್ತೇವೆ ಎಂದು ಅವರು ಹೇಳಿದರು.

ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ಸರ್ಕಾರದ ಬದ್ಧತೆ:ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಅ 16:ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ನಮ್ಮ ಸರ್ಕಾರದ ಬದ್ಧತೆಯಾಗಿದ್ದು,ಅದಕ್ಕಾಗಿಯೇ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ.ಕಾಳಸಂತೆಯಲ್ಲಿಪಡಿತರ ಮಾರಾಟಕಂಡುಬಂದಲ್ಲಿಅಂತಹವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಇಂದುಆಹಾರಮತ್ತುನಾಗರಿಕ ಸರಬರಾಜುಇಲಾಖೆವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿಹಮ್ಮಿಕೊಳ್ಳಲಾದ ವಿಶ್ವ ಆಹಾರ ದಿನ – 2025 ರ ಕಾರ್ಯಕ್ರಮಉದ್ಘಾಟಿಸಿಮಾತನಾಡಿದ ಮುಖ್ಯಮಂತ್ರಿಗಳು,ನಮ್ಮ ಕವಿ ಸರ್ವಜ್ಞ ಅವರು ಹೇಳಿರುವಂತೆ ಅನ್ನ ದೇವರ ಮುಂದೆ ಇನ್ನೂ ದೇವರುಂಟೆ, ಅನ್ನವಿರುವ ತನಕ ಪ್ರಾಣವು,ಜಗದೊಳಗೆಅನ್ನವೆದೈವ ಎಂದು ಹೇಳಿದ್ದಾರೆ. ಹಾಗೆಯೇ ಕವಿ ಬೇಂದ್ರೆಯವರು ರೈತರನ್ನು ಅನ್ನಬ್ರಹ್ಮ ಎಂದು ಕರೆದಿದ್ದಾರೆ ಎಂದರು.

ಬಹಳಜನರಿಗೆಅನ್ನದಮಹತ್ವವೇ ಗೊತ್ತಿಲ್ಲ,ಈಬಗ್ಗೆದೇಶದಾದ್ಯಂತ ಹೆಚ್ಚಿನ ಅರಿವು ಮೂಡಿಸಬೇಕು.

2ನೇ ಪುಟನೋಡಿ

7 ನಿಗಮ ಮುಚ್ಚಲು, 9 ನಿಗಮ ವಿಲೀನ ಮಾಡಲು ಶಿಫಾರಸು

ಬೆಂಗಳೂರು:ಅ.16:ಕರ್ನಾಟಕ ಆಡಳಿತಸುಧಾರಣಾಆಯೋಗತನ್ನ9ನೇ ವರದಿಯನ್ನುಸಿಎಂಸಿದ್ದರಾಮಯ್ಯಗೆ ಸಲ್ಲಿಕೆಮಾಡಿದೆ.ವಿಧಾನಸೌಧದಸಿಎಂ ಕಚೇರಿಯಲ್ಲಿಆಯೋಗದಅಧ್ಯಕ್ಷ ಆರ್.ವಿ.ದೇಶಪಾಂಡೆವರದಿಯನ್ನು ಸಿಎಂಗೆ ಸಲ್ಲಿಕೆ ಮಾಡಿದ್ದಾರೆ.

9ನೇ ವರದಿಯಲ್ಲಿ 449 ಹೊಸ ಶಿಫಾರಸುಗಳನ್ನು ಮಾಡಲಾಗಿದೆ. 3 ಪ್ರಮುಖವಿಷಯಗಳನ್ನುಇಟ್ಟುಕೊಂಡು ಈ ವರದಿ ನೀಡಲಾಗಿದೆ ಅಂತ ದೇಶಪಾಂಡೆ ತಿಳಿಸಿದರು. ಪ್ರಮುಖವಾಗಿ ಈ ವರದಿಯಲ್ಲಿ 7ಬೋರ್ಡ್,ಕಾರ್ಪೊರೇಷನ್‌ಗಳನ್ನು ಮುಚ್ಚಲು ಸಲಹೆ ನೀಡಲಾಗಿದೆ. ಅಲ್ಲದೇ,9ಬೋರ್ಡ್‌ಕಾರ್ಪೊರೇಷನ್ ಗಳನ್ನವಿಲೀನಮಾಡಲುಶಿಫಾರಸು ಮಾಡಲಾಗಿದೆ.

ಈ ಬಗ್ಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದದೇಶಪಾಂಡೆ,ಬೋರ್ಡ್, ಕಾರ್ಪೊರೇಷನ್‌ಗಳಿಗೆಈಗಾಗಲೇ ಅಧ್ಯಕ್ಷರನ್ನನೇಮಕಮಾಡಿದ್ರೆನನಗೆ ಗೊತ್ತಿಲ್ಲ. ಜನರ ಹಣ ಇದು. ಆ ಹಣದ ಉಪಯೋಗ ಜನರಿಗೆ ಆಗಬೇಕು. ಇವತ್ತಿನ ಕಾಲದಲ್ಲಿ ಅವಶ್ಯಕತೆ ಇಲ್ಲದ ಬೋರ್ಡ್ ಮುಚ್ಚಲು ಹೇಳಿದ್ದೇವೆ. ನನ್ನ ಜವಾಬ್ದಾರಿ ನಾನು ಮಾಡಿದ್ದೇನೆ. ಸಿಎಂಅಂಗೀಕಾರಮಾಡೋದಾಗಿ ಹೇಳಿದ್ದಾರೆ. ನೋಡೋಣ ಏನ್ ಮಾಡ್ತಾರೆ ಎಂದು ತಿಳಿಸಿದರು.

84 ಬೋರ್ಡ್,ಕಾರ್ಪೊರೇಷನ್ ಗಳರಿವ್ಯೂಮಾಡಿದ್ದೇವೆ.ಆಬೋರ್ಡ್‌ಗಳ0-ಮಾಹಿತಿನಮ್ಮಬಳಿಇದೆ. ಇದರಲ್ಲಿ7 ಮುಚ್ಚಲು,9 ಮರ್ಜ್ ಮಾಡಲುಶಿಫಾರಸುಮಾಡಿದ್ದೇವೆ. ನಮ್ಮ ಜವಾಬ್ದಾರಿಮಾಡಿದ್ದೇವೆ. ಮಿಕ್ಕಿದ್ದು ಸರ್ಕಾರ ಮಾಡಬೇಕು. ಮುಚ್ಚಲು ಹೇಳಿರೋ ಬೋರ್ಡ್‌ನಲ್ಲಿ ಕೆಲಸವೇ ಇಲ್ಲ. ಕೆಲವು ಬೋರ್ಡ್‌ಗೆ ಹಣವೇ ಇಲ್ಲ. ಹೀಗಾಗಿ, ಮುಚ್ಚಲು ಶಿಫಾರಸು ಮಾಡಿದ್ದೇವೆ. ಉಳಿದ ಬೋರ್ಡ್, ಕಾರ್ಪೊರೇಷನ್ ಅಭಿವೃದ್ಧಿ, ಸುಧಾರಣೆಹೇಗೆಮಾಡಬೇಕುಅಂತ



379 ಶಿಫಾರಸು ಮಾಡಿದ್ದೇವೆ. 15 ಶಿಫಾರಸುಭೂಸ್ವಾಧೀನಮಾಡಿದ್ದೇವೆ. ಸಾಮಾನ್ಯ ಆಡಳಿತಾತ್ಮಕ-ಇ ಸುಧಾರಣೆಗೆ 55 ಶಿಫಾರಸು ಮಾಡಿದ್ದೇವೆ ಎಂದು ಅಧ್ಯಕ್ಷರು

ವಿಲೀನ ಮಾಡಲು ಸೂಚಿಸಿರೋ ನಿಗಮಗಳು

1.ಕರ್ನಾಟಕ ರಾಜ್ಯ ಏಡ್ಸ್ ತಡೆಗಟ್ಟುವ ಸೊಸೈಟಿ
(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯೊಂದಿಗೆ ವಿಲೀನ)

2.ಕರ್ನಾಟಕ ರೇಷ್ಮೆ ಕೈಗಾರಿಕೆ ನಿಗಮ ನಿಯಮಿತ
(ಕರ್ನಾಟಕರೇಷ್ಮೆಮಾರುಕಟ್ಟೆಮಂಡಳಿಲಿಮಿಟೆಡ್‌ವಿಲೀನಮಾಡಬೇಕು)

3.ಆಹಾರ ಕರ್ನಾಟಕ ಲಿಮಿಟೆಡ್
(ಕರ್ನಾಟಕರಾಜ್ಯಕೃಷಿಉತ್ಪನ್ನ,ಸಂಸ್ಕರಣೆಮತ್ತು ರಫ್ತು ನಿಗಮನಿಯಮಿತದಲ್ಲಿವಿಲೀನ)

4.ಬೆಂಗಳೂರು ಸಬ್ ಅರ್ಬನ್ ರೈಲ್ವೆ ಕಂಪನಿ ಲಿಮಿಟೆಡ್ (ಬಿ-ರೈಡ್)
(ರೈಲು ಮೂಲಸೌಕರ್ಯ ಅಭಿವೃದ್ಧಿ ಕಂಪನಿ (ಕರ್ನಾಟಕ) ಲಿಮಿಟೆಡ್ (ಕೆ-ರೈಡ್)

5.ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ
(ಜವಳಿ ಮೂಲಸೌಕರ್ಯ ಅಭಿವೃದ್ಧಿ ನಿಗಮ)

6.ಮೈಸೂರು ಕ್ಯೂಮ್ ಟ್ಯಾನಿಂಗ್ ಕಂಪನಿ ಲಿಮಿಟೆಡ್
(ಮೈಸೂರು ಸೇಲ್ಸ್ ಇಂಟರ್ನ್ಯಾಷನಲ್ ಲಿಮಿಟೆಡ್‌ನಲ್ಲಿ ವಿಲೀನ)

7.ಕರ್ನಾಟಕ ಗೇದು ಅಭಿವೃದ್ಧಿ ನಿಗಮ ನಿಯಮಿತ
(ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕೆ ನಿಗಮ ನಿಯಮಿತ)

8.ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ
(ಕೃಷಿ ವಿಜ್ಞಾನ ವಿಶ್ವವಿದ್ಯಾಲಯ (ಜಿಕೆವಿಕೆ)

9.ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಸಿಎಡಿಎ)
(ಸಂಬಂಧಿಸಿದ ನೀರಾವರಿ ನಿಗಮಗಳು)

2ನೇ ಪುಟನೋಡಿ

ಕೃಷಿ ಸಂಸ್ಕರಣ ಘಟಕಗಳ ಬಳಕೆಯಿಂದ ರೈತರ ಉತ್ಪನ್ನಗಳಿಗೆ ಹೆಚ್ಚಿನ ಬೆಲೆ: ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅ 16 : ಕೃಷಿ ಸಂಸ್ಕರಣಾಘಟಕಗಳನ್ನು (ಅಗ್ರೋ ಪ್ರೊಸೆಸಿಂಗ್‌ಸೆಂಟರ್) ಬಳಸಿಕೊಂಡಲ್ಲಿ ರೈತರ ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ಬೆಲೆಸಿಗಲಿದೆ.ರೈತರಿಗೆಮಾರುಕಟ್ಟೆ ಮತ್ತು ಸಂಪರ್ಕ ಸರಳವಾಗಲಿದೆ ಎಂದುಕೇಂದ್ರ ಹಣಕಾಸುಮತ್ತು ಕಾರ್ಪೊರೇಟ್‌ವ್ಯವಹಾರಗಳಸಚಿವರಾದ ನಿರ್ಮಲಾಸೀತಾರಾಮನ್ ಅವರು ರೈತರಿಗೆ ಸಲಹೆ ಮಾಡಿದರು.

ಸಿಂಧನೂರುತಾಲೂಕಿನಜವಳಗೇರಾ ಗ್ರಾಮದಲ್ಲಿಅಕ್ಟೋಬರ್16ರಂದು, ಭಾರತಸರ್ಕಾರಮತ್ತುನಬಾರ್ಡ್ ಇವರಸಹಯೋಗದಲ್ಲಿನಡೆದಕೃಷಿ ಸಂಸ್ಕರಣೆಗಾಗಿರೈತರತರಬೇತಿಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.ಇಡೀರಾಯಚೂರು ಜಿಲ್ಲೆಯಾದ್ಯಂತ ಅಂದಾಜು 40 ಕೃಷಿಸಂಸ್ಕರಣಘಟಕಗಳಸ್ಥಾಪನೆ ಮಾಡಿಸಂಸ್ಕರಣೆಗೊಳಪಡಿಸುವಷ್ಟು ರಾಯಚೂರುಜಿಲ್ಲೆಯೊಂದರಲ್ಲಿಯೇ ಪ್ರತಿವರ್ಷ ಅಂದಾಜುಸಾವಿರಾರು ಮೆಟ್ರಿಕ್ ಟನ್ ದಷ್ಟುತೊಗರಿಉತ್ಪನ್ನ ಬರುತ್ತದೆ ಎನ್ನುವ ಮಾಹಿತಿ ಇದೆ. ತುಂಗಭದ್ರಾಮತ್ತುಕೃಷ್ಣಾನದಿಗಳ ಮಧ್ಯೆದಈಭೂಮಿಯುಅತ್ಯಂತ ಸಂಪದ್ಭರಿತವಾಗಿದೆ.ಈಪ್ರದೇಶದಲ್ಲಿ ಪ್ರತಿ ವರ್ಷ ಅಂದಾಜು 80,000 ಮೆಟ್ರಿಕ್ ಟನ್ ತೊಗರಿ ಉತ್ಪನ್ನ ಹಾಗೂ ಅಂದಾಜು 34,000 ಮೆಟ್ರಿಕ್ ಟನ್ ಕಡಲೆ ಉತ್ಪನ್ನ ಬರುತ್ತಿದ್ದು, ಯಾವುದೇ ಉತ್ಪನ್ನ

2ನೇ ಪುಟನೋಡಿ

ಸರ್ಕಾರಿ ಸ್ಥಳಗಳಲ್ಲಿ ಆರ್ ಎಸ್ ಎಸ್ ಚಟುವಟಿಕೆಗಳಿಗೆ ಮೂಗುದಾರ

ಬೆಂಗಳೂರು:ಅ.16:ಸರ್ಕಾರದಸ್ಥಳಗಳಲ್ಲಿಆರ್ ಎಸ್ ಎಸ್ ಚಟುವಟಿಕೆಗಳಿಗೆ ಸಿದ್ದರಾಮಯ್ಯ ಸರ್ಕಾರ ಮೂಗುದಾರ ಹಾಕಿದೆ. ಸರ್ಕಾರಿ ಸ್ಥಳಗಳಲ್ಲಿ ಖಾಸಗಿ ಸಂಘ ಸಂಸ್ಥೆಗಳ ಚಟುವಟಿಕೆ ನಿಷೇಧಿಸಲು ಕ್ಯಾಬಿನೆಟ್ ಮಹತ್ವದ ತೀರ್ಮಾನ ತೆಗೆದುಕೊಂಡಿದೆ.2013 ರ ಬಿಜೆಪಿ ಸರ್ಕಾರದ ಆದೇಶವನ್ನೇ ಮುಂದಿಟ್ಟು ಸರ್ಕಾರ ತಮಿಳುನಾಡು ಸರ್ಕಾರ ಕೈಗೊಂಡಿರುವ ನಿರ್ಧಾರದಂತೆ ಖಾಸಗಿ ಸಂಸ್ಥೆಗಳು, ಸಂಘಟನೆಗಳು ಚಟುವಟಿಕೆಗಳನ್ನ ನಡೆಸಲು ಪೂರ್ವಾನುಮತಿ ಕಡ್ಡಾಯ ಮಾಡಿ ಹೊಸ ನಿಯಮ ತರಲು ಮುಂದಾಗಿದೆ.ತನ್ನ ತೀರ್ಮಾನದಲ್ಲಿಎಲ್ಲಿಯೂ ಆರ್ ಎಸ್ ಎಸ್ ಪದಬಳಕೆ ಮಾಡದ ಸರ್ಕಾರ ಖಾಸಗಿ ಸಂಸ್ಥೆಗಳು ಎಂದು ಉಲ್ಲೇಖಿಸಿ ಜಾಣ್ಮೆ ನಡೆ ಇರಿಸಿದೆ.ಈ ನಿಯಮ ಜಾರಿಯಾದರೆ

2ನೇ ಪುಟನೋಡಿ

ಅರ್ಹ ನೊಂದಾಯಿತ ಮತದಾರರ ಸಂಖ್ಯೆ ಹೆಚ್ಚಾಗಲಿ: ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.16 : ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಚುನಾವಣೆಯಅರ್ಹಮತದಾರರ ನೋಂದಾಯಿತರ ಸಂಖ್ಯೆ ಹೆಚ್ಚಾಗಲಿಎಂದುಕಲಬುರಗಿವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಅವರು ತಿಳಿಸಿದರು.

ಅವರುಗುರುವಾರಜಿಲ್ಲಾಧಿಕಾರಿಗಳ ಕಚೇರಿಸಭಾಂಗಣದಲ್ಲಿ2026ನೇ ಸಾಲಿನಲ್ಲಿ ಜರುಗುವ ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಚುನಾವಣೆ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳುವ ಕುರಿತು ಕರೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬೀದರ ಜಿಲ್ಲೆಯಲ್ಲಿ ಅರ್ಹ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿಯುನಿಧಾನಗತಿಯಲ್ಲಿ ಸಾಗುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ಪ್ರೌಢ ಶಾಲೆ, ಪದವಿಪೂರ್ವ ಕಾಲೇಜು, ಪದವಿ ಕಾಲೇಜು, ನರ್ಸಿಂಗ್ ಕಾಲೇಜು, ಇಂಜಿನೀಯರಿಂಗ್ ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ಎಲ್ಲಾ ಕಡೆಗೆ ಹೋಗಿ ಅರ್ಹರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸುವಂತೆಮಾಡಬೇಕು ಎಂದರು.ತಹಸಿಲ್ದಾರರುತಾಲೂಕು ಮಟ್ಟದಲ್ಲಿಅಧಿಕಾರಿಗಳಿಂದಗೆಸಭೆ ನಡೆಸಿ ನೋಂದಣಿ ಬಗ್ಗೆ ಇರುವ

2ನೇ ಪುಟನೋಡಿ

ಅಮೆರಿಕ, ರಷ್ಯಾ ನಂತರ 3ನೇ ಅತಿ ಬಲಿಷ್ಠ ಸೇನೆ ಭಾರತ

ನವದೆಹಲಿ:ಅ.16: ಜಾಗತಿಕ ಸೇನಾ ಬಲದಲ್ಲಿಭಾರತಚೀನಾವನ್ನು ಹಿಂದಿಕ್ಕಿ ಜಗತ್ತಿನ 3 ನೇ ಅತಿ ಬಲಿಷ್ಠಸೇನೆಯಾಗಿ ಹೊರಹೊಮ್ಮಿದೆ.

ವರ್ಲ್ಡ್ ಡೈರೆಕ್ಟರಿ ಆಫ್ ಮಾಡರ್ನ್ ಮಿಲಿಟರಿ ಏರ್‌ಕ್ರಾಫ್ಟ್ ಪ್ರಕಟಿಸಿದ ಇತ್ತೀಚಿನ ಶ್ರೇಯಾಂಕಗಳ ಪ್ರಕಾರ, ಭಾರತ ಅಧಿಕೃತವಾಗಿ ಚೀನಾವನ್ನು ಹಿಂದಿಕ್ಕಿ ವಿಶ್ವದ ಮೂರನೇ ಅತ್ಯಂತ ಶಕ್ತಿಶಾಲಿ ವಾಯುಪಡೆಯಾಗಿದೆ.

ಈಶ್ರೇಯಾಂಕಗಳಪ್ರಕಾರಯುಎಸ್ ವಾಯುಪಡೆಅಗ್ರಸ್ಥಾನದಲ್ಲಿದೆ.ನಂತರದ ಸ್ಥಾನದಲ್ಲಿ ರಷ್ಯಾ ಇದ್ದು, ಈ ವರೆಗೂ ದೀರ್ಘಕಾಲದಿಂದಪ್ರಮುಖವಾಯುಸೇನಾ ಶಕ್ತಿಎಂದುಪರಿಗಣಿಸಲ್ಪಟ್ಟಚೀನಾಈಗ ನಾಲ್ಕನೇ ಸ್ಥಾನಕ್ಕೆ ಕುಸಿದಿದೆ.

ಶ್ರೇಯಾಂಕದಲ್ಲಿನ ಭಾರತದ ಸ್ಥಾನ ಸುಧಾರಣೆ ಬೆಳೆಯುತ್ತಿರುವ ಫ್ಲೀಟ್ ಮತ್ತು ತಾಂತ್ರಿಕ ಸಾಮರ್ಥ್ಯಗಳನ್ನು ಮಾತ್ರವಲ್ಲದೆಅದರವಾಯುಪಡೆಯ ಕಾರ್ಯಾಚರಣೆಯಪರಿಣಾಮಕಾರಿತ್ವವನ್ನೂ ಪ್ರತಿಬಿಂಬಿಸುತ್ತದೆ. ಮೇ ತಿಂಗಳಲ್ಲಿ ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯಪಡೆಗಳುಪಾಕಿಸ್ತಾನಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಪ್ರಮುಖಮೂಲಸೌಕರ್ಯಗಳಮೇಲೆ ನಿಖರವಾದದಾಳಿಗಳನ್ನುನಡೆಸಿದಾಗ, ಕಾರ್ಯತಂತ್ರದವ್ಯಾಪ್ತಿಮತ್ತುಯುದ್ಧ ಸಿದ್ಧತೆಯನ್ನುಪ್ರದರ್ಶಿಸಿದ್ದುಗಮನಾರ್ಹ ಉದಾಹರಣೆಯಾಗಿ ಕಂಡುಬಂದಿದೆ.

ಈ ಮೈಲಿಗಲ್ಲು ಪ್ರಾದೇಶಿಕ ಮತ್ತು ಜಾಗತಿಕವಾಯುಶಕ್ತಿಚಲನಶೀಲತೆಯಲ್ಲಿ ಭಾರತದವಿಸ್ತರಿಸುತ್ತಿರುವಪ್ರಭಾವವನ್ನು ಎತ್ತಿತೋರಿಸುತ್ತದೆ,ಇದುದಕ್ಷಿಣಏಷ್ಯಾದ ಮಿಲಿಟರಿ ಸಾಮರ್ಥ್ಯಗಳಲ್ಲಿ ಹೊಸ ಅಧ್ಯಾಯವನ್ನು ಸೂಚಿಸುತ್ತದೆ.

ವರ್ಲ್ಡ್ ಡೈರೆಕ್ಟರಿ ಆಫ್ ಮಾಡರ್ನ್ ಮಿಲಿಟರಿಏರ್‌ಕ್ರಾಫ್ಟ್ಶ್ರೇಯಾಂಕಗಳು 103 ದೇಶಗಳು ಮತ್ತು 129 ವಾಯು ಸೇವೆಗಳನ್ನು ಒಳಗೊಂಡಿವೆ – ಸೈನ್ಯ, ನೌಕಾಪಡೆ ಮತ್ತು ಸಮುದ್ರ ವಾಯುಯಾನಶಾಖೆಗಳುಸೇರಿದಂತೆ – ಮತ್ತು ವಿಶ್ವಾದ್ಯಂತ ಒಟ್ಟು 48,082 ವಿಮಾನಗಳನ್ನು ಟ್ರ್ಯಾಕ್ ಮಾಡುತ್ತವೆ. ಜಾಗತಿಕಮಿಲಿಟರಿಕಾರ್ಯತಂತ್ರದಲ್ಲಿ ವಾಯುಬಲನಿರ್ಣಾಯಕಅಂಶವಾಗಿ ಉಳಿದಿದೆ. ರಷ್ಯಾ, ಚೀನಾ, ಭಾರತ, ದಕ್ಷಿಣಕೊರಿಯಾಮತ್ತುಜಪಾನ್ ಗಳಸಂಯೋಜಿತನೌಕಾಪಡೆಗಳನ್ನು ಮೀರಿಸುವುದರೊಂದಿಗೆಯುನೈಟೆಡ್ ಸ್ಟೇಟ್ಸ್ ಮುನ್ನಡೆ ಸಾಧಿಸುತ್ತಲೇ ಇದೆ. ಜಾಗತಿಕ ಮಿಲಿಟರಿ ವೆಚ್ಚದ ಸುಮಾರು 40 ಪ್ರತಿಶತದಷ್ಟು ವೆಚ್ಚಯುನೈಟೆಡ್‌ಸ್ಟೇಟ್ಸ್ ನಲ್ಲಿ ಕೇಂದ್ರೀಕೃತವಾಗಿರುವುದು ಈ ಪ್ರಾಬಲ್ಯಕ್ಕೆ ಕಾರಣವಾಗಿದೆ.

ಹೆಚ್ಚುತ್ತಿರುವಭೌಗೋಳಿಕರಾಜಕೀಯ ಉದ್ವಿಗ್ನತೆಗಳನಡುವೆಭಾರತಮತ್ತು ಚೀನಾದಂತಹರಾಷ್ಟ್ರಗಳುತಮ್ಮ ವಾಯುಪಡೆಗಳನ್ನು ವೇಗವಾಗಿ ಆಧುನೀಕರಿಸುತ್ತಿವೆ. ಪ್ರಮುಖ ಜಾಗತಿಕಮುಕ್ತ-ಮೂಲರಕ್ಷಣಾ ಗುಪ್ತಚರಪೂರೈಕೆದಾರಜೇನ್ಸ್ , ಜಾಗತಿಕರಕ್ಷಣಾವೆಚ್ಚವುವರ್ಷದ ಅಂತ್ಯದವೇಳೆಗೆಕೇಡಾ3.6 ರಷ್ಟು ಏರಿಕೆಯಾಗಬಹುದುಮತ್ತುಸ

ಒಂದನೇ ಪುಟದಿಂದ

ಎನ್ನುವುದು ಸರ್ಕಾರದ ಬದ್ಧತೆ:ಸಿಎಂ

ಪ್ರತಿನಿತ್ಯ ಜಗತ್ತಿನಲ್ಲಿ 19,700 ಮಂದಿ ಹಸಿವಿನಿಂದ ಸಾವನ್ನಪ್ಪುತ್ತಿದ್ದಾರೆ. ಆದರೆ ಅನ್ನದಮಹತ್ವವನ್ನು ಅರಿಯದೇಬಹಳಷ್ಟುಮಂದಿಅನ್ನವನ್ನು ವಿನಾಕಾರಣವ್ಯರ್ಥ ಮಾಡುತ್ತಿದ್ದಾರೆ. ಬಹಳ ಹಿಂದೆಯೇ ಅನ್ನ ಮತ್ತು ರೈತರ ಬಗ್ಗೆ ವ್ಯಾಖ್ಯಾನ ನಡೆದಿದೆ ಆದ್ದರಿಂದ ಅನ್ನ ವ್ಯರ್ಥ ಮಾಡುವುದು, ಬಿಸಾಡುವುದು ಅನ್ನಬ್ರಹ್ಮನಿಗೆ ಮಾಡುವ ಅವಮಾನ. ನನಗೆ ಹಸಿವಿನಸಂಕಟ, ಅನ್ನದ ಮೌಲ್ಯ ಗೊತ್ತಿರುವುದರಿಂದ ಕರ್ನಾಟಕ ರಾಜ್ಯವನ್ನು ಹಸಿವುಮುಕ್ತ ರಾಜ್ಯವನ್ನಾಗಿಮಾಡಲುರಾಜ್ಯದಲ್ಲಿಅನ್ನಭಾಗ್ಯ ಯೋಜನೆ ಜಾರಿಗೆ ತರಲಾಗಿದೆ. ಮೊದಲು 5 ಕೆಜಿ ಅಕ್ಕಿ ನೀಡಲಾಗುತ್ತಿತ್ತು. ಈಗ 10 ಕೆಜಿ ಅಕ್ಕಿ ನೀಡಲಾಗುತ್ತಿದೆ ಎಂದರು.

ಐದು ಕೆಜಿ ಅಕ್ಕಿ ಜೊತೆಗೆ ಉಳಿದ ಐದು ಕೆಜಿ ಬೇಳೆ ಕಾಳು, ಸಕ್ಕರೆ, ಉಪ್ಪು, ಅಡುಗೆ ಎಣ್ಣೆ ಕೊಡಲು ತೀರ್ಮಾನ:

ಇತ್ತೀಚೆಗೆಕಾಳಸಂತೆಯಲ್ಲಿಅಕ್ಕಿಮಾರಾಟವಾಗುವುದುಕಂಡುಬಂದಿರುವುದರಿಂದ ಐದು ಕೆಜಿ ಅಕ್ಕಿ ಜೊತೆಗೆ ಉಳಿದ ಐದು ಕೆಜಿ ಬೇಳೆ ಕಾಳು, ಸಕ್ಕರೆ, ಉಪ್ಪು, ಅಡುಗೆ ಎಣ್ಣೆಯಂತಹ ಪೌಷ್ಟಿಕ ಆಹಾರ ಕೊಡಲು ತೀರ್ಮಾನಿಸಲಾಗಿದೆ. ಅನ್ನಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ ಕಾಳ ಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

ನಾವು ಒಂದು ಕಾಲದಲ್ಲಿ ಅನ್ನಕ್ಕಾಗಿ ಅಮೆರಿಕದ ಮೇಲೆ ಅವಲಂಬಿತರಾಗಿದ್ದೆವು. ಈಗ ವಿದೇಶಗಳಿಗೆ ರಫ್ತು ಮಾಡುವ ಮಟ್ಟಕ್ಕೆ ಪ್ರಗತಿ ಸಾಧಿಸಿದ್ದೇವೆ. ಇದರ ಜೊತೆಗೆ ಮದುವೆ, ಹೋಟೆಲ್, ಸಮಾರಂಭಗಳಲ್ಲಿ ಊಟ ವ್ಯರ್ಥ ಮಾಡುವ ಪ್ರಮಾಣವೂ ಹೆಚ್ಚಾಗುತ್ತಿರುವುದುಬೇಸರದಸಂಗತಿ. ಜಿಕೆವಿಕೆವಿಶ್ವವಿದ್ಯಾಲಯದವರುಅಧ್ಯಯನ ಮಾಡಿದ್ದಾರೆ. ಬೆಂಗಳೂರುಒಂದರಲ್ಲೇಪ್ರತೀವರ್ಷ 943 ಟನ್ ಆಹಾರವ್ಯರ್ಥವಾಗುತ್ತಿದೆ. ಹೆಚ್ಚು-ಕಡಿಮೆ 360 ಕೋಟಿ ಮೌಲ್ಯದ ಆಹಾರವನ್ನು ವ್ಯರ್ಥ ಮಾಡುತ್ತಿದ್ದೇವೆ. ಅನ್ನದ ಮೇಲೆ ತೋರಿಸುವ ಅಹಂಕಾರ. ಅನ್ನ ವ್ಯರ್ಥ ಮಾಡುವುದು ಪಾಪದ ಕೆಲಸ ಎಂದು ಮಹಾತ್ಮ ಗಾಂಧಿ ಹೇಳಿದ್ದಾರೆ ಎಂದರು.

ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ನಮ್ಮ ಸರ್ಕಾರದ ಬದ್ಧತೆ :

ಯಾರೂ ಹಸಿವಿನಿಂದ ಮಲಗಬಾರದು ಎನ್ನುವುದು ಸರ್ಕಾರದ ಕಾಳಜಿ ಮತ್ತು ಬದ್ಧತೆಯಾಗಿದೆ. ಹೀಗಾಗಿಬಡವರಪರವಾಗಿಕಾರ್ಯಕ್ರಮಗಳನ್ನು ಜಾರಿಗೆತಂದಿದ್ದು ನಮ್ಮ ಸರ್ಕಾರ. 2013ರಲ್ಲಿ ನಮ್ಮ ಪ್ರಧಾನ ಮಂತ್ರಿಗಳಾಗಿದ್ದ ದಿವಂಗತ ಡಾ. ಮನಮೋಹನ್ ಸಿಂಗ್ ಅವರು ಆಹಾರ ಭದ್ರತೆ ಕಾಯ್ದೆಯನ್ನು ಜಾರಿಗೆ ತಂದರು. ಆಹಾರದ ಬಗ್ಗೆ ಜಾಗ್ರತೆ, ಸಣ್ಣ ರೈತರ ರಕ್ಷಣೆ ಮಾಡುವುದು ನಮ್ಮೆಲ್ಲರ ಸಮಾಜದ ಜವಾಬ್ದಾರಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಇದೇಸಂದರ್ಭದಲ್ಲಿಅನ್ನಸುವಿಧಾಯೋಜನೆಯಪೋಸ್ಟರ್ ಬಿಡುಗಡೆಮಾಡಿದರು.

ಕಾಯಕ್ರಮದಲ್ಲಿ ಗೌರವ ಉಪಸ್ಥಿತಿ ವಹಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿಕುಮಾರ್ ಅವರು ಮಾತನಾಡಿ, ನಾವು ಪ್ರಕೃತಿ ನಿಯಮದಲ್ಲಿ ಬದುಕುತ್ತಿದ್ದೇವೆ. ಗಾಳಿ, ಸೂರ್ಯ, ನೀರಿನ ಜೊತೆಗೆ ಹೊಟ್ಟೆಗೆ ಆಹಾರ ಇಲ್ಲದಿದ್ದರೆ ನಿಲ್ಲಲು ಶಕ್ತಿ ಇರುವುದಿಲ್ಲ. ಆಹಾರ ಬಹಳ ಮುಖ್ಯ. ಹಸಿದವರಿಗೆ ಮಾತ್ರ ಗೊತ್ತು ಅದರ ಬೆಲೆ. ಇಂದು ನಾವೆಲ್ಲಾಮಾಡುವುದು ಗೇಣು ಹೊಟ್ಟೆಗಾಗಿ, ಗೇಣು ಬಟ್ಟೆಗಾಗಿ ಎಂದರು.

ನಮ್ಮ ಸರ್ಕಾರವುಜನರಿಗೆಪೌಷ್ಟಿಕಾಂಶಒದಗಿಸುವಉದ್ದೇಶದಿಂದವಿವಿಧಬಗೆಯ ಆಹಾರ ಪದಾರ್ಥಗಳುಳ್ಳ ಇಂದಿರಾ ಆಹಾರ ಕಿಟ್‌ನ್ನು ನೀಡಲು ತೀರ್ಮಾನಿಸಿದೆ. ಸರ್ಕಾರವು ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರಿಗೆ ಶಕ್ತಿ ನೀಡಿದೆ. ಅಲ್ಲದೆ ಆರ್ಥಿಕವಾಗಿ ಸದೃಢರಾಗುತ್ತಿದ್ದಾರೆ. ಅನೇಕ ಬಡವರಿಗೆ ಇದರಿಂದ ಸಹಾಯವಾಗುತ್ತಿದೆ. ಇಡೀದೇಶಕ್ಕೆಕರ್ನಾಟಕದಯೋಜನೆಗಳುಮಾದರಿಯಾಗಿವೆ. ಕಾನೂನಿನ ಚೌಕಟ್ಟಿನಡಿಯಲ್ಲಿಯೆ ನಾವು ಕಾರ್ಯಕ್ರಮ ರೂಪಿಸುತ್ತಿದ್ದೇವೆ. ಒಂದು ಹನಿನೀರಿಗೆನೀಡುವಗೌರವವನ್ನು, ಒಂದು ಅಗಳು ಅನ್ನಕ್ಕೂ ನೀಡಬೇಕು ಎಂದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳುಮತ್ತುಕಾನೂನುಮಾಪನಶಾಸ್ತ್ರ ಸಚಿವರಾದಕೆ.ಹೆಚ್. ಮುನಿಯಪ್ಪ ಅವರು, ವಿಶ್ವ ಆಹಾರ ದಿನಾಚರಣೆಯನ್ನು ಪ್ರತಿ ವರ್ಷ ಅಕ್ಟೋಬರ್ 16 ರಂದು ಆಹಾರ ಮತು ಕೃಷಿ ಸಂಸ್ಥೆಯ ಸ್ಥಾಪನೆಯ ನೆನಪಿಗಾಗಿ ಆಚರಿಸಲಾಗುತ್ತಿದೆ. ಈ ವರ್ಷ ಉತ್ತಮ ಆಹಾರಗಳು ಮತ್ತು ಉತ್ತಮ ಭವಿಷ್ಯಕ್ಕಾಗಿ ಕೈ ಜೋಡಿಸಿ ಎಂಬ ಧ್ಯೇಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಭಾರತದೇಶದಲ್ಲಿಯೂಸಹಬಡವರಿಗೆಆಹಾರಭದ್ರತೆಯನ್ನುಖಾತರಿಪಡಿಸಲು 2013ರಲ್ಲಿಕೇಂದ್ರ ಯುಪಿಎಸರ್ಕಾರವುಆಹಾರಭದ್ರತಾಕಾಯಿದೆಯನ್ನು ಜಾರಿಗೆ ತಂದಿತು. ಅದೇ ರೀತಿ ಕರ್ನಾಟಕದಲ್ಲಿ 2013ರಲ್ಲಿ ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಯಿತು. ಜುಲೈ 2023 ರಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಮಾಹೆ 10 ಕೆಜಿ ಆಹಾರ ಧಾನ್ಯಗಳನ್ನು ಉಚಿತವಾಗಿ ನೀಡುತ್ತಿದ್ದು, ಈವರೆಗೆ ನಮ್ಮ ಸರ್ಕಾರವು15134.88 ಕೋಟಿಗಳಷ್ಟುವೆಚ್ಚಮಾಡಲಾಗಿದ್ದು, ಹಸಿವುಮುಕ್ತಕರ್ನಾಟಕ ನಿರ್ಮಾಣ ಮಾಡಿ ಪೌಷ್ಟಿಕಾಂಶ ಆಹಾರ ಒದಗಿಸುವುದೇ ಇದರ ಉದ್ದೇಶವಾಗಿದೆ. ಅನ್ನ ಪೋಲಾಗುವುದನ್ನು ತಡೆಯಲು ಕಾನೂನು ರೂಪಿಸಬೇಕು ಎಂದರು.

ಕಾರ್ಯಕ್ರಮದಲ್ಲಿವಸತಿ, ವಕ್ಫ್, ಅಲ್ಪಸಂಖ್ಯಾತರಕಲ್ಯಾಣಸಚಿವಬಿ.ಝಡ್. ಜಮೀರ್ ಅಹಮದ್‌ಖಾನ್, ವಿಧಾನ ಪರಿಷತ್ ಸದಸ್ಯ ರವಿ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ಶಾಸಕರಾದ ರವಿ, ಬಸವಣಗೌಡ ಬಾದರ್ಲಿ, ಶ್ರೀನಿವಾಸ್, ಆರ್ಯ ವೈಶ್ಯ ನಿಗಮದ ಅಧ್ಯಕ್ಷರಾದ ರಾಮಪ್ರಸಾದ್, ಆಹಾರಇಲಾಖೆಯಆಯುಕ್ತರಾದವಾಸಿರೆಡ್ಡಿಜೋತ್ಸ್ನ ನಾ,ವ್ಯವಸ್ಥಾಪಕನಿರ್ದೇಶಕರಾದ ಜಗದೀಶ್, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿಯಂತ್ರಕ ಬಾಬು, ಮತ್ತಿತರ ಗಣ್ಯರು ಹಾಗೂ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಏಲೀನ ಮಾಡಲು ಶಿಫಾರಸು

ಮುಚ್ಚಲು ಶಿಫಾರಸು ಮಾಡಲಾದ 7 ಬೋರ್ಡ್ ಕಾರ್ಪೋರೇಷನ್‌ಗಳು

1.ಕರ್ನಾಟಕ ರಾಜ್ಯ ಸಮಾಜಕಲ್ಯಾಣ ಮಂಡಳಿ
2.ಕರ್ನಾಟಕ ರಾಜ್ಯ ಸಂಯಮ ಮಂಡಳಿ
3.ಕರ್ನಾಟಕ ಸಹಕಾರಿ ಕೋಳಿ ಸಾಕಾಣಿಕೆ ಒಕ್ಕೂಟ
4.ಕರ್ನಾಟಕ ವುಲ್ಪ್ ವುಡ್ ಲಿಮಿಟೆಡ್
5.ಕರ್ನಾಟಕ ರಾಜ್ಯ ಅಗ್ರೋ-ಕಾರ್ನ್ ಪ್ರಾಡಕ್ಟ್ ಲಿಮಿಟೆಡ್
6.ಮೈಸೂರು ಲ್ಯಾಂಪ್ ವರ್ಕ್ಸ್ ಲಿಮಿಟೆಡ್
7.ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಷನ್ ಲಿಮಿಟೆಡ್

ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್

ಸಮಸ್ಯೆ ಬಗೆಹರಿಸಿಕೊಳ್ಳಬೇಕು ಹಾಗೂ ವೇಗದ ಗತಿಯಲ್ಲಿ ನೋಂದಣಿ ಪ್ರಕ್ರಿಯೆಯಾಗಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಡಾ.ಗಿರೀಶ್ ಬದೋಲೆ, ಅಪರಜಿಲ್ಲಾಧಿಕಾರಿಶಿವಾನಂದ ಕರಾಳೆ, ಮಹಾನಗರ ಪಾಲಿಕೆ ಆಯುಕ್ತೆ ರಮ್ಯಾ ರಂಗನಾಥ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬಸವಕಲ್ಯಾಣ ಸಹಾಯಕ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮುಕ್ಕಣ್ಣ ಕರಿಗಾರ, ಮಾಸ್ಟರ್ ಟ್ರೈನರ್ ಗೌತಮ್ ಅರಳಿ, ಜಿಲ್ಲೆಯ ಎಲ್ಲಾತಾಲೂಕುಗಳತಹಸಿಲ್ದಾರರು, ತಾಲೂಕು ಪಂಚಾಯತ ಇಓಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಚುನಾವಣೆ ಶಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸಲಹೆ

ಇರಲಿ ರೈತರು ಆಯಾ ಉತ್ಪನ್ನವನ್ನು ನೇರವಾಗಿ ಮಾರುಕಟ್ಟೆಗೆ ಸಾಗಿಸದೇ ಸಂಸ್ಕರಣೆಗೊಳಪಡಿಸಿ ಪ್ಯಾಕೇಟ್ ಅಥವಾ ಬೇರೆ ಬೇರೆ ರೂಪದಲ್ಲಿ ಮಾರಾಟ ಮಾಡಿದಲ್ಲಿ ಉತ್ತಮ ಬೆಲೆ ಸಿಗಲಿದೆ. ಈ ದಿಶೆಯಲ್ಲಿ ಯೋಚಿಸಿ ಕೇಂದ್ರ ಸರ್ಕಾರವು ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಹೆಚ್ಚಿನ ಒತ್ತು ನೀಡುತ್ತಿದೆ. ಇದರ ಭಾಗವಾಗಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾಜಿಲ್ಲೆಗಳಲ್ಲಿಕೃಷಿಸಂಸ್ಕರಣೆಗಾಗಿ ರೈತರತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಕ್ಕೆಹಸಿರುನಿಸಾನೆತೋರಲಾಗಿದೆ. ರೈತರುಈಕೃಷಿ ಸಂಸ್ಕರಣಾ ಘಟಕಗಳ ಸದುಪಯೋಗ ಪಡೆಯಬೇಕು ಎಂದು ಸಲಹೆ ಮಾಡಿದರು.

ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್) ನಮ್ಮೊಂದಿಗೆ ಕೈಜೋಡಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ರಾಜ್ಯ ಕೇಂದ್ರದಲ್ಲಿನ ಉನ್ನತ ಮಟ್ಟದ ಅಧಿಕಾರಿಗಳು, ಜಿಲ್ಲಾ ಕೇಂದ್ರದಲ್ಲಿನ ಜಿಲ್ಲಾಧಿಕಾರಿಗಳು, ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೃಷಿ ಅಧಿಕಾರಿಗಳು ಇಂತಹ ಕೃಷಿ ಸಂಸ್ಕರಣಾ ಘಟಕಗಳ ಬಲವರ್ಧನೆಯ ಬಗ್ಗೆ ಗಮನ ಹರಿಸಬೇಕು ಎಂದು ಅವರು ಸಲಹೆ ಮಾಡಿದರು.

ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿ ಚುನಾವಣೆ:

ಅ.23 ರಂದು ಮತದಾನಕ್ಕೆ ದಿನಾಂಕ ನಿಗದಿ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.16: ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ 'ಅ' ವರ್ಗದ ಕಬ್ಬುಬೆಳೆಗಾರರ ಮತಕ್ಷೇತ್ರದ ಮತದಾನ ಅಕ್ಟೋಬರ್. 23 ರ ಬೆಳಿಗ್ಗೆ 9 ರಿಂದ ಸಾಯಂಕಾಲ 4 ಗಂಟೆಯವರೆಗೆ ಇಮಾಮಪೂರ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಆವರಣದಲ್ಲಿನಡೆಯಲಿದೆ ಎಂದು ಇಮಾಮಪೂರ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಹಾಗೂ ಬೀದರ ಸಹಾಯಕ ಆಯುಕ್ತರು ಪ್ರಕಟಣೆಯಲ್ಲಿತಿಳಿಸಿದ್ದಾರೆ.ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ, ನಿ. ಇಮಾಮಪೂರ, ಬೀದರ ಇದರ ಆಡಳಿತ ಮಂಡಳಿಯ ನಿರ್ದೇಶಕರ ಸಾಮಾನ್ಯ ಚುನಾವಣೆ-2025 ನಡೆಸಲು ದಿನಾಂಕ: 10.09.2025 ರಂದು ಹೊರಡಿಸಿದ ಅಧಿಸೂಚನೆಕ್ಕೆಪ್ರಶ್ನಿಸಿ ಮಾನ್ಯ ಉಚ್ಚನ್ಯಾಯಾಲಯ ಕಲಬುರಗಿ ಪೀಠ ಕಲಬುರಗಿ ಯಲ್ಲಿ ರೀಟ್ ಪಿಟಿಷನ್ ಸಂಖ್ಯೆ: 202986/2025 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯ ಸದರಿ ಚುನಾವಣೆ ಪ್ರಕ್ರೀಯೆಗೆ ತಡೆಯಾಜ್ಞೆ ನೀಡಿರುವುದರಿಂದ ದಿನಾಂಕ: 27.09.2025 ರಂದು ನಿಗದಿ ಪಡಿಸಿದ ಮತದಾನವನ್ನು ನಡೆದಿರುವುದಿಲ್ಲಾ, ನಂತರ ಈವಾಗ ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯ ನೀಡಿರುವ ತಡೆಯಾಜ್ಞೆಯನ್ನತೆರವುಗೊಳಿಸಲಾಗಿರುತ್ತದೆ. ಆದುದ್ದರಿಂದ ಸದರಿ ಕಾರ್ಖಾನೆಯ ಚುನಾವಣೆ ಯಾವ ಹಂತದಲ್ಲಿ ನಿಂತಿದ್ದು ಅದೇ ಹಂತದಿಂದ ಪ್ರಾರಂಭಿಸಿ 15 ದಿನಗಳೊಳಗಾಗಿ ನಿಯಮಾನುಸಾರ ಫಲಿತಾಂಷ ಘೋಷಿಸಲು ಮಲ್ಲಿಕಾರ್ಜುನ ಸಾಹುಕಾರ ಸರ್ಕಾರಿ ವಕೀಲರು ಉಚ್ಚ ನ್ಯಾಯಾಲಯ ಕಲಬುರಗಿ ರವರು ಇ-ಮೇಲ್ ಸಂದೇಶ ದಿನಾಂಕ: 15.10.2025 ರ ಮೂಲಕ ಸೂಚಿಸಿರುತ್ತಾರೆ. ಆದ್ದರಿಂದ ಅಕ್ಟೋಬರ್.23 ರಂದು ನಡೆಯುವ ಮತಕೇಂದ್ರಗಳಲ್ಲಿಹಾಗೂ ಮತದಾನ ನಡೆಯುವ ಆವರಣದಲ್ಲಿ ಸೂಕ್ತ ವ್ಯವಸ್ಥೆ ಮಾಡಲಾಗಿದೆ. ಮತ ಚಲಾಯಿಸಲು ಬರುವ ಮತದಾರರು ಕಾರ್ಖಾನೆಯಿಂದ ಜಾರಿಯಾದ ಅಧಿಕೃತ ಗುರುತಿನ ಚೀಟಿ ತಂದು ಮತ ಚಲಾವಣೆ ಮಾಡತಕ್ಕದ್ದು. ಮತದಾನ ಸುಗಮವಾಗಿ ನಡೆಸುವ ಸಂಬಂಧ ಸಕಲ ಸಿದ್ಧತೆ ಹಾಗೂ ಸೂಕ್ತ ಪೊಲೀಸ್ ಬಂದೊಬಸ್ತ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಅಭಿಯಂತರರ ದಿನಾಚರಣೆ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಅ.16:ಪಟ್ಟಣದ ಟೌನಹಾಲ್‌ನಲ್ಲಿ ನಾಳೆ ಶನಿವಾರ ಅ.18 ರಂದು ಮುಂಜಾನೆ ಸಿವಿಲ್ ಇಂಜಿನೀಯರ್ ಸಂಘದವತಿಯಿಂದ ಹಮ್ಮಿಕೊಂಡ ಅಭಿಯಂತರರ್(ಇಂಜಿನೀರ್) ದಿನಾಚರಣೆ ಮತ್ತು ಅಸೋಸಿಯೇಶನ್ ಆಫ್ ಕನಸಲ್ಟಿಂಗ್ ಸಿವಿಲ್ ಇಂಜಿನೀಯರ್ (ಎಸಿಸಿಇ) ಸಂಘದ ಉದ್ಘಾಟನೆಯನ್ನು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಸಾನಿಧ್ಯದಲ್ಲಿ,ಜಿಲ್ಲಾಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಲಿದ್ದಾರೆ. ಸಂಸದ ಸಾಗರ ಖಂಡ್ರೆ,ಬೀದರನ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಶಿವಶಂಕರ ಕಾಮಶೆಟ್ಟಿ,ಭಾಲ್ಕಿಯ ಸಹಾಯಕ ಕಾರ್ಯಪಾಲಕ ಅಭಿಯಂತರ ಅಲ್ತಾಫ್,ನಿವೃತ್ತ ಪ್ರಾಂಶುಪಾಲ ಅಶೋಕ ರಾಜೋಳೆ ಉಪಸ್ಥಿತರಿರಲಿದ್ದಾರೆ ಎಂದು ಎಸಿಸಿಇ ಸಂಘದ ಅಧ್ಯಕ್ಷ ರಾಘವೇಂದ್ರ ಪ್ರಸಣ್ಣೆ ತಿಳಿಸಿದ್ದಾರೆ.

ಕಬಡ್ಡಿ ಸ್ಪರ್ಧೆಯಲ್ಲಿ ವಿಭಾಗಮಟ್ಟಕ್ಕೆ ಆಯ್ಕೆಯಾದ ಗುರುಕುಲ ತಂಡ

ಒಂದನೇ ಪುಟದಿಂದ

ಚಟುವಟಿಕೆಗಳಿಗೆ ಮೂಗುದಾರ

ಆರ್‌ಎಸ್‌ಎಸ್ ಮಾತ್ರವಲ್ಲಖಾಸಗಿ ಸಂಘ ಸಂಸ್ಥೆಗಳು / ಸಂಘಟನೆಗಳು ಸರ್ಕಾರಿಸ್ಥಳಗಳಲ್ಲಿಚಟುವಟಿಕೆಗಳನ್ನು ನಡೆಸುವುದಕ್ಕೆಕಡಿವಾಣಬೀಳಲಿದೆ. ಯಾರೇ ಯಾವುದೇ ಕಾರ್ಯಕ್ರಮ ಮಾಡುವುದಾದರೂ ಅನುಮತಿ ಪಡೆಯಬೇಕಾಗುತ್ತದೆ.

ಸರ್ಕಾರಿ ಜಾಗಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗೆ ನಿಯಂತ್ರಣ ಮಾಡುವಂತೆಐಟಿಬಿಟಿಸಚಿವಪ್ರಿಯಾಂಕ್ ಖರ್ಗೆ ಸಿದ್ದರಾಮಯ್ಯನವರಿಗೆ ಪತ್ರ ಬರೆದಿದ್ದರು.

ಜನಸಮುದಾಯದಲ್ಲಿದ್ವೇಷ ಬಿತ್ತುವ ವಿಭಜಕ ಶಕ್ತಿಗಳು ತಲೆ ಎತ್ತಿದಾಗ ಅವುಗಳನ್ನು ನಿಗ್ರಹಿಸುವುದಕ್ಕಾಗಿಹಾಗೂದೇಶದಜಾತ್ಯತೀತಮೌಲ್ಯಗಳನ್ನು ಎತ್ತಿಹಿಡಿಯುವುದಕ್ಕಾಗಿಸಮಗ್ರತೆ, ಸಮಾನತೆಮತ್ತು ಏಕತೆಯಮೂಲಭೂತ ತತ್ವಗಳನ್ನೊಳಗೊಂಡ ಸಂವಿಧಾನವು ನಮಗೆ ಸರಕಾರವನ್ನು ನೀಡುತ್ತದೆ.

ರಾಷ್ಟ್ರೀಯ ಸ್ವಯಂ ಸೇವಕ ಸಂಘ ಎಂಬ ಹೆಸರಿನ ಸಂಘಟನೆಯು ಸರ್ಕಾರಿ ಮತ್ತು ಅನುದಾನಿತ ಶಾಲೆಗಳು ಹಾಗೂ ಸಾರ್ವಜನಿಕ ಸರ್ಕಾರಿ ಮೈದಾನಗಳನ್ನು ಬಳಸಿಕೊಂಡು ಶಾಖೆ ನಡೆಸುತ್ತಾ, ಘೋಷಣೆಗಳನ್ನು ಕೂಗುತ್ತಾ ಮಕ್ಕಳುಮತ್ತು ಯುವಸಮುದಾಯದಮನಸ್ಸಿ ನಲ್ಲಿಭಾರತದ ಏಕತೆಯ ವಿರುದ್ಧವಾಗಿ, ಹಾಗೂ ಸಂವಿಧಾನದ ಆಶಯಗಳ ವಿರುದ್ಧವಾಗಿ ನಕಾರಾತ್ಮಕ ಆಲೋಚನೆಗಳನ್ನು ತುಂಬಲಾಗುತ್ತಿದೆ.

ಪೊಲೀಸ್ ಅನುಮತಿಪಡೆಯದೆದೊಣ್ಣೆಗಳನ್ನುಹಿಡಿದು ಆಕ್ರಮಣಕಾರಿ ಪ್ರದರ್ಶನ ನಡೆಸುವ ಮೂಲಕ ಮುಗ್ಧ ಮಕ್ಕಳು ಹಾಡಿ ಯುವಜನರ ಮನಸಿನ ಮೇಲೆ ದುಷ್ಪರಿಣಾಮ ಬೀರಲಾಗುತ್ತಿದೆ. ನಾಡಿನ ಮಕ್ಕಳು, ಯುವ ಸಮುದಾಯ, ಸಾರ್ವಜನಿಕರು ಮತ್ತು ಸಮಾಜದ ಸ್ವಾಸ್ಥ್ಯದ ಹಿತದೃಷ್ಟಿಯಿಂದ ಸರ್ಕಾರಿ ಶಾಲೆಗಳು ಹಾಗೂ ಸರ್ಕಾರದ ಅನುದಾನಿತ ಶಾಲೆಗಳು ಮತ್ತು ಮೈದಾನಗಳು, ಉದ್ಯಾನವನಗಳು, ಮುಜರಾಯಿ ಇಲಾಖೆಯದೇವಸ್ಥಾನಗಳು, ಪುರಾತತ್ವಇಲಾಖೆಯಸ್ಥಳಗಳುಸೇರಿದಂತೆ ಯಾವುದೇಸರ್ಕಾರಿಸ್ಥಳಗಳಲ್ಲಿಸಂಘಟನೆಯುಶಾಖೆ, ಸಾಂಘಿಕ್ ಅಥವಾ ಬೈಠಕ್ ಹೆಸರಲ್ಲಿ ನಡೆಸುವ ಎಲ್ಲಾ ಬಗೆಯ ಚಟುವಟಿಕೆಗಳಿಗೆ ನಿಷೇಧ ಹೇರಬೇಕುಎಂದುತಮ್ಮಲ್ಲಿಕೇಳಿಕೊಳ್ಳುತ್ತೇನೆಎಂದುಸಚಿವಪ್ರಿಯಾಂಕ್ ಖರ್ಗೆ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರು.

ಮೌಲ್ಯವರ್ಧನೆಗೆ ಒತ್ತು ನೀಡಿ

ನಬಾರ್ಡ್ ಪರಿಣತರು ಇದ್ದಾರೆ. ಅನ್ನದಾತರ ಭವಿಷ್ಯಕ್ಕಾಗಿ

ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.16–2025–26ನೇಸಾಲಿನಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಈ ಕೆಳಕಂಡ 13 ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಅಕ್ಟೋಬರ್ 31ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ, ಶಿಶು ಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ ಹಾಗೂ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ದ್ವಿಚಕ್ರ ವಾಹನ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ವಿಕಲಚೇತನ ಫಲಾನುಭವಿಗಳು ಆನ್‌ಲೈನ್ ಮೂಲಕ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಸೇವಾ ಸಿಂಧು https://sevasindhu.karnataka.gov.in/Sevasindhu/DepartmentServices Kannada) ವೆಬ್‌ಸೈಟ್ ದಲ್ಲಿ ಆನ್‌ಲೈನ್ ಮೂಲಕ 2025ರ ಅಕ್ಟೋಬರ್ 31ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಹಾಗೂ ಕಚೇರಿ ಮೊಬೈಲ್ ಸಂಖ್ಯೆ: 08472–235222ಗೆ ಸಂಪರ್ಕಿಸಲು ಕೋರಲಾಗಿದೆ.

ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯಕೇಂದ್ರದಲ್ಲಿ ಗುರುವಾರ ವಿಶ್ವಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಆಡಳಿತ ವೈದ್ಯಾಧಿಕಾರಿ ವಿಜಯಹಿರಸ್ಕರ್ ಮಾನಸಿಕ ಆರೋಗ್ಯದ ಬಗ್ಗೆ ಸವಿಸ್ತಾರವಾಗಿ ವಿವರಿಸಿದರು. ಫಾದರ್ ಜಾರ್ಜ್ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದರು. ಸಿಸ್ಟರ್ ಪ್ರೀತಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ನಸೀರ್ ಖಾನ, ಪುರಸಭೆ ಸದಸ್ಯ ಬಾಬಾ ಆರ್.ಸಿ.ಸಿ., ತಾಲೂಕ ಪಂಚಾಯತ್ ಅಧಿಕಾರಿ ಸಂತೋಷ, ಡಾ. ಪ್ರೀತಿ ವಾಲಿ, ಡಾ. ನಜೀಮಾ ಪಟೇಲ್, ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ದೇವಿಂದ್ರ ನಾಗನಕೇರಾ, ಪ್ರಭು ಮುದನ್ನಾಳಕರ್, ನಂದುಕುಮಾರ್, ಗೀತಾ ತುಳಜೆ, ರೇಖಾ, ಸುಮಾ, ವಂದನಾ, ಸವಿತಾ, ಅಶ್ವಿನಿ, ಸಿದ್ದಲಿಂಗ, ರಾಹುಲ, ಗುಂಡಪ್ಪ, ಅಸ್ಮಾ, ಶಾಂತಮ್ಮ, ಹಲಿಮಾ ಸೇರಿದಂತೆ ಆರ್ಬಿಟ್ ಸಂಸ್ಥೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಅಕ್ಟೋಬರ್ 18 ರಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಕಾರ್ಯಕ್ರಮ

ಕಲಬುರಗಿ,ಅ.16–ಜಿಲ್ಲಾಡಳಿತ ಕಲಬುರಗಿ, ಜಿಲ್ಲಾಡಳಿತ ಯಾದಗಿರಿ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕಲಬುರಗಿ ಮತ್ತು ಯಾದಗಿರಿ ಇವುಗಳ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನೆಲೆಯಲ್ಲಿ ಅಕ್ಟೋಬರ್ 18 ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿ ರಿಂಗ್ ರಸ್ತೆಯ ಕೆ.ಸಿ.ಟಿ. ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪಗೌಡ ದರ್ಶನಾಪೂರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವ ಈಶ್ವರ ಖಂಡ್ರೆ, ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ. ನರೇಂದ್ರ ಸ್ವಾಮಿ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು. ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಶಾಸಕರಾದ ಕನೀಜ್ ಫಾತೀಮಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ, ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ರಾಯಚೂರು ಲೋಕಸಭಾ ಸದಸ್ಯ ಜಿ. ಕುಮಾರ ನಾಯಕ ಹಾಗೂ ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ಅಲ್ಲಮಪ್ರಭು ಪಾಟೀಲ, ಚನ್ನಾರೆಡ್ಡಿ ಪಾಟೀಲ ತುನ್ನೂರ, ಶರಣಗೌಡ ಕಂದಕೂರ, ರಾಜಾ ವೇಣುಗೋಪಾಲ ನಾಯಕ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ, ತಿಮ್ಮಣ್ಣಪ್ಪ ಕಮಕನೂರ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯರಾದ ಶರಣಕುಮಾರ ಮೋದಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕಲಬುರಗಿ ತೊಗರಿ ಮಂಡಳಿ ಅಧ್ಯಕ್ಷ ಸೈಯದ್ ಮಹೆಮೂದ್ ಚಿಸ್ತಿ ಸಾಹೇಬ್, ಕಲಬುರಗಿ ಕಾಡಾ ಅಧ್ಯಕ್ಷ ಬಾಬು ಹುನ್ನಾ ನಾಯಕ್, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಪಾಲ್ಗೊಳ್ಳುವರು.

ಬೆದರಿಕೆ ಹಾಕಿದ್ರೆ ಹೆದರುವ ನಾಯಕ ಪ್ರಿಯಾಂಕ ಖರ್ಗೆ ಅಲ್ಲ ಶರಣು ಸಗರಕರ್ ಹೇಳಿಕೆ!

ಸಚಿವ ಪ್ರಿಯಾಂಕ ಖರ್ಗೆ ಬೆನ್ನಿಗೆ ನಾವಿದ್ದೇವೆ!

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ರಾಷ್ಟ್ರೀಯ ಸ್ವಯಂಸೇವಕ ಸಂಘದ 100 ನೇ ವರ್ಷಾಚರಣೆ ಕಾರ್ಯಕ್ರಮಗಳನ್ನು ಸರಕಾರಿ ಶಾಲೆ, ಕಾಲೇಜು, ಮುಜರಾಯಿ ಇಲಾಖೆ ದೇವಸ್ಥಾನಗಳು, ಸರಕಾರಿ ಜಾಗಗಳಲ್ಲಿ ಮಾಡಲು ಅವಕಾಶ ಮಾಡಿಕೊಡಬಾರದು ಎಂದು ಸಚಿವರಾದ ಪ್ರಿಯಾಂಕ ಖರ್ಗೆ ಅವರು ಸರಕಾರಕ್ಕೆ ಪತ್ರ ಬರೆದ ಹಿನ್ನಲೆ ಬಿಜೆಪಿ, ಸಂಘ ಪರಿವಾರದ ಜನರು ಸಚಿವರ ಬಗ್ಗೆ ವೈಯಕ್ತಿಕ ಟೀಕೆಗೆ ಇಳಿದಿದ್ದಾರೆ. ಇದಕ್ಕೆ ಹೆದರುವ ಗಂಡು ಪ್ರಿಯಾಂಕ ಖರ್ಗೆಯವರು ಅಲ್ಲ ಇಂತಹ ಬಹಳ ಜನರನ್ನು ಅವರು ನೋಡಿದ್ದಾರೆ ಸಚಿವ ಪ್ರಿಯಾಂಕ ಖರ್ಗೆ ಬೆನ್ನಿಗೆ ನಾವಿದ್ದೇವೆ ಎಂದು ಜಿಲ್ಲಾ ಮಾದಿಗ ಸಮನ್ವಯ ಸಮಿತಿಯ ಮಾಜಿ ಅಧ್ಯಕ್ಷರಾದ ಶರಣು ಸಗರಕರ್ ಅವರು ಹೇಳಿದ್ದಾರೆ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಪ್ರಿಯಾಂಕ ಖರ್ಗೆಯವರಿಗೆ ನಿರಂತರವಾಗಿ ದೂರವಾಣಿ ಕರೆ ಮಾಡಿ ಅವಾಚ್ಯ ಪದಗಳಿಂದ ನಿಂದಿಸಿ ಜೀವ ಬೆದರಿಕೆ ಒಡ್ಡುತ್ತಿದ್ದಾರೆ. ಇದು ಪ್ರಜಾಪ್ರಭುತ್ವ ವ್ಯವಸ್ಥೆಯ ವಿರೋಧಿ ನಡೆಯಾಗಿದೆ. ಸೈದ್ಧಾಂತಿಕವಾಗಿ ಎದುರಿಸಲಾಗದ ರಣ–ಹೇಡಿಗಳು ವೈಯಕ್ತಿಕ ನಿಂದನೆಗೆ ಇಳಿದಿದ್ದು ಅತ್ಯಂತ ಹೇಯ ಕೃತ್ಯವಾಗಿದೆ. ಬಿಜೆಪಿ ಕೃಪಾ ಪೋಷಿತ ಉಡಾಳರ ಗುಂಪು ನಿಂದಿಸುವುದು ಬೆದರಿಕೆ ಒಡ್ಡುವುದರಿಂದ ಸಚಿವ ಪ್ರಿಯಾಂಕ ಖರ್ಗೆ ಧೃತಿ ಗೆಡಿಸಬೇಕೆಂದುಕೊಳ್ಳುವುದು ಅವರ ಮೂರ್ಖತನದ ಪರಮಾವಧಿಯಾಗಿದೆ ಎಂದರು. ಪ್ರಿಯಾಂಕ ಖರ್ಗೆ ಸರ್ವ ಜನಾಂಗದ ನಾಯಕರಾಗಿದ್ದಾರೆ. ಅವರು ಹಿಂದೂ ಧರ್ಮದ ವಿರೋಧಿ ಅಲ್ಲ. ಒಂದು ರಾಜಕೀಯ ಸಿದ್ಧಾಂತಕ್ಕೆ ಜನ್ಮ ನೀಡಿದ ಸಂಘದ ವಿರೋಧಿ ಆಗಿದ್ದಾರೆ. ಅದನ್ನು ಧರ್ಮಕ್ಕೆ ಹೋಲಿಕೆ ಮಾಡೋದೆ ಮೂರ್ಖತನ, ಸಚಿವ ಖರ್ಗೆ ಒಂಟಿಯಲ್ಲ ಅವರೊಂದಿಗೆ ನಾಡಿನ ದೇಶದ ಅಸಂಖ್ಯಾತ ದೇಶ ಭಕ್ತರು ಜೊತೆಗಿದ್ದೇವೆ ಎಂದು ಸಗರಕರ್ ಹೇಳಿದರು. ಆರ್.ಎಸ್.ಎಸ್ ಸಂಘಟನೆಯಿಂದ ಕೋಮುವಾದದ ಚಟುವಟಿಕೆಗಳು ರಾಜ್ಯದಲ್ಲಿ ಬಹಳಷ್ಟು ಹೆಚ್ಚಾಗುತ್ತಿದೆ. ಸಚಿವರು ಹೇಳಿರುವಂತೆ ಆರ್ ಎಸ್ ಎಸ್ ಸಂಘಟನೆಯಿಂದ ಮುಗ್ದ ಮಕ್ಕಳು ಹಾಗೂ ಯುವಕರು ಕೋಮುವಾದದ ಅಮಲನ್ನು ಅತಿಯಾಗಿ ಮೈಗುಡಿಸಿಕೊಳ್ಳುತ್ತಿದ್ದಾರೆ ಎಂದು ಶರಣು ಸಗರಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಜೀವ ಬೆದರಿಕೆ ಕ್ರಮಕ್ಕೆ ಎಂಎಲ್‌ಸಿ ಜಗದೇವ ಗುತ್ತೇದಾರ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಆರ್.ಎಸ್.ಎಸ್. ಕಾರ್ಯಕರ್ತರಿಂದ ದೂರವಾಣಿ ಮೂಲಕ ಜೀವಬೆದರಿಕೆ ಬಂದಿರುವ ಕುರಿತು ಕೇಸು ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಜಿಲ್ಲಾ ಪೊಲೀಸ್ ಆಯುಕ್ತರಾದ ಶರಣಪ್ಪ ಢಗೆ ಅವರಿಗೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ ಕಾಳಗಿ ಅವರು ಮನವಿ ಮಾಡಿದರು. ಆರ್.ಎಸ್. ಎಸ್. ಸಂಘ ಪರಿವಾರದವರು "ರಾಷ್ಟ್ರ ರಕ್ಷಣೆ", "ಧರ್ಮ ರಕ್ಷಣೆ" ಮತ್ತು "ಗೋರಕ್ಷಣೆ" ಎಂಬ ಹೆಸರಿನಲ್ಲಿ ಗಣವೇಷಧಾರಿಗಳ ಮೂಲಕ ಕೈಯಲ್ಲಿ ಲಾಠಿ ಹಿಡಿದು ಪಥಸಂಚಲನ ನಡೆಸಿ, ಬೈಠಕ್ ಮಾಡುವ ಹೆಸರಲ್ಲಿ ಸಮಾಜದಲ್ಲಿ ಕೋಮುವಾದಿ ವಿಷಬೀಜ ಬಿತ್ತುವ ಮೂಲಕ ಜನರಲ್ಲಿ ಅಶಾಂತಿ ಉಂಟುಮಾಡುತ್ತಿದ್ದಾರೆ.

ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆ ಅವರು ಸಾರ್ವಜನಿಕವಾಗಿ ಮಾತಾಡಿ, ರಾಜ್ಯದ ಸೌಹಾರ್ದತೆ ಕಾಪಾಡಲು ಕ್ರಮ ಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಈ ನಿಟ್ಟಿನಲ್ಲಿ, ಆರ್.ಎಸ್. ಎಸ್. ಸಂಘದ ಅನಾಮಧೇಯ ವ್ಯಕ್ತಿಯೊಬ್ಬರು ತಮ್ಮ ಮೊಬೈಲ್ ಮೂಲಕ ಸಚಿವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಜೀವಬೆದರಿಕೆ ಹಾಕಿರುವುದು ಅತ್ಯಂತ ಗಂಭೀರ ವಿಷಯವಾಗಿದೆ. ಆದ್ದರಿಂದ, ಈ ದೂರವಾಣಿ ಕರೆ ಮಾಡಿದ ಕಿಡಿಗೇಡಿಗಳನ್ನು ಪತ್ತೆಹಚ್ಚಿ ಬಂಧಿಸಿ, ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿದರು. ಈ ಸಂದರ್ಭದಲ್ಲಿ ಪ್ರವೀಣ ಪಾಟೀಲ ಹರವಾಳ, ಡಾ. ಕಿರಣ ದೇಶಮುಖ, ರಾಜಗೋಪಾಲರೆಡ್ಡಿ, ರೇಣುಕಾ ಸಿಂಗೆ, ಚಂದ್ರಿಕಾ ಪರಮೇಶ್ವರ, ಮಹಾಂತಪ್ಪ ಸಂಗಾವಿ ಸೇರಿದಂತೆ ಇತರರು ಇದ್ದರು.

ಬಡ ರೋಗಿಗೆ ವರದಾನವಾಗಿರುವ ಕಲಬುರಗಿ ಟ್ರಾಮಾ ಸೆಂಟರ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.16–ಕಲಬುರಗಿಯ ಟ್ರಾಮಾ ಸೆಂಟರ್‌ನಲ್ಲಿ ಇದೂವರೆಗೆ 24,743 ಗಾಯಾಳುಗಳಿಗೆ ಗೋಲ್ಡನ್ ಹವರ್‌ನಲ್ಲಿ ಚಿಕಿತ್ಸೆ ನೀಡುವ ಮೂಲಕ ಕಲ್ಯಾಣ ಕರ್ನಾಟಕ ಬಡ ರೋಗಿಗಳಿಗೆ ಇದು ವರದಾನವಾಗಿ ಪರಿಣಮಿಸಿದೆ. ಕಲಬುರಗಿಯ ಜಿಮ್ಸ್ ಆಸ್ಪತ್ರೆ ಅವರಣದಲ್ಲಿ 110 ಹಾಸಿಗೆಗಳ ಸಾಮರ್ಥ್ಯದ ಟ್ರಾಮಾ ಕೇರ್ ಸೆಂಟರ್ 2024ರ ಫೆಬ್ರುವರಿ ರಿಂದ ಕಾರ್ಯರಂಭ ಮಾಡಿದ್ದು, ಇದೂವರೆಗೆ 17,892 ಹೊರ ರೋಗಿಗಳಿಗೆ ಮತ್ತು 6,851 ಒಳರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ. ಇದರಲ್ಲಿ 653 ಮೇಜರ್ ಮತ್ತು 12,895 ಮೈನರ್ ಶಸ್ತ್ರಚಿಕಿತ್ಸೆಗಳನ್ನು ಸಹ ಯಶಸ್ವಿಯಾಗಿ ನಿರ್ವಹಿಸಲಾಗಿದೆ ಎಂದು ಜಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ ಸಿ.ಆರ್. ತಿಳಿಸಿದ್ದಾರೆ.

ಅಕ್ಟೋಬರ್ 17ರಂದು ವಿಶ್ವದಾದ್ಯಂತ ವಿಶ್ವ ಅಪಘಾತ ದಿನಾಚರಣೆಯಾಗಿ ಆಚರಿಸಲಾಗುತ್ತದೆ. ಅದರಂತೆ ಕಲಬುರಗಿ ಜಿಮ್ಸ್ ಆಸ್ಪತ್ರೆಯಲ್ಲಿಯೂ ದಿನಾಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಕಲಬುರಗಿಯ ಟ್ರಾಮಾ ಸೆಂಟರ್ ಕಟ್ಟಡ ವಿನ್ಯಾಸವು ಕರ್ನಾಟಕದಲ್ಲಿಯ ಮಾದರಿಯಾಗಿದೆ. ಆಧುನಿಕ ವೈದ್ಯಕೀಯ ಯಂತ್ರೋಪಕರಣಗಳ ನೆರವಿನಿಂದ ಇಲ್ಲಿ ರೋಗಿಗಳಿಗೆ ಸೇವೆ ನೀಡಲಾಗುತ್ತಿದೆ.

ಅಪಘಾತ ಪ್ರಕರಣಗಳಲ್ಲಿ ಚಿಕಿತ್ಸೆ ನೀಡಲು ಎಲ್ಲಾ ರೀತಿಯ ತುರ್ತು ಸೇವೆಗಳು ಇಲ್ಲಿ ಲಭ್ಯವಿದ್ದು, 24/7 ಮಾದರಿಯಲ್ಲಿ ಜನರಲ್ ಸರ್ಜರಿ, ನ್ಯೂರೋ ಸರ್ಜರಿ, ಕೀಲು ಎಲುಬು, ಅರವಳಿಕೆ, ದಂತ ವಿಭಾಗದ ಮುಖ ಮತ್ತು ದವಡೆಯ ಶಸ್ತ್ರಚಿಕಿತ್ಸಕರು, ರೇಡಿಯೊಲೋಜಿ,, ಯುರೋಲೊಜಿ, ಪ್ಲಾಸ್ಟಿಕ್ ಸರ್ಜರಿ, ವ್ಯಾಸ್ಕುಲರ್ ಸರ್ಜರಿ ವಿಭಾಗದ ನುರಿತ ವೈದ್ಯರ ತಂಡಗಳು ಕಾರ್ಯನಿರ್ವಹಿಸುತ್ತಿವೆ.

ಜಿಮ್ಸ್‌ನಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜನೆ: ಕಲಬುರಗಿ ಜಿಮ್ಸ್ ಬೋಧನಾ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ವಿಭಾಗವು ಕೆ.ಎಸ್.ಸಿ.ಮತ್ತು ಎ.ಎಸ್.ಐ ಕಲಬುರಗಿ ನಗರ ಶಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 17 ರಂದು ಬೆಳಿಗ್ಗೆ 9.30 ಗಂಟೆಗೆ ಜಿಮ್ಸ್ ಆಸ್ಪತ್ರೆಯ 10ನೆಯ ಮಹಡಿಯ ಸಭಾಂಗಣದಲ್ಲಿ "ವಿಶ್ವ ಅಪಘಾತದಿನ" ಅಂಗವಾಗಿ ಜಾಗೃತಿ ಕಾರ್ಯಕ್ರಮ ಆಯೋಜಿಸಿದೆ. "ಅಪಘಾತವನ್ನು ತಡೆಯಿರಿ–ಅಪಘಾತಕ್ಕೆ ಸಿದ್ಧರಾಗ

ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 16 : ಯಾದಗಿರಿ ಜಿಲ್ಲೆಯ ಆರೋಗ್ಯಕೇಂದ್ರಗಳಲ್ಲಿ,ಸಂಘ ಸಂಸ್ಥೆಯವರು,ರಾಜಕಾರಣಿಗಳು, ಗ್ರಾಮದ ಸದಸ್ಯರು ತಮ್ಮ ಸ್ವ–ಇಚ್ಛೆಯಿಂದ ನಿಕ್ಷಯ ಮಿತ್ರರಾಗಿ, ಒಪ್ಪಿಗೆ ನೀಡಿರುವ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ನೀಡಲಾಯಿತು ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳಾದಡಾ.ಸಂಜೀವಕುಮಾರ ರಾಯಚೂರಕರ್ ಅವರು ಹೇಳಿದರು.

ಯಾದಗಿರಿ ನಗರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ 2025ರ ಅಕ್ಟೋಬರ್ 16ರ ಗುರುವಾರ ರಂದು ಇಂದು ನಡೆದ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ವಿತರಿಸಿ ಅವರು ಮಾತನಾಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ,ಸಂಘ ಸಂಸ್ಥೆಯವರು, ರಾಜಕಾರಣಿಗಳು,ಗ್ರಾಮದ ಸದಸ್ಯರು ತಮ್ಮ ಸ್ವ–ಇಚ್ಛೆಯಿಂದ ನಿಕ್ಷಯ ಮಿತ್ರರಾಗಿ, ಒಪ್ಪಿಗೆ ನೀಡಿರುವ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ನೀಡಲು ತಿಳಿಸಿದರು.

ಯಾದಗಿರಿ ಶಂಕ್ರೆಪ್ಪಗೌಡ ಆಸ್ಪತ್ರೆ, ಡಾ.ಮಹದೇವ ರೆಡ್ಡಿ, ಸ್ವ–ಇಚ್ಛೆಯಿಂದ ನಿಕ್ಷಯ ಮಿತ್ರರಾಗಿ, ಒಪ್ಪಿಗೆ ನೀಡಿರುವ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ವಿತರಣೆ ಮಾಡಲಾಯಿತು ಎಂದರು.

ಈ ಸಂದರ್ಭದಲ್ಲಿ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಪ್ರಭಾರಿ ಡಾ.ಜಗನ್ನಾಥರೆಡ್ಡಿ, ವಡಗೇರಾ ಬಸವ ಆಸ್ಪತ್ರೆ ಡಾ.ಜಗದೀಶ ಹಿರೇಮಠ, ವಡಗೇರಾ ಮಕ್ಕಳ ತಜ್ಞರು ಸಮುದಾಯ ಆರೋಗ್ಯ ಕೇಂದ್ರ ಡಾ.ಸುರೇಶ.ಬಿ ಇನ್ನಿತರರು ಉಪಸ್ಥಿತರಿದ್ದರು.

ಪ್ರಗತಿ ಕಾಮಗಾರಿಗಳಿಗೆ ಭೇಟಿ : ಸಿಇಓ ಒರಡಿಯಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 16 : ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕೊಂಕಲ್, ಉಳ್ಳೆಸೂಗುರು ಗ್ರಾಪಂ ವ್ಯಾಪ್ತಿಯಹೋರಟೂರು,ಉಳ್ಳೆಸೂಗುರು ಮತ್ತು ತೇಕರಾಳ ಗ್ರಾಮಗಳಿಗೆ ಭೇಟಿ ನೀಡಿ ಮನರೇಗಾ ಯೋಜನೆಯಡಿ ಪ್ರಗತಿಯಲ್ಲಿದ್ದ ಶಾಲಾ ಶೌಚಾಲಯ, ಆಟದ ಮೈದಾನ ಕಾಮಗಾರಿಗಳು ಪರಿಶೀಲಿಸಲಾಯಿತು ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಹೇಳಿದರು.

ಯಾದಗಿರಿದಲ್ಲಿ ಅಕ್ಟೋಬರ್ 16ರ ಗುರುವಾರ ರಂದು ಇಂದು ಜಿಲ್ಲೆಯ ವಡಗೇರಾ ತಾಲ್ಲೂಕಿನ ವಿವಿಧ ಗ್ರಾಮಗಳ ಕೊಂಕಲ್, ಉಳ್ಳೆಸೂಗುರು ಗ್ರಾಪಂ ವ್ಯಾಪ್ತಿಯ ಹೋರಟೂರು, ಉಳ್ಳೆಸೂಗುರು, ತೇಕರಾಳ ಗ್ರಾಮಗಳಿಗೆ ಭೇಟಿ ನೀಡಿ ಅವರು ಮಾನತಾಡಿದರು.

ಮನರೇಗಾ ಯೋಜನೆಯಡಿ ಪ್ರಗತಿಯಲ್ಲಿದ್ದ ಶಾಲಾ ಶೌಚಾಲಯ, ಆಟದ ಮೈದಾನ ಹಾಗೂ ಇತರ ನರೇಗಾ ಕಾಮಗಾರಿಗಳು ವೀಕ್ಷಿಸಿದರು. ನಂತರ ಕೂಸಿನ ಮನೆ ಕೇಂದ್ರ ಮತ್ತು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ, ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ, ಸ್ವಚ್ಛತೆ ಹಾಗೂ ಇತರ ವ್ಯವಸ್ಥೆ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಯಾದಗಿರಿ ಜಿ.ಪಂ. ಯೋಜನಾ ನಿರ್ದೇಶಕರಾದ ಸಿ.ಬಿ ದೇವರಮನಿ, ತಾ.ಪಂ ಇಒ ಮಲ್ಲಿಕಾರ್ಜುನ ಸಂಗ್ವಾರ, ಎಡಿ ಶಶಿಧರ ಹಿರೇಮಠ, ಟಿಸಿ, ಪಿಡಿಓ, ಡಿಇಒ, ಟಿಎಇ, ಬಿಎಫ್‌ಟಿ ಗ್ರಾಪಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಅ.17 ರಂದು ಕಲಬುರಗಿ ವಿಭಾಗ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ, ಪ್ರೌಢ ಶಾಲಾ ಮಕ್ಕಳ ಖೋ, ಖೋ, ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅ 16: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರ ಕಾರ್ಯಾಲಯ, ಸುರಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರಸಮನ್ವಯಾಧಿಕಾರಿಗಳ ಕಾರ್ಯಾಲಯ,ತಾಲೂಕು ದೈಹಿಕ ಶಿಕ್ಷಣ ಪ್ರಾಥಮಿಕ, ಪ್ರೌಢ ಶಾಲಾ ಶಿಕ್ಷಕರ ಸಂಘ ಸಂಯುಕ್ತಾಶ್ರಯದಲ್ಲಿ ಸುರಪುರ ನಗರದ ಕೋರ್ಟ್ ರಸ್ತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಿಂದುಗಡೆ ತಾಲೂಕು ಕ್ರೀಡಾಂಗಣದಲ್ಲಿ 2025ರ ಅಕ್ಟೋಬರ್ 17 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ವಿಭಾಗ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ, ಪ್ರೌಢ ಶಾಲಾ ಮಕ್ಕಳ ಖೋ, ಖೋ, ಕ್ರೀಡಾಕೂಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಕಲಬುರಗಿ ವಿಭಾಗ ಮಟ್ಟದ 14/17 ವಯೋಮಿತಿಯ ಪ್ರಾಥಮಿಕ, ಪ್ರೌಢ ಶಾಲಾ ಮಕ್ಕಳ ಖೋ, ಖೋ, ಕ್ರೀಡಾಕೂಟ ಕಾರ್ಯಕ್ರಮ ಉದ್ಘಾಟಿಸುವರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರಾದ ಶ್ರೀ ಎಸ್.ಮಧು ಬಂಗಾರಪ್ಪ, ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಕಲಬುರಗಿ ಶಾಲಾ ಶಿಕ್ಷಣ ಇಲಾಖೆ ಅಪರ ಆಯುಕ್ತರು ಪಾಂಡ್ವೆ ರಾಹುಲ್ ತುಕಾರಾಮ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ ಗೌರವಾನ್ವಿತ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು (ಆಡಳಿತ) ಶ್ರೀ ಚನ್ನಬಸಪ್ಪ ಎಸ್.ಮುಧೋಳ, ಯಾದಗಿರಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರು (ಅಭಿವೃದ್ಧಿ) ವೃಷಭೇಂದ್ರಯ್ಯ ಜಿ.ಎಂ, ಯಾದಗಿರಿ ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿ ಹಣಮಂತರಾಯ ರಾಠೋಡ, ಸುರಪುರ ತಹಸೀಲ್ದಾರು ಎಚ್.ಎ.ಸರಕಾವಸ, ಸುರಪುರ ಡಿ.ವೈ.ಎಸ್.ಪಿ ಜಾವೀದ್ ಇನಾಂದಾರ್, ಸುರಪುರ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಸಜ್ಜನ್, ಸುರಪುರ ನಗರಸಭೆ ಅಧ್ಯಕ್ಷರು ಶ್ರೀಮತಿ ಇನಾಕೌಸರ, ಸುರಪುರ ನಗರಸಭೆ ಪೌರಾಯುಕ್ತರು ಬಸವರಾಜ, ಯಾದಗಿರಿ ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ (ಪ್ರಭಾರಿ) ಅನಿಲಕುಮಾರ ನಾಯಕ ಆಹ್ವಾನಿತರಾಗಿ ಭಾಗವಹಿಸುವರು.

ಸರ್ವರಿಗೂ ಆದರದ ಸುಸ್ವಾಗತವನ್ನು ಸುರಪುರ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಶಿಕ್ಷಣ ಸಂಯೋಜಕರು, ಸಿಬ್ಬಂದಿ ವರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಯಲ್ಲಪ್ಪ ಕಾಡ್ಲೂರ್, ಸುರಪುರ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ದೈಹಿಕ ಶಿಕ್ಷಣ ಅಧಿಕಾರಿಗಳು ಮಲ್ಲಣ್ಣ ದೊಡ್ಡಮನಿ, ಸುರಪುರ ಬಿ.ಆರ್.ಪಿ.ಸಿ.ಆರ್.ಪಿ.ಬಿ.ಐ. ಇ.ಆರ್.ಟಿ.ಕ್ಷೇತ್ರ ಸಂಪನ್ಮೂಲ ಕೇಂದ್ರ ಕ್ಷೇತ್ರ ಸಮನ್ವಯಾಧಿಕಾರಿ ಪಂಡಿತ ನಿಂಬೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾದಿಗ ಸಂಘಟನೆಗಳ ಒಕ್ಕೂಟದಿಂದ

ನಾಳೆ ಬೃಹತ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಅ.16:ದಿನಾಂಕ 17.10.2025 ರಂದು ಸುಪ್ರೀಂ ಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳಾದ ಸಿಜಿಐ ಬಿ ಆರ್ ಗವಾಯಿ ಯವರಿಗೆ ಸನಾತನ ಧರ್ಮ ಮತ್ತು ಕೋಮುವಾದಿ ಹಾಗೂ ಜಾತಿವಾದಿ ವಕೀಲ ಕಿಶೋರ್ ರಾಕೇಶ್ ಎಂಬ ವ್ಯಕ್ತಿ ಕೋರ್ಟ್ ಹಾಲಿನಲ್ಲಿ ಶು ಎಸದಿದ್ದನ್ನು ಖಂಡಿಸಿ ಮಾದಿಗ ಸಂಘಟನೆಗಳ ಒಕ್ಕೂಟ ವತಿಯಿಂದ ವಾಲ್ಮೀಕಿ ವೃತ್ತದಿಂದ ಬಸವೇಶ್ವರ ಸರ್ಕಲ್ ವರೆಗೆ ಬೃಹತ್ ಪ್ರತಿಭಟನ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದ್ದು ಈ ಒಂದು ಪ್ರತಿಭಟನೆಗೆ ಪಕ್ಷಬೇದ ಮರೆತು ಸಾಮೂಹಿಕವಾಗಿ ಸಮುದಾಯದ ಹಿರಿಯ ಮುಖಂಡರುಗಳು ಹಾಗೂ ಪ್ರಗತಿಪರ ಚಿಂತಕರು ವಿಚಾರವಾದಿಗಳು ಸಮುದಾಯದ ವಕೀಲರು ಭಾಗವಹಿಸಬೇಕು ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸವಿಂದಾನದ ಅಡಿಯಲ್ಲಿ ಕೆಲಸ ಮಾಡ್ತಕಂತ ಒಬ್ಬ ಜಾತಿವಾದಿ ಕೊಳಕು ಮನುಷ್ಯ ಕೋರ್ಟ್ ಹಾಲಿನಲ್ಲಿ ಶು ಎಸದಿದ್ದನ್ನು ಖಂಡಿಸಿ ಇಡೀ ನಾಗರಿಕ ಸಮಾಜವನ್ನೆ ತಲೆತಗ್ಗಿಸುವಂತೆ ಮಾಡಿದ ಗುಂಡ ರಾಕೇಶ್ ಕಿಶೋರನಿಗೆ ಈ ದೇಶದಿಂದ ಗಡಿಪಾರು ಮಾಡಬೇಕು ಎಂದು ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಶಾಂತಪ್ಪ ಕಟ್ಟಿಮನಿ ಅವರು ಮಾನತಾಡಿದರು.

ನೂತನ ಔರಾದ್ ಕ್ರೀಡಾಂಗಣಕ್ಕೆ ಅಮರೇಶ್ವರ ಹೆಸರಿಡಿ ಸಿಎಂಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 16 : ಔರಾದ್ ಪಟ್ಟಣದಲ್ಲಿ ನಿರ್ಮಿಸಿರುವ ನೂತನ ಕ್ರೀಡಾಂಗಣಕ್ಕೆ ಶ್ರೀ ಅಮರೇಶ್ವರ ಹೆಸರಿಡಬೇಕು ಎಂದು ಕಾಂಗ್ರೆಸ್ ಕಿಸಾನ್ ವಿಭಾಗದ ರಾಷ್ಟ್ರೀಯ ಜಂಟಿ ಸಂಯೋಜಕ ಜಾನಸನ್ ಫೋಡೆ ಹಾಗೂ ಲಿಂಗಾಯತ ಮುಖಂಡ ಸಂಗು ದ್ಯಾಡೆ ಮನವಿ ಮಾಡಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಔರಾದ್ ಪಟ್ಟಣ ಉದ್ಭವಲಿಂಗ ಶ್ರೀ ಅಮರೇಶ್ವರರಿಂದ ಪ್ರಸಿದ್ಧಿ ಪಡೆದಿದೆ. ಪ್ರತಿ ವರ್ಷ ಇಲ್ಲಿ ನಡೆಯುವ ಅಮರೇಶ್ವರ ಜಾತ್ರಾ ಮಹೋತ್ಸವದಲ್ಲಿ ವಿವಿಧೆಡೆಯ ಅಪಾರ ಭಕ್ತರು ಪಾಲ್ಗೊಳ್ಳುತ್ತಾರೆ ಎಂದು ತಿಳಿಸಿದ್ದಾರೆ.

ಸಂಬಂಧಪಟ್ಟವರಿಗೆ ಶ್ರೀ ಅಮರೇಶ್ವರ ಹೆಸರಿಡಲು ನಿರ್ದೇಶನ ನೀಡಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

ತಮ್ಮ ಮನವಿಗೆ ಸ್ಪಂದಿಸಿರುವ ಮುಖ್ಯಮಂತ್ರಿ ಅವರ ವಿಶೇಷ ಕರ್ತವ್ಯಾಧಿಕಾರಿ ಈ ಕುರಿತು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ ಎಂದು ಫೋಡೆ ಹೇಳಿದ್ದಾರೆ.

ಮನುಷ್ಯ ಕಾಣೆ: ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.16 : ಬಸವಕಲ್ಯಾಣ ತಾಲ್ಲೂಕಿನ ಜಾಜನಮುಗಳಿ ಗ್ರಾಮದ ನಿವಾಸಿ ಶ್ರೀಮಂತ ಬರ್ಮಾ ಮಂಜೂಳೆ (77) ಇವರು ದಿನಾಂಕ: 28–08–2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾರೆ.

ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ ಇದ್ದು, ದುಂಡು ಮುಖ ಸಾದಾ ಕಪ್ಪು ಬಣ್ಣ, ಮನೆಯಿಂದ ಹೊರಡುವಾಗ ಮೈಮೇಲೆ ಬಿಳಿ ಬಣ್ಣದ ಧೋತಿ ಹಾಗೂ ಬಿಳಿ ಬಣ್ಣದ ನೆಹರು ಶರ್ಟ ಮತ್ತು ಬಿಳ್ಳಿ ಬಣ್ಣದ ಟೋಪಿ ಧರಿಸಿರುವ ಇವರು ಮರಾಠಿ, ತೆಲಗು ಭಾಷೆಯಲ್ಲಿ ಮಾತನಾಡುತ್ತಾರೆ.

ಈ ಕಾಣೆಯಾದ ಮನುಷ್ಯನ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಬಸವಕಲ್ಯಾಣ ಗ್ರಾಮೀಣ ಪೊಲೀಸ್ ಠಾಣೆಗೆ ಅಥವಾ ಮೊಬೈಲ್ ಸಂಖ್ಯೆ: 9480803460 ಗೆ ಸಂಪರ್ಕಿಸುವಂತೆ ಬಸವಕಲ್ಯಾಣ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.16:ಜೇಸ್ಕಾಂ ಬೀದರ ವಿಭಾಗದಲ್ಲಿ ಬರುವ 11ಕೆವಿ ಗುಂಪಾ ಮತ್ತು 11ಕೆವಿ ಮೈಲೂರು ಫೀಡರಗಳ ಮೇಲೆ ಹಾಗೂ 11ಕೆವಿ ಅಮಲಾಪೂರ ಫೀಡರಗಳ ಮೇಲೆ ಕಾಮಗಾರಿ ಹಾಗೂ ತುರ್ತು ನಿರ್ವಹಣೆ ಕೆಲಸದ ನಿಮಿತ್ಯ ದಿನಾಂಕ: 18–10–2025 ರಂದು ಬೆಳಿಗ್ಗೆ 10 ರಿಂದ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

11ಕೆವಿ ಗುಂಪಾ ಮತ್ತು 11ಕೆವಿ ಮೈಲೂರು ಫೀಡರಗಳ ವಿವರ: ಸಂಗಮೇಶ್ವರ ಕಾಲೋನಿ, ವಿದ್ಯಾನಗರ ಕಾಲೋನಿ, ಬಿದ್ರಿ ಕಾಲೋನಿ, ಹಕ್ಕ ಕಾಲೋನಿ, ಟೀಚರ್ ಕಾಲೋನಿ, ವಡ್ಡರ ಕಾಲೋನಿ, ಮೈಲೂರು, ಗಾಂಧಿ ನಗರ ಸಾಯಿ ನಗರ, ಹಾಸಿಮಿ ಕಾಲೋನಿ, ಸಿ.ಎಮ್.ಸಿ. ಲೇಔಟ್, ಗುಂಪಾ ಚಿಟ್ಟಾಕ್ರಾಸ್, ಅಲ್ಲಮ ಪ್ರಭು ನಗರ, ಲಕ್ಷಿ ?? ನಗರ, ಗುಂಪಾ ರಿಂಗ್‌ರೋಡ್, ಕೈಲಾಸನಗರ, ಹಳೇ ಕುಂಬರವಾಡ್, ಶಿವಾಜಿ ನಗರ, ಕೋಡೆ ಲೇಔಟ್, ಶಾಸ್ತ್ರಿ ನಗರ, ಓಂ ನಗರ.11ಕೆವಿ ಅಮಲಾಪೂರ ಫೀಡರಗಳ ವಿವರ: ಚಿದ್ರಿ ಐಪಿ ಏರಿಯಾ, ಮೈಲೂರು ಐಪಿ ಏರಿಯಾ, ಅಮಲಾಪೂರ ಐಪಿ ಏರಿಯಾ, ಚಿಟ್ಟಾವಾಡಿ ಐಪಿ ಏರಿಯಾ ಇಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಕಾರಣ ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಬೀದರ ನಗರ ಉಪ ವಿಭಾಗದ ಜೇಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ಏ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಡಗರ –ಸಂಭ್ರಮದಿಂದ ಕರ್ನಾಟಕ ರಾಜ್ಯೋತ್ಸವ ಆಚರಣೆಗೆ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ:16: ಜಿಲ್ಲಾಡಳಿತದ ವತಿಯಿಂದ ಬರುವ ನವೆಂಬರ್ 1ರಂದು ಕರ್ನಾಟಕ ರಾಜ್ಯೋತ್ಸವವನ್ನು ಸಡಗರ ಸಂಭ್ರಮದಿಂದ ಆಚರಿಸಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ್ ಅವರ ಅಧ್ಯಕ್ಷತೆಯಲ್ಲಿ ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಅಂದು ಬೆಳಿಗ್ಗೆ 7 ಗಂಟೆಗೆ ಜಿಲ್ಲೆಯ ಶಾಲಾ– ಕಾಲೇಜು,, ವಿವಿಧ ಸರ್ಕಾರಿ ಕಚೇರಿಗಳ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಿಸಬೇಕು. ಬೆಳಿಗ್ಗೆ 8 ಗಂಟೆಗೆ ಯಾದಗಿರಿ ನಗರದ ಜಿಲ್ಲಾಡಳಿತ ಭವನ ಇಲ್ಲಿ ರಾಷ್ಟ್ರಧ್ವಜಾರೋಹಣ,ನಂತರ ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣ್ಯರಿಂದ ರಾಷ್ಟ್ರಧ್ವಜಾರೋಹಣ ನೆರವೇರಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲು ಸಭೆಯಲ್ಲಿ ಸೂಚಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ್ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ್ ಅವರು ವೇದಿಕೆ ಸಿದ್ದತೆ, ಕವಾಯತು ಸಿದ್ಧತೆ, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ಸೂಕ್ತ ಪೋಲಿಸ್ ಬಂದೋಬಸ್ತ್ ಮಾಡಲು, ನುರಿತ ವೈದ್ಯರೊಂದಿಗೆ ಅಂಬ್ಯುಲೆನ್ಸ್ ವ್ಯವಸ್ಥೆ ಮಾಡಬೇಕೆಂದು ಸಂಬಂಧಿಸಿದ ಅಧ

ಸಮಿಕ್ಷೆಗೆ ಒಳಪಡದೇ ಇದ್ದಲ್ಲಿ ಅಂತಹವರು ಸರ್ಕಾರಿ ಸೌಲಭ್ಯದಿಂದ ವಂಚಿತರಾಗುತ್ತಾರೆ : ನಾಗರತ್ನ ನಾಯಕ ಶಿಶು ಅಭಿವೃದ್ಧಿ ಯೋಜನಾ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ಮತ್ತು ಮಸ್ಕಿ ತಾಲೂಕ ವ್ಯಾಪ್ತಿಯಲ್ಲಿ ಬರುವ ಮಾಜಿದೇವದಾಸಿಯರ ಮಹಿಳೆಯರ ಮರುಸಮೀಕ್ಷೆ ಪ್ರಕ್ರಿಯೆ ದಿನಾಂಕ:–15.09.2025 ರಿಂದ 31.10.2025 ರವರೆಗೆ ನಡೆಯುತ್ತಿದ್ದು. ಸದರಿ ಸಮೀಕ್ಷೆಯಲ್ಲಿ ಎಲ್ಲಾ ಮಾಜಿ ದೇವದಾಸಿ ಮಹಿಳೆಯರು ತಮ್ಮ ದಾಖಲಾತಿಗಳನ್ನುನೊಂದಾಯಿಸತಕ್ಕದ್ದು, ಸದರಿ ಸಮೀಕ್ಷೆಯು ಇನ್ನೂ 15 ದಿನಗಳ ವರೆಗೆ ನಡೆಯುತ್ತಿದ್ದು (31.10.2025 ರವರೆಗೆ) ಕಡ್ಡಾಯವಾಗಿ ನೊಂದಣಿ ಮಾಡಿಕೊಳ್ಳಲು ತಿಳಿಸಿದೆ. ಒಂದು ವೇಳೆ ಸದರಿ ಸಮಿಕ್ಷೆಗೆ ಒಳಪಡದೇ ಇದ್ದಲ್ಲಿ ಅಂತಹವರು ಸರ್ಕಾರಿ ಸೌಲಭ್ಯದಿಂದ ವಂಚಿತರಾಗುತ್ತಾರೆ ಹಾಗಾಗಿ ನಿಗದಿತ ಸಮಯದೊಳಗೆ ಸುಕ್ತ ದಾಖಲಾತಿಗಳೊಂದಿಗೆ ಲಿಂಗಸುಗೂರ ಶಿಶು ಅಭಿವೃದ್ಧಿ ಯೋಜನಾ ಕಛೇರಿಗೆ ಬಂದು ಆನ್‌ಲೈನ್ ಅರ್ಜಿ ಸಲ್ಲಿಸಬೇಕು

ವಿಶೇಷ ಸೂಚನೆ :– ಮಾನ್ಯ ಸರ್ಕಾರದ ಉಪ ಕಾರ್ಯದರ್ಶಿ–2 ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ಇವರ ಆದೇಶದಂತೆ ತಾಲೂಕಿನ ಎಲ್ಲಾ ಮಾಜಿದೇವದಾಸಿಯರುಕಡ್ಡಾಯವಾಗಿ ನೊಂದಣಿ ಮಾಡಿಸಲು ಈ ಮೂಲಕ ಸೂಚಿಸಿದೆ.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಲಿಂಗಸುಗೂರು (8861454090) ಸಂಪರ್ಕಿಸಿ

ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗರತ್ನ ನಾಯಕ ಪತ್ರಿಕಾ ಪ್ರಕಟಣೆ ತಿಳಿಸಿದ್ದಾರೆ.

ಬೀದಿ ಬದುಕು ಚಿತ್ರದಲ್ಲಿ ಸುರಪುರದ ಹುಡುಗ ನಾಯಕನಾಗಿ 'ಸಾಕೇತ್'

ಮಲ್ಲಮ್ಮ ನುಡಿ ವಾರ್ತೆ

ಸುರಪುರ:ತಾಲೂಕಿನ ಹೆಗ್ಗಣದೊಡ್ಡಿ ಗ್ರಾಮದ ಪ್ರತಿಭಾಶಾಲಿ ಯುವಕ ಮಾಸ್ಟರ್ ಸಾಕೇತ್ ಅವರು ನಾಯಕ ನಟನಾಗಿ ಅಭಿನಯಿಸಿರುವ 'ಬೀದಿ ಬದುಕು' ಎಂಬ ಚಲನಚಿತ್ರದ ಟೀಸರ್ ಬಿಡುಗಡೆ (ಟ್ರೈಲರ್ ಲಾಂಚ್) ಕಾರ್ಯಕ್ರಮ ಅದ್ಧೂರಿಯಾಗಿ ನೆರವೇರಿತು.

ಹಿರಿಯ ನಿರ್ದೇಶಕ ಪುರುಷೋತ್ತಮ್ ಅವರ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಚಿತ್ರ ಸಾಮಾಜಿಕ ಅಂಶವನ್ನು ಆಧರಿಸಿಕೊಂಡು ರಚಿತವಾಗಿದ್ದು, ಪ್ರೇಕ್ಷಕರ ಮನ ಗೆಲ್ಲುವಂತಾಗಿದೆ.ಚಿತ್ರದಲ್ಲಿ ಸಾಕೇತ್ ರವರ ಅಭಿನಯ ಗಮನಾರ್ಹವಾಗಿದೆ ಎಂದು ಕಾರ್ಯಕ್ರಮದಲ್ಲಿ ಹಾಜರಿದ್ದವರು ಪ್ರಶಂಸಿಸಿದರು.

"ಚಿತ್ರದ ವಿಷಯ ಹೊಸದು, ಹೃದಯ ಸ್ಪರ್ಶಿಸುವ ಕಥಾ ಹಂದರ ಮತ್ತು ಶ್ರದ್ಧೆಯಿಂದ ಮಾಡಿದ ಅಭಿನಯದಿಂದ ಬೀದಿ ಬದುಕು ಚಿತ್ರವು ಖಂಡಿತ ಪ್ರೇಕ್ಷಕರ ಮೆಚ್ಚುಗೆ ಪಡೆಯಲಿದೆ," ಎಂದು ನಿರ್ದೇಶಕ ಪುರುಷೋತ್ತಮ್ ಹೇಳಿದರು.

ಚಿತ್ರದ ಟ್ರೈಲರ ಅದ್ಭುತವಾಗಿ ಮೂಡಿ ಬಂದಿದ್ದು, ಸಾಮಾಜಿಕ ಮಾಧ್ಯಮಗಳಲ್ಲಿ ಈಗಾಗಲೇ ಪ್ರಶಂಸೆಗೆ ಪಾತ್ರವಾಗಿದೆ.

ಜವಳಗೇರಾ ಗ್ರಾಮಕ್ಕೆ ಸಚಿವೆ ನಿಮಲಾ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು.ಅ.16–ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮದಲ್ಲಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಲೋಕಾರ್ಪಣೆ ಸಮಾರಂಭ ಅ.16ರಂದು ನಡೆಯಿತು. ಪೂರ್ವ ನಿಗದಿಯಂತೆ ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಬೆಳಗ್ಗೆ 11.35ರ ವೇಳೆಗೆ ಸಿಂಧನೂರ ಮಾರ್ಗವಾಗಿ ಜವಳಗೇರಾ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ದೇಶಿ ಶೈಲಿಯ ಮಹಿಳಾ ಡೊಳ್ಳಿನ ತಂಡದವರಿಂದ ಹಾಗೂ ಪುಷ್ಪಾರ್ಪಣೆಯ ಮೂಲಕ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಮೊದಲಿಗೆ ಸಚಿವರು, ಅಂದಾಜು 2.54 ಕೋಟಿ ರೂ ವೆಚ್ಚದಲ್ಲಿ, ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ನಬಾರ್ಡ ಸಂಯುಕ್ತವಾಗಿ ರೂಪಿಸಿರುವ

ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವಾದ ಕಲ್ಯಾಣ ಸಂಪದ ಕೇಂದ್ರವನ್ನು ರಿಬ್ಬನ್ ಕತ್ತರಿಸಿ ಲೋಕಾರ್ಪಣೆ ಮಾಡಿದರು.

ಇದೆ ವೇಳೆ ಸಚಿವರು, ಕಲ್ಯಾಣ ಸಂಪದ ಕಟ್ಟಡದಲ್ಲಿನ ಕಂಪನ ಜರಡಿ ಯಂತ್ರ, ಜಿಲ್ಲಾ ಮಿಶ್ರಣ ಸಂಗ್ರಹಗಾರ, ಜಿಲ್ಲಾ ಮಿಶ್ರಣ ಯಂತ್ರ, ಶುದ್ಧೀಕರಣ ಮತ್ತು ಗ್ರೈಂಡಿಂಗ್ ಯಂತ್ರ,ಬಣ್ಣ ಆಧಾರಿತ ಬೇರ್ಪಡಿಸುವ ಯಂತ್ರ, ಬೇಳೆ ಪ್ಯಾಂಕಿಂಗ್ ಯಂತ್ರ,ತಯಾರಾದ ವಸ್ತುಗಳ ಸಂಗ್ರಹಗಾರದ ವೀಕ್ಷಣೆ ನಡೆಸಿದರು. ಬಳಿಕ ವೇದಿಕೆಯ ಕಾರ್ಯಕ್ರಮ ನಡೆಯಿತು.

ಅಕ್ಟೋಬರ್ 18ರಂದು ಎಲ್‌ವಿಡಿ ಕಾಲೇಜಿನಲ್ಲಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 16– ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ನಗರದ ಎಲ್‌ವಿಡಿ ಕಾಲೇಜಿನಲ್ಲಿ ಅಕ್ಟೋಬರ್ 18ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆವರೆಗೆ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಸುಮಾರು 15 ವಿವಿಧ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ ಮ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೇಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 8073610442ಗೆ ಇಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಿ: ಜಹೀರಾ ನಸೀಮ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 16– ಅರ್ಹತಾ ದಿನಾಂಕ 01.11.2025ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ. ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ಆಗಿರುವ ಕುಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ ಅವರು ತಿಳಿಸಿದ್ದಾರೆ.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ಈಗಾಗಲೇ ದಿನಾಂಕ:30.09.2025 ರಂದು ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸಲಾಗಿದ್ದು, ನಮೂನೆ 19ರಲ್ಲಿನ ಅರ್ಜಿಯನ್ನು ಸ್ವೀಕರಿಸಲು 2025ರ ನವಂಬರ್ 06 ಕೊನೆಯ ದಿನವಾಗಿರುತ್ತದೆ. ಕರಡು ಮತದಾರರ ಪಟ್ಟಿಯನ್ನು 2025ರ ನವಂಬರ್ 25ರ ಮಂಗಳವಾರ ಪ್ರಕಟಣೆ ಮಾಡಲಾಗುತ್ತದೆ. ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ 2025ರ ನವಂಬರ್ 25ರ ಮಂಗಳವಾರದಿಂದ 2025ರ ಡಿಸೆಂಬರ್ 10ರ ಬುಧವಾರದವರೆಗೆ ಅವಧಿ ನೀಡಲಾಗಿದೆ. ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30ರ ಮಂಗಳವಾರ ದಂದು ಪ್ರಕಟಣೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಮಾರ್ಗಸೂಚಿಗಳು: ಭಾರತದ ಪ್ರಜೇಯಾಗಿರುವ, ಆಯಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲು 6 ವಷಗಳ ಅವಧಿಯಲ್ಲಿ ದರ್ಜೆಯಲ್ಲಿ ಪ್ರೌಢಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೇ ನಿರ್ದಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ (ಬಿಯುಎಲ್‌ಕೆ) ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ, ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಂಟುಂಬದ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು

ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿದಾರರು ನಮೂನೆ–19 ರ ಅರ್ಜಿಯೊಂದಿಗೆ ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ಬೀಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ ಅಳತೆಯ ಭಾವಚಿತ್ರಗಳನ್ನು ಸಲ್ಲಿಸತಕ್ಕದ್ದು.

ಅರ್ಜಿದಾರರು ನಮೂನೆ–19ರೊಂದಿಗೆ ಲಗತ್ತಿಸಿದ ಆಧಾರ್ ಕಾರ್ಡನ ನೌಪ್ಯತೆಯನ್ನು ಕಾಪಾಡುವ ದೃಷ್ಟಿಕೋನದಿಂದ ಆಧಾರ್ ಸಂಖ್ಯೆಯ ಪ್ರಥಮ 8 ಸಂಖ್ಯೆಯನ್ನು ಮಾಸ್ಕ್ ಮಾಡಲು ಹಾಗೂ ಅರ್ಜಿದಾರರ ಖಾಸಗಿತ್ವದ ದಾಖಲೆ ಹಾಗೂ ಮೊಬೈಲ್ ಸಂಖ್ಯೆಯನ್ನು ಯಾರಿಗೂ ನೀಡಬಾರದೆಂದು ಕಡ್ಡಾಯವಾಗಿ ಸೂಚಿಸಲಾಗಿರುತ್ತದೆ.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸತಕ್ಕದ್ದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ–2 ರಲ್ಲಿ ಸಂಬಳ ಬಟವಾಡೆ ಅಧಿಕಾರಿಯಿಂದ ಪ್ರಮಾಣಪತ್ರ ಸಲ್ಲಿಸತಕ್ಕದ್ದು. ಆಯೋಗವು ದಿನಾಂಕ:25.10.2021ರಂದು ನೀಡಿದ ಮಾರ್ಗಸೂಚಿಗನುಗುಣವಾಗಿ ಅರ್ಹ ಮತದಾರರು ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ನೋಂದಾಯಿಸಕೂಡದೆಂದು ತಿಳಿಸುತ್ತಾ, ಅವರು ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ತಿಳಿಸಿದೆ.

ಈ ಕ್ಷೇತ್ರ ವ್ಯಾಪ್ತಿಯ ಹೊರಗಡೆ ಸೆಕಂಡರಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲದ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ಮತದಾರನಾಗಲು ಆಯೋಗದ ಮಾರ್ಗಸೂಚಿಗಳನ್ನು ಪೂರೈಸಿ ಅವರು ಈ ಚುನಾವಣಾ ಕ್ಷೇತ್ರ ವ್ಯಾಪ್ತಿಯ ಸಾಮಾನ್ಯ ನಿವಾಸಿಯಾಗಿ ಇದಕ್ಕೆ ಪೂರಕವಾಗಿರುವಂತಹ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ನೋಂದಣಿಗಾಗಿ ಅರ್ಹರಿರುತ್ತಾರೆ.

ಆಯೋಗವು ಮುಂಬರುವ ದಿನಗಳಲ್ಲಿ ಈ ನಮೂನೆ 19ರ ಅರ್ಜಿಗಳನ್ನು ಇಆರ್‌ಎಮ್‌ಎಸ್‌ನಲ್ಲಿ ಅಳವಡಿಸಲು ಉದ್ದೇಶಿಸಿರುತ್ತಾರೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ಈಗಾಗಲೇ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟವರಿಗೆ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ್ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸತಕ್ಕದ್ದು.

ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಎಲ್ಲಾ ಅರ್ಹ ಮತದಾರರಲ್ಲಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಮತದಾರರ ನೋಂದಣಾಧಿಕಾರಿ ಆಗಿರುವ ಕುಲಬುರಗಿ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಎಲ್ಲ ಸಮಸ್ಯೆಗಳ ಪರಿಹಾರಕ್ಕೆ ಶಿಕ್ಷಣ ಒಂದೇ ಪ್ರಮುಖ ಅಸ್ತ್ರ: ಡಾ.ಖಾಜಾವಲಿ ಈಚನಾಳ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಆಧುನಿಕ ಯುಗದ ಈ ಸಮಾಜದಲ್ಲಿ ಇನ್ನೂ ಮನುಷ್ಯ ಅಜ್ಞಾನ, ಅಂದ:ಕಾರ, ಮೂಢನಂಬಿಕೆಗಳಿಂದ ಮುಕ್ತನಾಗಿಲ್ಲ. ಅಸಮಾನತೆ, ಅಸ್ಪೃಶ್ಯತೆ ಜೀವಂತವಾಗಿವೆ. ಬೌದ್ಧಿಕ ದಾರಿದ್ರ ಸಮಾಜವನ್ನು ಕಾಡುತ್ತಿದೆ. ಈ ಎಲ್ಲ ಸಮಸ್ಯೆಗಳ ಪರಿಹಾರಕ್ಕೆ ಶಿಕ್ಷಣ ಒಂದೇ ಪ್ರಮುಖ ಅಸ್ತ್ರವಾಗಿದೆ ಗುಲ್ಬರ್ಗ ವಿಶ್ವವಿದ್ಯಾಲಯದ ಪದವಿ ಕಾಲೇಜುಗಳ ಕನ್ನಡ ಅಧ್ಯಾಪಕರ ಸಂಘದ ಅಧ್ಯಕ್ಷ, ಬಂಡಾಯ ಸಾಹಿತಿ ಡಾ.ಖಾಜಾವಲಿ ಈಚನಾಳ ಹೇಳಿದರು.

ಅವರು ಸ್ಥಳೀಯ ಉಮಾಮಹೇಶ್ವರಿ ಸಮೂಹ ಸಂಸ್ಥೆಗಳ ಪದವಿ ಕಾಲೇಜಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ವ್ಯಕ್ತಿತ್ವ ವಿಕಸನದ ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಶಿಕ್ಷಣವನ್ನು ಪಡೆದೂ ಕೂಡಾ ನಾವಿಂದು ಮಾನವೀಯತೆಯನ್ನು ಮರೆಯುತ್ತಿದ್ದೇವೆ. ಬುದ್ಧಿ ಭ್ರಹ್ಮಾಂಡವಾಗಿದ್ದು ಹೃದಯ ಬುಡಿಮೆಯಾಗಿದೆ ಎಂದರು.

ನಂತರ ಕಾಲೇಜಿನ ಪ್ರಾಚಾರ್ಯ ವೀರೇಶ್ ಆದೋನಿ ಮಾತನಾಡಿ ವಿದ್ಯಾರ್ಥಿಗಳು ಉತ್ತಮ ಹವ್ಯ

ವಿದ್ಯುತ್ ಮಾಪಕವನ್ನು 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಲು ಜೆಸ್ಕಾಂನಿಂದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.16–ಳ್ಳಾರಿ ನಗರ ಉಪವಿಭಾಗ–1ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪನಿಯನಿಯಮಾನುಸಾರ ಎಲ್ಲಾ ಸ್ಥಾವರದಲ್ಲಿರುವ ಮೀಟರ್‌ಗಳನ್ನು ಆಪ್ಟಿಕಲ್ ಪ್ರೋಬ್ ಡಿವೈಸ್ ಮೂಲಕವೇ ರೀಡಿಂಗ್ ಮಾಡಬೇಕಾಗಿದ್ದು,ವಿದ್ಯುತ್ ಗ್ರಾಹಕರು ತಮ್ಮ ಸ್ಥಾವರದ ವಿದ್ಯುತ್ ಮಾಪಕವನ್ನು ಕಡ್ಡಾಯವಾಗಿ ನೆಲದಿಂದ 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಬೇಕು.

ವಿದ್ಯುತ್ ಮಾಪಕಗಳು ಗೋಚರಿಸುವ ಹಾಗೂ ಓದಲು ಅನುಕೂಲವಾಗುವ ಸ್ಥಳದಲ್ಲಿ ಇರಬೇಕು. ಮೀಟರ್ ಓದುವವರಿಗೆ ಸ್ಥಳವಿಲ್ಲದಿದ್ದಲ್ಲಿ ಸ್ಥಳ ಒದಗಿಸುವ ಹಾಗೆ ಅ.25 ರೊಳಗಾಗಿ ಅಳವಡಿಸಿಕೊಳ್ಳಬೇಕು.

ಈ ನಿಯಮ ಪಾಲನೆ ಮಾಡದಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅ.18 ರಂದು ವಿದ್ಯುತ್ ಗ್ರಾಹಕರ ಕುಂದು–ಕೊರತೆ ಮತ್ತು ಜಾಗೃತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.16–ಬಳ್ಳಾರಿ ನಗರ ಜೆಸ್ಕಾಂ ಉಪ–ವಿಭಾಗ 1 ಮತ್ತು 2 ರ ವ್ಯಾಪ್ತಿಯ ವಿದ್ಯುತ್ ಗ್ರಾಹಕರ ಕುಂದು–ಕೊರತೆ ಸಭೆ ಮತ್ತು ಎಸ್‌ಒಪಿ ಬಗ್ಗೆ ಜಾಗೃತಿ ಸಭೆಯನ್ನು ಅ.18 ರಂದು ಬೆಳಿಗ್ಗೆ 11.30 ಗಂಟೆಗೆ ನಗರ ಉಪ–ವಿಭಾಗ ವಲಯ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು,ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಭೆಗೆ ಹಾಜರಾಗಬೇಕು ಎಂದು ಬಳ್ಳಾರಿ ನಗರ ಉಪ–ವಿಭಾಗ–1 ರ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಪೆಟ್ ಮೈಸೂರು: ಉಚಿತ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.16–ಸಿಪೆಟ್ ಮೈಸೂರು ವತಿಯಿಂದ ಪ್ರಧಾನಮಂತ್ರಿ ಕೌಶಲ್ ವಿಕಾಸ್ ಯೋಜನೆ (ಪಿಎಮ್‌ಕೆವಿವೈ 4.0) ಅಡಿಯಲ್ಲಿ "ಮೆಷಿನ್ ಆಪರೇಟರ್ ಮತ್ತು ಪ್ರೋಗ್ರಾಮರ್ –ಸಿಎನ್‌ಸಿ ಮಿಲ್ಲಿಂಗ್" ವಿಷಯದಲ್ಲಿ 3.1/2 ತಿಂಗಳ ಉಚಿತ ಕೌಶಲ್ಯ ತರಬೇತಿಗೆ ಪಿಯುಸಿ, ಐಟಿಐ, ಡಿಪ್ಲೋಮೊ, ಯಾವುದೇ ಪದವಿ ಹೊಂದಿದ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಮೈಸೂರಿನಲ್ಲಿರುವ ಕೇಂದ್ರ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ (ಸಿಪೆಟ್) ಒಂದು ರಾಷ್ಟ್ರೀಯ ಮಟ್ಟದ ಸಂಸ್ಥೆಯಾಗಿದೆ. ಭಾರತ ಸರ್ಕಾರದ ರಾಸಾಯನಿಕ ಮತ್ತು ಪೆಟ್ರೋಕೆಮಿಕಲ್ಸ್ ಇಲಾಖೆ,ರಸಾಯನಿಕ ಮತ್ತು ರಸಗೊಬ್ಬರಗಳ ಸಚಿವಾಲಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

ಪೆಟ್ರೋಕೆಮಿಕಲ್ಸ್, ಪ್ಲಾಸ್ಟಿಕ್ಸ್ ಮತ್ತು ಪಾಲಿಮರ್ ಸಂಬಂಧಿತ ಕೈಗಾರಿಕೆಗಳಿಗೆ ವಿಶ್ವದಾದ್ಯಂತ ಕೌಶಲ್ಯಯುತ ತಾಂತ್ರಿಕ ಸಿಬ್ಬಂದಿಯನ್ನು ತಯಾರಿಸುವಲ್ಲಿ ಸಿಪೆಟ್ ಪ್ರಮುಖ ಪಾತ್ರವಹಿಸುತ್ತಿದೆ.

ತರಬೇತಿಯು ಅಕ್ಟೋಬರ್ 23 ರಿಂದ ಪ್ರಾರಂಭವಾಗುತ್ತಿದ್ದು,ಉಚಿತ ಊಟ ಹಾಗೂ ವಸತಿ ಸೌಲಭ್ಯ ಒದಗಿಸಲಾಗುತ್ತದೆ. ತರಬೇತಿಗೆ ದಾಖಲಾದ ಪ್ರತಿಯೊಬ್ಬ ವಿದ್ಯಾರ್ಥಿಗೂ ಕ್ಯಾಂಪಸ್ ನೇಮಕಾತಿಯ ಮೂಲಕ ಉದ್ಯೋಗದೊರಕಿಸಿಕೊಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ವೆಬ್‌ಸೈಟ್ ತಿತಿ.ಛಿiಡಿiಛಿ.ಠಿಡಿ.ಠಿಟಿ.ಟಿiಟಿ ಅಥವಾ ಮೊ.9480253024, 9741719645 ಗೆ ಸಂಪರ್ಕಿಸಬಹುದು ಎಂದು ಸಿಪೆಟ್ ಸಂಸ್ಥೆಯ ಪ್ರಧಾನ ನಿರ್ದೇಶಕ ಹಾಗೂ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅ.17 ರಂದು ಪೂರ್ವಭಾವಿ ಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.16–ಜಿಲ್ಲಾ ಕೇಂದ್ರದಲ್ಲಿ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸುವ ಕುರಿತಂತೆ ಚರ್ಚಿಸಲು ಅ.17 ರಂದು ಮಧ್ಯಾಹ್ನ 03 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಏರ್ಪಡಿಸಲಾಗಿದೆ. ಸಭೆಗೆ ಜಿಲ್ಲಾಮಟ್ಟದ ಅಧಿಕಾರಿಗಳು, ಕನ್ನಡಪರ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಕನ್ನಡಾಭಿಮಾನಿಗಳು ನಿಗದಿಪಡಿಸಿದ ಸಮಯಕ್ಕೆ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಎಲ್ಲರಿಗೂ ಉತ್ತಮ ಆಹಾರ ಒದಗಿಸಲು ಸಾವಯವ ಕೃಷಿ ಪದ್ಧತಿಗೆ ಹೆಚ್ಚು ಉತ್ತೇಜನ ನೀಡಬೇಕಿದೆ– ಜಿಲ್ಲಾಧಿಕಾರಿ ಡಾ. ಇಟ್ನಾಳ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಎಲ್ಲರಿಗೂ ಉತ್ತಮ ಆಹಾರ ಒದಗಿಸಲು ಸಾವಯವ ಕೃಷಿ ಪದ್ಧತಿಗೆ ಹೆಚ್ಚು ಉತ್ತೇಜನ ನೀಡಬೇಕಾಗಿದ್ದು, ಕೃಷಿ ಮತ್ತು ಪಶು ಸಖಿಯರು ಇಲಾಖಾ ಕಾರ್ಯಕ್ರಮಗಳ ಬಗ್ಗೆ ರೈತರಿಗೆ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್ ಪಟೇಲ್ ಸಭಾಂಗಣದಲ್ಲಿ 2025–26ನೇ ಸಾಲಿನ ಆತ್ಮ ಯೋಜನೆ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪಶುಸಂಗೋಪನೆ ಇಲಾಖೆ, ಮೀನುಗಾರಿಕೆ ಇಲಾಖೆ, ಕೃಷಿ ತಂತ್ರಜ್ಞರ ಸಂಸ್ಥೆ ಮತ್ತು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಆಹಾರ ದಿನಾಚರಣೆ–2025ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆಹಾರ ಮತ್ತು ಕೃಷಿ ಸಂಸ್ಥೆ (ಎಫ್.ಎ.ಒ) ಯ ಸ್ಥಾಪನೆ ದಿನವನ್ನು ವಿಶ್ವ ಆಹಾರ ದಿನಾಚರಣೆಯನ್ನಾಗಿ ಇಂದು ಆಚರಿಸಲಾಗುತ್ತಿದೆ. ಎಲ್ಲಾ ಜನರಿಗೂ ಸಹ ಒಳ್ಳೆಯ ಆಹಾರ ಸಿಗಬೇಕು ಎಂಬ ಉದ್ದೇಶದಿಂದ 'ಉತ್ತಮ ಆಹಾರ ಮತ್ತು ಉತ್ತಮ ಭವಿಷ್ಯಕ್ಕಾಗಿ ಕೈಜೋಡಿಸಿ' ಎಂಬ ಘೋಷವಾಕ್ಯದೊಂದಿಗೆ ಈ ವರ್ಷದ ವಿಶ್ವ ಆಹಾರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಸ್ವಾತಂತ್ರ್ಯ ಬಂದಾಗ ಭಾರತದ ಜನಸಂಖ್ಯೆ ಸುಮಾರು 34 ರಿಂದ 35 ಕೋಟಿ ಇದ್ದು, ಪ್ರಸ್ತುತ 146 ಕೋಟಿಗೆ ತಲುಪಿದೆ. ಪ್ರತಿಯೊಬ್ಬರಿಗೂ ಆಹಾರ ಭದ್ರತೆಯನ್ನು ಒದಗಿಸುವ ಸಲುವಾಗಿ 2013ರಲ್ಲಿ ಅಂದಿನ ಪ್ರಧಾನ ಮಂತ್ರಿಗಳಾದ ಡಾ. ಮನಮೋಹನ ಸಿಂಗ್ ರವರ ನೇತೃತ್ವದ ಭಾರತ ಸರ್ಕಾರವು ಆಹಾರ ಭದ್ರತಾ ಕಾಯ್ದೆಯನ್ನು ಜಾರಿಗೆ ತಂದಿತು. ಇದರಿಂದ ಅಂತ್ಯೋದಯ ಅನ್ನ ಯೋಜನೆಯಡಿ 35 ಕೆ.ಜಿ ಅಕ್ಕಿ ಮತ್ತು ಇತರೆ ಧಾನ್ಯಗಳು, ಬಡ ಕುಟುಂಬಗಳಿಗೆ 5 ಕೆ.ಜಿ ಅಕ್ಕಿ ಹಾಗೂ ಇತರೆ ಧಾನ್ಯಗಳನ್ನು ನೀಡುವಂತಹ ಕಾರ್ಯಕ್ರಮ ಪ್ರಾರಂಭವಾಯಿತು ಎಂದರು.

ಪ್ರಸ್ತುತ ಜನರು ಫಾಸ್ಟ್‌ಡ್ ಸೇವನೆ ಹೆಚ್ಚಾಗಿ ಮಾಡುತ್ತಿದ್ದಾರೆ. ಮಕ್ಕಳು ಸಹ ಚಾಕಲೇಟ್, ಬಿಸ್ಕೇಟ್, ಚಿಪ್ಸ್, ಕುರಕುರೆಯನ್ನು ತಿಂದರೆ, ನಗರ ಪ್ರದೇಶಗಳ ಹೆಚ್ಚು ಜನರು ದಿನನಿತ್ಯ ಮ್ಯಾಗಿ, ಬರ್ಗರ್, ಪಿಜ್ಜಾದಂತಹ ಫಾಸ್ಟ್‌ಡ್ ಬಳಕೆ ಮಾಡುತ್ತಾರೆ. ನಿರಂತರ ಇಂತಹ ಆಹಾರ ಪದಾರ್ಥಗಳ ಸೇವನೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಎಲ್ಲರೂ ಪೌಷ್ಟಿಕ ಆಹಾರಗಳ ಬಳಕೆಗೆ ಆದ್ಯತೆ ನೀಡಬೇಕು. ಉತ್ತಮ ಆಹಾರ ಎಂದರೆ, ಸಮತೋಲಿತ ಆಹಾರವಾಗಿದೆ. ಈ ಹಿನ್ನೆಲೆಯಲ್ಲಿ ಅಂಗನವಾಡಿಗಳಲ್ಲಿ ಚಿಕ್ಕ ಮಕ್ಕಳಿಗೆ ಹಾಗೂ ಗರ್ಭಿಣಿ ಮತ್ತು ಬಾಣಂತಿಯರಿಗೆ, ಶಾಲಾ ಮಕ್ಕಳಿಗೂ ಸಹ ಪೌಷ್ಟಿಕ ಆಹಾರದ ಜೊತೆಗೆ ಹಾಲು, ಬಾಳೆಹಣ್ಣು ಮತ್ತು ಮೊಟ್ಟೆಯನ್ನು ನೀಡಲಾಗುತ್ತದೆ ಎಂದರು.

ಕೃಷಿಯಲ್ಲಿ ರಾಸಾಯನಿಕ ಗೊಬ್ಬರ, ಕೀಟ ನಾಶಕಗಳನ್ನು ಹೆಚ್ಚಾಗಿ ಬಳಕೆ ಮಾಡಿ ಬೆಳೆದ ದವಸ ಧಾನ್ಯಗಳು, ತರಕಾರಿಗಳು, ಹಣ್ಣುಗಳ ಸೇವನೆಯಿಂದಾಗಿ ಮನುಷ್ಯನ ದೇಹದ ಮೇಲೆ ಪ್ರತಿ–ಕೂಲ ಪರಿಣಾಮವುಂಟಾಗುತ್ತದೆ. ಇದನ್ನು ನಾವು ತಡೆಗಟ್ಟಬೇಕು. ಈ ಹಿನ್ನೆಲೆಯಲ್ಲಿ ನಮ್ಮ ಪರಂಪರಾಗತ ಕೃಷಿ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಹಳ್ಳಿಗಳನ್ನು ಸಾವಯವ ಕೃಷಿ ಗ್ರಾಮಗಳನ್ನಾಗಿ ಮಾಡಲು ಪ್ರಯತ್ನಿಸುತ್ತಿದ್ದೇವೆ. ಇದಕ್ಕೆ ಜಿಲ್ಲೆಯ ಎಲ್ಲಾ ರೈತರು ಕೈಜೋಡಿಸಬೇಕು. ಇದರ ಜೊತೆಗೆ ನೀರಿನ ಸಂರಕ್ಷಣೆ ಹಾಗೂ ಹಾಲು, ಮೊಟ್ಟೆ ಮತ್ತು ಮಾಂಸ ಉತ್ಪಾದನೆಯನ್ನು ಸಹ ಸಾವಯವ ಪದ್ಧತಿಯಲ್ಲಿಯೇ ಮಾಡುವ ಅನಿವಾರ್ಯತೆಯಿದ್ದು, ಈ ಬಗ್ಗೆ ಸಂಬಂಧಿಸಿದ ಇಲಾಖೆಗಳ ಮೂಲಕ ರೈತರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಜಂಟಿ ಕೃಷಿ ನಿರ್ದೇಶಕರು ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಟಿ.ಎಸ್. ರುದ್ರೇಶಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕೃಷಿ ತಂತ್ರಜ್ಞರ ಸಂಸ್ಥೆಯ ಉಪಾಧ್ಯಕ್ಷರಾದ ವಿ.ಕೆ. ಕಮತರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಂಗಾವತಿ ಕೃಷಿ ಮಹಾ ವಿದ್ಯಾಲಯ ಕೀಟ ಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ಬದ್ರಿಪ್ರಸಾದ ಪಿ.ಆರ್. ಹಾಗೂ ಗದಗ ಪಶುವೈದ್ಯಕೀಯ ಮಹಾವಿದ್ಯಾಲಯ ಪ್ರಾಣಿ ಆಹಾರ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಬಣಕಾರ ಪಿ.ಎಸ್. ಅವರು ವಿಶೇಷ ಉಪನ್ಯಾಸ ನೀಡಿದರು.

ಸನ್ಮಾನ: ಜಿಲ್ಲೆಯ ಪ್ರಗತಿ ಪರ ರೈತರಿಗೆ ಮತ್ತು ವಿಶೇಷ ಉಪನ್ಯಾಸ ನೀಡಿದ ಉಪನ್ಯಾಸಕರಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಶು ಇಲಾಖೆ ಉಪ ನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಎಂ.ವಿ. ರವಿ, ಉಪ ಕೃಷಿ ನಿರ್ದೇಶಕ ಎಲ್.ಸಿದ್ದೇಶ್ವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಮತ್ತು ಪ್ರಗತಿಪರ ರೈತರು, ಕೃಷಿ ಹಾಗೂ ಪಶು ಸಖಿಯರು ಮತ್ತಿತರರು ಉಪಸ್ಥಿತರಿದ್ದರು. ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕಿ (ರೈತ ಮಹಿಳೆ) ಶಶಿಕಲಾ ಯು. ಸವಣೂರು ಅವರು ಕಾರ್ಯಕ್ರಮ ನಿರೂಪಿಸಿದರು.

ತಂಬಾಕು ಮುಕ್ತ ಯುವ ಅಭಿಯಾನ ಅಂಗವಾಗಿ ರಸಪ್ರಶ್ನೆ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ತಂಬಾಕು ನಿಯಂತ್ರಣ ಕೋಶ, ಕೊಪ್ಪಳ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಯಲಬುರ್ಗಾ, ಪ್ರಾಥಮಿಕ ಆರೋಗ್ಯ ಕೇಂದ್ರ ಗುನ್ನಾಳ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್, ಗುನ್ನಾಳ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಅ.14 ರಂದು ಕಾಲೇಜು ವಿದ್ಯಾರ್ಥಿಗಳಿಗೆ ತಂಬಾಕು ಮುಕ್ತ ಯುವ ಅಭಿಯಾನ ಹಾಗೂ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಗುನ್ನಾಳ ಆಡಳಿತ ವೈದ್ಯಾಧಿಕಾರಿ ಡಾ. ದಯಾನಂದ ಸ್ವಾಮಿ ಅವರು ಯುವ ಜನತೆಗೆ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಯುವಜನತೆಯ ರಕ್ಷಿಸಲು ಸರ್ಕಾರ ವಿವಿಧ ಮಾಧ್ಯಮಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮವನ್ನು ಜಾರಿಗೊಳಿಸಿದೆ. ತಂಬಾಕಿನಲ್ಲಿ 7000 ವಿಷಾನಿಲಗಳು ಇರುತ್ತವೆ. ತಂಬಾಕು ಸೇವನೆಯಿಂದ ಮುಖ್ಯವಾಗಿ ಕ್ಯಾನ್ಸರ್ ನಂತ ಮಾರಕ ರೋಗ ಉಂಟಾಗಿ, ಜೀವಕ್ಕೆ ಹಾನಿಯಾಗುವ ಸಾಧ್ಯತೆ ಇರುತ್ತದೆ. ತಂಬಾಕು ಸೇವನೆಯಿಂದ ಯುವ ಸಮೂಹ ಕುಟುಂಬ ಮತ್ತು ದೇಶಕ್ಕೆ ಹೊರೆಯಾಗುತ್ತದೆ. ಆದ್ದರಿಂದ 2003ರಲ್ಲಿ ಜಾರಿಗೆ ತಂದ ಕೋಟ್ಪಾ ಕಾಯ್ದೆ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಂಡು ಜಾಗೃತರಾಗಬೇಕು. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದವರಿಗೆ ಜೈಲು ಮತ್ತು ದಂಡ ಶಿಕ್ಷೆ ವಿಧಿಸಲಾಗುತ್ತದೆ. ಆದ್ದರಿಂದ ಇಂದಿನ ಯುವ ಸಮೂಹ ತಂಬಾಕು ಸೇವನೆಯಿಂದ ತಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳದೆ ಆರೋಗ್ಯವಂತ ಮನುಷ್ಯರಾಗಿ ಬಾಳಬೇಕೆಂದು ಕರೆ ನೀಡಿದರು. ಜೀವನ ಆಯ್ದುಕೊಳ್ಳಿ ತಂಬಾಕನ್ನಲ್ಲ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಪ್ಪಿ.ಪಿ. ಅವರು ಮಾತನಾಡಿ, ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳು, ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಅಸಾಂಕ್ರಾಮಿಕ ರೋಗಗಳ ಬಗ್ಗೆ ಮುಂಜಾಗ್ರತೆ ತೆಗೆದುಕೊಳ್ಳುವ ಕುರಿತು, ನಿರಂತರವಾಗಿ ವಿವಿಧ ಮಾಧ್ಯಮದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ನಂತರ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಾದ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ, ಆರ್.ಸಿ.ಹೆಚ್. ಕಾರ್ಯಕ್ರಮ, ರಾಷ್ಟ್ರೀಯ ಶ್ರವಣದೋಷ ನಿವಾರಣಾ ಮತ್ತು ನಿಯಂತ್ರಣ ಕಾರ್ಯಕ್ರಮ, ಹದಿಹರೆಯದವರ ಆರೋಗ್ಯದ ಮಹತ್ವ, ಸೊಳ್ಳೆಗಳಿಂದ ಹರಡುವ ರೋಗಗಳ ನಿಯಂತ್ರಣ, ಕುಟುಂಬ ಕಲ್ಯಾಣ ಕಾರ್ಯಕ್ರಮ, ಮಾನಸಿಕ ಆರೋಗ್ಯ ಕಾರ್ಯಕ್ರಮ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ, ಐ.ಡಿ.ಎಸ್.ಪಿ, ಅಸಾಂಕ್ರಾಮಿಕ ರೋಗಗಳ ಬಗ್ಗೆ ಹಾಗೂ ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ವಿವರವಾಗಿ ಮಾತನಾಡಿದರು.

ರಸಪ್ರಶ್ನೆ ಸ್ಪರ್ಧೆಯಲ್ಲಿ 8 ತಂಡಗಳು ಭಾಗವಹಿಸಿದ್ದವು. ಅದರಲ್ಲಿ ಮಂಜುನಾಥ ವಿರುಪಾಕ್ಷಿ ಪ್ರಥಮ(ರೂ.500), ರಾಜಬಕ್ಷಿ ಸಂಗಮೇಶ ದ್ವಿತೀಯ(ರೂ.300) ಹಾಗೂ ನಿವೇದಿತಾ ಹಾಗೂ ಸೃಷ್ಟಿ ತೃತೀಯ(ರೂ200) ಬಹುಮಾನಗಳನ್ನು ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಎನ್.ಟಿ.ಸಿ.ಪಿ ಕಾರ್ಯಕ್ರಮದ ಸಮಾಜ ಕಾರ್ಯಕರ್ತೆ ಸರಸ್ವತಿ, ಕಾಲೇಜಿನ ಪ್ರಾಂಶುಪಾಲರಾದ ವಿಜಯಕುಮಾರ, ಎನ್.ಟಿ.ಸಿ.ಪಿ ಕಾರ್ಯಕ್ರಮದ ಸಲಹೆಗಾರ ಸಂಗಮೇಶ, ಎಸ್.ಟಿ.ಎಸ್ ಕೃಷ್ಣಾಜೀ, ಆರ್.ಕೆ.ಎಸ್.ಕೆ ಆಪ್ತಸಮಾಲೋಚಕ ಮಹೇಶ, ಐ.ಸಿ.ಟಿ.ಸಿ ಆಪ್ತಸಮಾಲೋಚಕ ಬಾಳಪ್ಪ, ಕಾಲೇಜಿನ ಸಹಉಪನ್ಯಾಸಕ ವರ್ಗದವರು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಯ್ಯ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಕಾವೇರಿ, ಸಮುದಾಯ ಆರೋಗ್ಯಾಧಿಕಾರಿ ಮಂಜುಳಾ, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

ಮೂರು ದಿನಗಳ "ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ"

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.16–ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ

ನಾಳೆ ಫಿಜಿಯೋಥೆರಪಿ ಕಾಲೇಜು ಕಟ್ಟಡ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.16–ನಗರದ ಬಿವಿವಿ ಸಂಘದ ಫಿಜಿಯೋಥೆರಪಿ ಹಾಗೂ ಸ್ಪೀಚ್ ಆ್ಯಂಡ್ ಹಿಯರಿಂಗ್ ಕಾಲೇಜುಗಳ ಕಟ್ಟಡ ಕಾರ್ಯ ಪೂರ್ಣಗೊಂಡಿದ್ದು ಸಂಘದ 119ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಅ.18 ರಂದು ಬೆಳಗ್ಗೆ 10.30 ಗಂಟೆಗೆ ಮೆಡಿಕಲ್ ಕಾಲೇಜಿನ ಆವರಣದಲ್ಲಿರುವ ಕಟ್ಟಡಗಳನ್ನು ಉದ್ಘಾಟಿಸಲಾಗುವುದು ಎಂದು ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕೊಪ್ಪಳದ ಶ್ರೀ ಅಭಿನವಗವಿಸಿದ್ಧೇಶ್ವರ ಮಹಾಸ್ವಾಮಿಗಳು ವಹಿಸುವರು. ಉದ್ಘಾಟಕರಾಗಿ ಭಾರತ ಸರ್ಕಾರ ನವದೆಹಲಿಯ ಎಚ್.ಆರ್, ಸಾಮರ್ಥ್ಯ ನಿರ್ಮಾಣ ಆಯೋಗ ಸದಸ್ಯ ಡಾ.ಆರ್ ಬಾಲಸುಬ್ರಮಣ್ಯಂ ಆಗಮಿಸುವರು. ಸಮಾರಂಭದಲ್ಲಿ ಸಂಘದ ಎಲ್ಲ 175 ಸಂಸ್ಥೆಯಗಳ ಶಿಕ್ಷಕರು, ಪದಾಧಿಕಾರಿಗಳು, ಸಂಘದ ಸದಸ್ಯರುಗಳ ಭಾಗವಹಿಸುವರು ಎಂದರು.

ಜಿಲ್ಲೆಯಲ್ಲಿ ಫಿಜಿಯೋಥೆರಪಿ ಪರಿಣಿತ ವೈದ್ಯರ ಕೊರತೆಯ ನಿವಾರಣೆಗಾಗಿ ಬಿ.ವಿ.ವಿ ಸಂಘದಡಿ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ 2019 ರಲ್ಲಿ 40 ವಿದ್ಯಾರ್ಥಿಗಳ ಪ್ರವೇಶ ದಾಖಲಾತಿಯೊಂದಿಗೆ ಫಿಜಿಯೋಥೆರಪಿ ಕಾಲೇಜನ್ನು ಆರಂಭಿಸಲಾಯಿತು. ಬಾಗಲಕೋಟೆ ಜಿಲ್ಲೆಯಲ್ಲಿ ಸ್ಥಾಪನೆಯಾದ ಪ್ರಥಮ ಮತ್ತು ಏಕೈಕ ಫಿಜಿಯೋಥೆರಪಿ ಕಾಲೇಜು ಇದಾಗಿದೆ ಎಂದ ಚರಂತಿಮಠ, 2019 ಮತ್ತು 2020 ನೇ ವರ್ಷದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಪದವಿ ಪಡೆದು ಈಗ ವಿವಿಧ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಅವರು ಹೇಳಿದರು.

2024–25 ನೇ ಶೈಕ್ಷಣಿಕ ವರ್ಷದಿಂದ ದಾಖಲಾತಿಯನ್ನು 60 ಕ್ಕೆ ಹೆಚ್ಚಿಸಿ ವಿಶ್ವವಿದ್ಯಾಲಯದಿಂದ ಅನುಮತಿ ದೊರೆತಿದೆ, ಆರು ವಿಷಯಗಳಲ್ಲಿ ಎಮ್.ಪಿ.ಟಿ (ಪಿ.ಜಿ) ಕೋರ್ಸ್ ಪ್ರಾರಂಭಗೊಂಡಿದೆ, ಎಮ್.ಪಿ.ಟಿ ಕೋರ್ಸಿನ ಆರು ವಿಷಯಗಳಲ್ಲಿ ಪ್ರತಿವರ್ಷ 18 ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿರುವರು. ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ 10 ಕೋಟಿ ರೂಪಾಯಿಗಳ ವೆಚ್ಚದಲ್ಲಿ 31,805 ಚದರಡಿಗಳ ವಿಸ್ತೀರ್ಣದಲ್ಲಿ ಕಾಲೇಜು ಕಟ್ಟಡವನ್ನು ನಿರ್ಮಿಸಲಾಗಿದೆ. ಈ ಹೊಸ ಕಟ್ಟಡದಲ್ಲಿ ಅತ್ಯಾಧುನಿಕ ಬೋಧನಾ ಕೊಠಡಿಗಳು, ಪ್ರಯೋಗಾಲಯಗಳು, ಗ್ರಂಥಾಲಯ, ಡಿಜಿಟಲ್ ಲ್ಯಾಬ್, ಸಿಬ್ಬಂದಿ ಕೊಠಡಿಗಳ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು.

ಸಂವಹನ ಮತ್ತು ಶ್ರವಣ (ಸ್ಪೀಚ್ ಆ್ಯಂಡ್ ಹಿಯರಿಂಗ್) ದೋಷದಿಂದ ನರಳುತ್ತಿರುವ ಮಕ್ಕಳ ಸೂಕ್ತ ಚಿಕಿತೆ–ಗಾಗಿ ತಜ್ಞ ಚಿಕಿತ್ಸಕರನ್ನು ರೂಪಿಸಲು ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಸ್ಪೀಚ್ ಆ್ಯಂಡ್ ಹಿಯರಿಂಗ್ ಕಾಲೇಜನ್ನು ಆರಂಭಿಸಲಾಗುತ್ತಿದೆ. ರಾಜೀವಗಾಂಧಿ ಆರೋಗ್ಯವಿಜ್ಞಾನಗಳ ವಿಶ್ವವಿದ್ಯಾಲಯದ ಶಿಫಾರಸಿನನ್ವಯ 40 ವಿದ್ಯಾರ್ಥಿಗಳ ಪ್ರವೇಶ ದಾಖಲಾತಿಯೊಂದಿಗೆ ಕಾಲೇಜು ಆರಂಭಕ್ಕೆ ಕರ್ನಾಟಕ ರಾಜ್ಯ ಸರ್ಕಾರ ಅನುಮತಿ ನೀಡಿದೆ. ಭಾರತೀಯ ಪುನರ್ವಸತಿ ಮಂಡಳಿ, ನವದೆಹಲಿ ಅವರ ಪರಿವೀಕ್ಷಣೆ ನಂತರ ಕಾಲೇಜು ಆರಂಭಗೊಳ್ಳಲಿದೆ. 12 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಕಾಲೇಜು ಕಟ್ಟಡ ನಿರ್ಮಾಣಗೊಂಡಿದೆ. ಬೋಧಕರ ನೇಮಕ ಮತ್ತು ಅಗತ್ಯದ ಉಪಕರಣಗಳ ಖರೀದಿ ಕಾರ್ಯ ಪೂರ್ಣಗೊಂಡಿದ್ದು 2026 ನೇ ಶೈಕ್ಷಣಿಕ ವರ್ಷದಿಂದ ಕಾಲೇಜು ಕಾರ್ಯಾರಂಭಿಸಲಿದೆ ಎಂದು ವೀರಣ್ಣ ಚರಂತಿಮಠ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆ ಹಾಗೂ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ ಉಪಸ್ಥಿತರಿದ್ದರು.

ನಿವೃತ್ತ ಶಿಕ್ಷಕಿ ಹಿರೇಮಠಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.16–38 ವರ್ಷಗಳ ಕಾಲ ಸಹ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ನವನಗರದ ಶ್ರೀಮತಿ ಎಸ್.ಜಿ.ಹಿರೇಮಠ ಅವರನ್ನು ಚಾಂದ ಫೌಂಡೇಶನ್ ವತಿಯಿಂದ ಸಮಾಜ ಸೇವಕ ಚಾಂದ ನದಾಫ್ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಚಾಂದ ನದಾಫ, ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಬೇಕು ಎಂಬ ಕನಸು ಹೊತ್ತು ರಾಯಚೂರ ಜಿಲ್ಲೆಯ ಮಾನ್ವಿ ತಾಲೂಕಿನ ಪೋತಾಪುರದಲ್ಲಿ ಸಹ ಶಿಕ್ಷಕಿಯಾಗಿ ತಮ್ಮ ವೃತ್ತಿ ಜೀವನ ಪ್ರಾರಂಭಿಸಿದ ಹಿರೇಮಠ, ಮಕ್ಕಳ ಬಾಳಿಗೆ ಬೆಳಕಾಗಿದ್ದಾರೆ. ಅವರ ಸೇವೆ ಸ್ಮರಣೀಯ ಎಂದರು.

ರಿಯಾಜ್ ಹುಸೇನ ನದಾಫ, ಚನ್ನಬಸಯ್ಯ ಹಿರೇಮಠ ಉಪಸ್ಥಿತರಿದ್ದರು.

ದೀಪಾವಳಿ ಪ್ರಯುಕ್ತ ದೀಪ ಸಂಜೀವಿನಿ ಕಾರ್ಯಕ್ರಮ
ದೀಪಗಳ ಮಾರಾಟ ಮೇಳಕ್ಕೆ ಸಿಇಓ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.16–ನವನಗರದ ಬಸ್ ನಿಲ್ದಾಣದಲ್ಲಿ ದೀಪಾವಳಿ ಹಬ್ಬದ ನಿಮಿತ್ಯವಾಗಿ ಸ್ವ–ಸಹಾಯ ಸಂಘಗಳ ಸದಸ್ಯರು ಉತ್ಪಾದಿಸಿದ ದೀಪಗಳ ಮಾರಾಟ ಮೇಳಕ್ಕೆ ಜಿ.ಪಂ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಶಶಿಧರ ಕುರೇರ್ ಗುರುವಾರ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ, ತಾಲೂಕಾ ಪಂಚಾಯತ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಅಭಿಯಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ದೀಪ ಸಂಜೀವಿನಿ ವಿವಿಧ ದೀಪಗಳ ಮಾರಾಟ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿ ಮಾಡುವ ಉದ್ದೇಶದಿಂದ ದೀಪ ಸಂಜೀವಿನಿ ಕಾರ್ಯಕ್ರಮ ಆರಂಭಿಸಲಾಗಿದೆ. ಸ್ವ–ಸಹಾಯ ಗುಂಪುಗಳ ಬಲವರ್ಧನೆಗೆ ಇದು ಒಂದು ಪ್ರಮುಖ ಹಂತವಾಗಿದೆ ಎಂದರು.

ಗ್ರಾಮೀಣ ಮಹಿಳೆಯ ಕೈಯಿಂದ ತಯಾರಾದ ಅಕ್ಕಾ ಬ್ರ್ಯಾಂಡ್ ಉತ್ಪನ್ನಗಳು ಗುಣಮಟ್ಟ ಮತ್ತು ವಿಶ್ವಾಸಕ್ಕೆ ಹೆಸರಾಗಿವೆ. ದೀಪಾವಳಿ ಹಬ್ಬದ ನಿಮಿತ್ಯ ವಿವಿಧ ಮಾದರಿಯ ಹಾಗೂ ವಿನ್ಯಾಸವುಳ್ಳ ದೀಪಗಳನ್ನು ತಯಾರಿಸಿ ಮಾರಾಟ ಮಾಡಲು ಮೇಳ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ನಂತರ ಸ್ವ–ಸಹಾಯ ಗುಂಪುಗಳ ಸದಸ್ಯರು ತಯಾರಿಸಿರುವ ವಿವಿಧ ವಿನ್ಯಾಸಗಳ ದೀಪಗಳನ್ನು ವೀಕ್ಷಣೆ ಮಾಡಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಬಾಗಲಕೋಟೆ ಘಟಕ ವ್ಯವಸ್ಥಾಪಕ ಕೃಷ್ಣಪ್ಪ ಚವ್ಹಾಣ ಸೇರಿದಂತೆ ಸ್ವ–ಸಹಾಯ ಗುಂಪಿನ ಸದಸ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಹಿಳಾ ಸ್ವಸಹಾಯ ಗುಂಪಿನ ಸದಸ್ಯರು ತಮ್ಮ ಯಶೋಗಾಥೆಗಳನ್ನು ಹಂಚಿಕೊಂಡರು. ತರಬೇತಿ, ಉಳಿತಾಯ, ಸ್ವಉದ್ಯೋಗ ಮತ್ತು ಸಣ್ಣ ಕೈಗಾರಿಕಾ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

ಗುಂಡಪ್ಪ ಮಡಿಕೆಗೆ ವಿದ್ಯಾ ವಿಭೂಷಣ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಬಸ ವ ಕ ಲ್ಯಾಣ: ತಾಲೂಕಿನ ಹಾರಕೂಡದ ಚೆನ್ನಬಸವೇಶ್ವರ ಸಂಸ್ಥಾನ ಹಿರೇಮಠದಲ್ಲಿ ಡಾ.ಚನ್ನವೀರ ಶಿವಾಚಾರ್ಯರ ಸಾನಿಧ್ಯದಲ್ಲಿ ವಿದ್ಯಾ ವಿಭೂಷಣ ಪ್ರಶಸ್ತಿ ಪ್ರದಾನ ಸಮಾರಂಭ ಸಡಗರದಿಂದ ಜರುಗಿತು. ಶಿಕ್ಷಣ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಸರಳ ಜೀವಿಗಳು, ಬಸವಕಲ್ಯಾಣ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಅತ್ಯುತ್ತಮ ಸೇವೆ ಸಲ್ಲಿಸಿ ಶಿಕ್ಷಣ ಪ್ರೇಮಿಗಳ, ಜನಪ್ರತಿನಿಧಿಗಳ ಹೃದಯ ಗೆದ್ದಿದ ಗುಂಡಪ್ಪ ಮಡಿಕೆ ಇವರಿಗೆ ವಿದ್ಯಾ ವಿಭೂಷಣ ಪ್ರಶಸ್ತಿ ನೀಡಿ ದಂಪತಿಗಳಿಗೆ ಪೂಜ್ಯ ಡಾ. ಚೆನ್ನವೀರ ಶಿವಾಚಾರ್ಯರು ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಶಾಸಕ ಶರಣು ಸಲಗರ್, ಕಾಡ ಅಧ್ಯಕ್ಷ ಬಾಬು ಹೊನ್ನಾನಾಯಕ, ಮಲ್ಲಿನಾಥ ಹಿರೇಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಗಂಡು ಮಗುವಿನ ಪೋಷಕರ ಪತ್ತೆಗೆ ಮನವಿ



ಎನ್.ಐ.ಸಿ.ಯು. ವಾರ್ಡ್‌ನಲ್ಲಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.16– ಕಲಬುರಗಿಯ ಆಜಾದಪೂರ ರಸ್ತೆಯ ಚುನ್ನಾಬಟ್ಟಿಯ ಮೈನೋದ್ದಿನ ಮಸೀದಿ ಹತ್ತಿರದಲ್ಲಿ ಯಾರೋ ಬ್ಬರು ಬಿಟ್ಟು ಹೋಗಿರುವ ಒಂದು ದಿವಸದ ನವಜಾತ ಗಂಡು ಶಿಶುವನ್ನು ರಕ್ಷಿಸಿ ಮಗುವನ್ನು ಕಲಬುರಗಿ ಜಿಲ್ಲಾ ಆಸ್ಪತ್ರೆಯ ದಾಖಲಿಸಲಾಯಿತು. ನಂತರ ಈ ಗಂಡು ಮಗುವಿನ ರಕ್ಷಣೆ, ಪಾಲನೆ ಮತ್ತು ಪೋಷಣೆಗಾಗಿ ಕಲಬುರಗಿಯ ಅಮೂಲ್ಯ (ಜಿ) ಶಿಶು ಗೃಹದಲ್ಲಿ ದಾಖಲು ಮಾಡಲಾಗಿದೆ ಎಂದು ಕಲಬುರಗಿಯ ಅಮೂಲ್ಯ (ಜಿ) ಶಿಶು ಗೃಹದ ಅಧೀಕ್ಷಕರು ತಿಳಿಸಿದ್ದಾರೆ.

ರೈತರಲ್ಲಿ ಬೆಳೆ ವಿಮೆ ಕುರಿತು ಅರಿವು ಮೂಡಿಸಿ–ಗದ್ದಿಗೌಡರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.18–ಬೆಳೆ ಹಾನಿ ಅಪಾಯ ತಪ್ಪಿಸಲು ರೈತರಲ್ಲಿ ಬೆಳೆ ವಿಮೆ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕಾರ್ಯ ಮಾಡಬೇಕು ಎಂದು ಸಂಸದ ಪಿ.ಸಿ.ಗದ್ದಿಗೌಡರ ಸೂಚಿಸಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಗುರುವಾರ ಜರುಗಿದ 2025–26 ನೇ ಸಾಲಿನ ಎರಡನೇ ತ್ರೈಮಾಸಿಕ ದಿಶಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈ ಬಾರಿ ಮೊದಲಿಗಿಂತ ಅಧಿಕ ಪ್ರಮಾಣದಲ್ಲಿ ಈರುಳ್ಳಿ, ದಾಳಿಂಬೆ ಬೆಳೆಯಲಾಗಿದ್ದು, ರೈತರು ಮೊದಲೇ ಬೆಳೆ ವಿಮೆ ಮಾಡಿಸಿಕೊಂಡಿದ್ದಲ್ಲಿ, ಬೆಳೆ ಹಾನಿಯಂತಹ ಅಪಾಯವನ್ನ ಸಮರ್ಥವಾಗಿ ಎದುರಿಸಬಹುದಾಗಿದೆ ಎಂದರು. ಬಾಗಲಕೋಟೆ–ಕುಡಚಿ ರೈಲು ಮಾರ್ಗ ಕಾಮಗಾರಿ ಸ್ಥಿತಿಗತಿ ಪರಿಶೀಲಿಸಿ, ಕೇಂದ್ರದಲ್ಲಿ ಇದಕ್ಕೆ ಸಂಬಂಧಿಸಿದಂತೆ ಅನುದಾನ ಮತ್ತು ಸಂಪನ್ಮೂಲಕ್ಕೆ ಕೊರತೆ ಇರುವದಿಲ್ಲ, ಆದರೆ ಭೂ ಮಾಲೀಕರ ಕುಟುಂಬ ವಾಜ್ಯ ಮತ್ತು ಇತರೇ ಕೇಸ್ ವಿಚಾರದಿಂದ ಈಗಾಗಲೇ ಯೋಜನೆಯು ವಿಳಂಬವಾಗಿದೆ. ಸ್ಥಳೀಯ ಸಮಸ್ಯೆಗಳನ್ನ ಬೇಗ ಪರಿಹರಿಸಿಕೊಳ್ಳುವಂತೆ ಅವರು ಜಿಲ್ಲಾಡಳಿತ ಮತ್ತು ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಲಜೀವನ ಮೀಶನ್ ಯೋಜನೆಯಡಿಯಲ್ಲಿ ಪೂರ್ಣಗೊಳಿಸಿರುವಂತಹ 608 ಕಾಮಗಾರಿಗಳಲ್ಲಿ ಯಾವುದಾದರೂ ಒಂದರ ಪೈಕಿ ದೂರು ಬಂದರೂ ಕೂಡ ತಕ್ಷಣ ಪರಿಶೀಲಿಸುವ ಕಾರ್ಯವಾಗಬೇಕು. ಪ್ರಧಾನಮಂತ್ರಿ ಆವಾಸ್ ಯೋಜನೆಗಳ ಮೊತ್ತವನ್ನ ಹೆಚ್ಚಳಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು. ಎರಡನೇ ಹಂತದಲ್ಲಿರುವ ಪ್ರಧಾನ ಮಂತ್ರಿ ಆವಾಸ್ ಯೋಜನೆ ಫಲಾನುಭವಿಗಳ ಅಂಕಿ ಸಂಖ್ಯೆಗಳ ಕುರಿತು ಮಾಹಿತಿ ನೀಡುವಂತೆ ಅವರು ತಿಳಿಸಿದರು.

ಜಿಲ್ಲೆಯಲ್ಲಿ ಪೋಕ್ಸೋ ಪ್ರಕರಣಗಳ ನಿಯಂತ್ರಣಕ್ಕೆ ಸೂಕ್ತ ಜಾಗೃತಿಯು ಅಗತ್ಯವಾಗಿದೆ. ಪ್ರಕರಣಗಳಲ್ಲಿ ಶಿಕ್ಷೆಗೊಳಗಾದವರ ಮತ್ತು ದಂಡದ ಮೊತ್ತದ ಕುರಿತು ಪ್ರಚಾರ ನೀಡಿದಲ್ಲಿ, ಭಯದಿಂದ ಪ್ರಕರಣಗಳ ಸಂಖ್ಯೆ ಕಡಿಮೆಯಾಗುತ್ತವೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಂಬಂಧಿಸಿದ ಇಲಾಖೆಗಳು ಜಂಟಿಯಾಗಿ ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಕಾನೂನಿನ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದು ಗದ್ದಿಗೌಡರ ಹೇಳಿದರು.

ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳಿಗೆ ಸಾಕಷ್ಟು ಜನರು ನೊಂದಣಿಯಾಗಿದ್ದು, ನಿಜವಾದ ಕಾರ್ಮಿಕರನ್ನ ಗುರುತಿಸಿ, ಅರ್ಹ ಫಲಾನುಭವಿಗಳಿಗೆ ಸೌಲಭ್ಯ ನೀಡುವ ಕೆಲಸ ಅಧಿಕಾರಿಗಳಿಂದ ಆಗಬೇಕಿದೆ ಎಂದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಪ್ಯಾಕೆಜ್ 03 ಮತ್ತು 04ರ ಕಾಮಗಾರಿಯ ಪ್ರಗತಿ ಮತ್ತು ಸಮಸ್ಯೆಗಳ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ದುಡಿಮೆಯ ಜೊತೆ ಉಳಿತಾಯವೂ ಮುಖ್ಯ–ಶೀಗಿಹಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.16– ವ್ಯಕ್ತಿಯ ದುಡಿಮೆಯ ಜೊತೆಗೆ ಉಳಿತಾಯವೂ ಬಹಳ ಮುಖ್ಯವಾಗಿದೆ ಎಂದು ಲಿಯಾಪಿ ಬೆಳಗಾವಿ ವಿಭಾಗೀಯ ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ ಶೀಗಿಹಳ್ಳಿ ಹೇಳಿದರು.

ಸ್ಥಳೀಯ ಭಾರತೀಯ ಜೀವವಿಮಾ ನಿಗಮದ ಪ್ರತಿನಿಧಿಗಳ ಕ್ಷೇಮಾಭಿವೃದ್ಧಿ ಸಂಘ ಹಾಗೂ ಬೀಳಗಿ ಸಂಪರ್ಕ ಶಾಖೆಯ ಸರ್ವ ಸದಸ್ಯರ ಸಾಮಾನ್ಯ ಸಭೆ ಮತ್ತು ಶೈಕ್ಷಣಿಕ ಕಾರ್ಯಗಾರ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಜೀವವಿಮೆ ಕುಟುಂಬಕ್ಕೆ ಭದ್ರತೆ ಒದಗಿಸುವುದಲ್ಲದೇ ಉಳಿತಾಯ ಮಾಡಿರುವುದು ಆಪತ್ಕಾಲದಲ್ಲಿ ನೆರವಿಗೆ ಬರುತ್ತದೆ ಎಂದರು.

ಲಿಯಾಪಿ ಸಂಘಟಣೆ ವಿಭಾಗ ಮಟ್ಟದಲ್ಲಿ ಸಂಘಟಿತ ಹೋರಾಟಗಳ ಮೂಲಕ ಜಿಎಸ್‌ಟಿ ರದ್ಧತಿ, ಗ್ರೂಪ್ ಇನ್ಸೂರೆನ್ಸ್, ಮೆಡಿಕ್ಲೇಮ ಸೇರಿದಂತೆ ಅನೇಕ ಪ್ರಮುಖ ಬೇಡಿಕೆಗಳು ಹೋರಾಟದ ಫಲವಾಗಿ ಲಭಿಸಿವೆ ಎಂದು ಶೀಗಿಹಳ್ಳಿ ಹೇಳಿದರು.

ಬಾಗಲಕೋಟೆ ಶಾಖೆಯ ಶಾಖಾಧಿಕಾರಿ ಎಮ್.ಡಿ.ರಕ್ಷಿತ ಮುಖ್ಯ ಅತಿಥಿಗಳಾಗಿ ಮಾತನಾಡಿ, ಎಲ್‌ಐಸಿ ದೇಶದ ಅಭಿವೃದ್ಧಿಯಲ್ಲಿ ಮಹತ್ತರ ಪಾತ್ರ ನಿರ್ವಹಿಸುತ್ತಿದ್ದು, ಸಾಮಾಜಿಕ ವ್ಯವಸ್ಥೆಗೂ ಮಹಾನ್ ಕೊಡುಗೆ ನೀಡುತ್ತಿರುವ ಮಹಾನ್ ಸಂಸ್ಥೆಯಾಗಿದೆ. ಮನುಷ್ಯನಿಗೆ ಬದುಕಲು ಅನ್ನ, ನೀರು ಎಷ್ಟು ಅವಶ್ಯವೋ ಜೀವನದ ಭದ್ರತೆಗೆ ಎಲ್‌ಐಸಿಯೂ ಬಹಳ ಮುಖ್ಯವಾಗಿದೆ ಎಂದರು.

ಎಲ್‌ಐಸಿ ಶಿರಸಿಯ ನಿವೃತ್ತ ಅಭಿವೃದ್ಧಿ ಅಧಿಕಾರಿ ಅನಂತ ಪದ್ಮನಾಭ ಉಪನ್ಯಾಸ ನೀಡಿ, ಎಲ್.ಐಸಿಯ ಮಹತ್ವ, ಗ್ರಾಹಕರು ಹಾಗೂ ಪ್ರತಿನಿಧಿಗಳಿಗೆ ಆಗುವ ಲಾಭಗಳ ಕುರಿತು ವಿವರಿಸಿ, ಪ್ರತಿಯೊಬ್ಬ ಪ್ರಜೆ ಉಳಿತಾಯ ಮನೋಭಾವ ಹೊಂದಿ ಜೀವವಿಮೆ ಮಾಡಿಸಿಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆಯನ್ನು ಸಂಘಟನೆಯ ಅಧ್ಯಕ್ಷ ಎಂ.ವಾಯ್.ಹುಲ್ಲಿಕೇರಿ ವಹಿಸಿದ್ದರು. ಉಪಶಾಖಾಧಿಕಾರಿ ಪಿ.ಆರ್ ಸಿದ್ದೇಶ್ವರ, ಅಭಿವೃದ್ಧಿ ಅಧಿಕಾರಿ ಎ.ಆರ್.ಜಂಬಗಿ ಮಾತನಾಡಿದರು. ಜೆಸಿಸಿ ಸದಸ್ಯ ಜಿ.ಆಯ್.ಸತರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಲಿಯಾಪಿ ಸಂಘಟನೆಯ ವಿಭಾಗದ ಖಜಾಂಚಿ ಪಿ.ಆರ್.ದೇಶಪಾಂಡೆ, ಬಾಗಲಕೋಟೆ ಸಂಘಟನೆಯ ಉಪಾಧ್ಯಕ್ಷ ಎಸ್.ಎಮ್.ಮದರಖಂಡಿ, ಬೀಳಗಿ ಶಾಖಾಧಿಕಾರಿ ಬಲರಾಮ ಪಾಡಿ ವೇದಿಕ

ರಾಜ್ಯ ಮಾಹಿತಿ ಆಯುಕ್ತರ ಪ್ರಮಾಣ ವಚನ

ಬೆಂಗಳೂರು, ಅ16:ನೂತನವಾಗಿ ಕರ್ನಾಟಕರಾಜ್ಯಮಾಹಿತಿಆಯುಕ್ತರಾಗಿ ನೇಮಕವಾಗಿರುವ ಡಾ. ರಿಚರ್ಡ್ ವಿನ್ಸೆಂಟ್ ಡಿಸೋಜ, ಬಿ. ವೆಂಕಟ್ ಸಿಂಗ್ ಹಾಗೂಡಾ.ಮಹೇಶ್‌ವಾಳ್ವೇಕರ್ ಅವರು ಅಧಿಕಾರ ಪ್ರಮಾಣ ವಚನ ಸ್ವೀಕರಿಸಿದರು.

ಇಂದುರಾಜಭವನದಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಸರಳ ಸಮಾರಂಭದಲ್ಲಿಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ನೂತನವಾಗಿ ನೇಮಕವಾಗಿರುವ ಗೌರವಾನ್ವಿತ ರಾಜ್ಯ ಮಾಹಿತಿ ಆಯುಕ್ತರುಗಳಿಗೆ ಅಧಿಕಾರಪ್ರಮಾಣವಚನಬೋಧಿಸಿದರು.

ಬೆಂಗಳೂರು ಪೀಠಕ್ಕೆನೂತನವಾಗಿ ನೇಮಕವಾಗಿರುವ ರಾಜ್ಯ ಮಾಹಿತಿ ಆಯುಕ್ತರುಗಳಾದ ಡಾ. ರಿಚರ್ಡ್ ವಿನ್ಸೆಂಟ್ ಡಿಸೋಜ ಹಾಗೂ ಡಾ. ಮಹೇಶ್‌ವಾಳ್ವೇಕರ್ ಅವರುದೇವರ ಹೆಸರಿನಲ್ಲಿಅಧಿಕಾರಪ್ರಮಾಣವಚನ ಸ್ವೀಕರಿಸಿದರೆ, ಕಲಬುರಗಿ ಪೀಠಕ್ಕೆ ನೇಮಕವಾಗಿರುವಬಿ.ವೆಂಕಟ್ ಸಿಂಗ್ ಅವರುದೇವರುಮತ್ತುಸಂವಿಧಾನದ ಹೆಸರಿನಲ್ಲಿಅಧಿಕಾರಪ್ರಮಾಣವಚನ ಸ್ವೀಕರಿಸಿದರು.

ಈಸಂದರ್ಭದಲ್ಲಿಕರ್ನಾಟಕರಾಜ್ಯ ಮುಖ್ಯಮಾಹಿತಿಆಯುಕ್ತರಾದಅಶಿತ್ ಮೋಹನ್‌ಪ್ರಸಾದ್,ಸರ್ಕಾರದಮುಖ್ಯ ಕಾರ್ಯದರ್ಶಿಡಾ.ಶಾಲಿನಿರಜನೀಶ್, ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರುಗಳು ಹಾಗೂಮಾಹಿತಿಆಯೋಗದನಿವೃತ್ತ ಮಾಹಿತಿಆಯುಕ್ತರುಸೇರಿದಂತೆಇತರೆ ಗಣ್ಯರುಮತ್ತುಪಿರಿಯಅಧಿಕಾರಿಗಳು ಉಪಸ್ಥಿತರಿದ್ದರು.

ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ: ಅಪರಾಧಿಗೆ ಜೀವಾವಧಿ ಶಿಕ್ಷೆ

ಕಲಬುರಗಿ,ಅ.16-ತಾಯಿಯನ್ನು ಕೊಲೆಗೈದು ಅವಳ ಅಪ್ರಾಪ್ತ ವಯಸ್ಸಿನ ಮಗಳನ್ನು ಅಪಹರಿಸಿ ಲೈಗಿಂಕದೌರ್ಜನ್ಯಎಸಗಿದಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಿ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಮಿಲ್ಲತ್ ನಗರದ ಅಜಾದಪುರ ರಸ್ತೆಯ ಶಫಿಶೇಖ್ ಡಿ.ಕೆ. (22) ಶಿಕ್ಷೆಗೆ ಒಳಗಾದವ. 2024 ಮಾ.15 ರಂದು ನಗರದ ಸಬ್ ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿನಡೆದ ಕೊಲೆ, ಪೋಕ್ಸೊ ಪ್ರಕರಣದ ಕುರಿತು ಪಿಐ ಮಹ್ಮದ್ ಫಸಿಯೋದ್ದೀನ್ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾಅಪರಾಧಿಗೆ ಜೀವಾವಧಿ ಶಿಕ್ಷೆ, 20 ವರ್ಷ ಜೈಲು ಮತ್ತು 3.50 ಲಕ್ಷ ದಂಡ ವಿಧಿಸಿ ಆದೇಶ ನೀಡಿದ್ದಾರೆ. ಅಲ್ಲದೆ ನೊಂದ ಬಾಲಕಿಗೆ 5 ಲಕ್ಷ ರೂ.ಪರಿಹಾರ ನೀಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ವಾದ ಮಂಡಿಸಿದ್ದರು.

ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಯವರ ಜೊತೆಯೇ ಸನ್ಮಾನ ಸ್ವೀಕರಿಸುವೆ: ಸಯ್ಯದ ಮುಹಮ್ಮದ ಅಲಿ ಅಲ್ ಹುಸ್ಸೇನಿ

ಕಲಬುರಗಿ:ಕೊಪ್ಪಳದಲ್ಲಿನಡೆಯಲಿರುವ ವಿಶ್ವಶಾಂತಿಸಂದೇಶಸಮಾರಂಭದಲ್ಲಿಪೂಜ್ಯ ಚಿರಂಜೀವಿದೊಡ್ಡಪ್ಪಅಪ್ಪಾಜಿಯವರ ಜೊತೆಯೇಸನ್ಮಾನಸ್ವೀಕರಿಸುವೆಎಂದು ಜನಾಬ ಸಯ್ಯದ ಮುಹಮ್ಮದ ಅಲಿ ಅಲ್‌ಹುಸ್ಸೇನಿತಮ್ಮಮನದಾಸೆಯನ್ನು ವ್ಯಕ್ತಪಡಿಸಿದ್ದಾರೆ.

ಪ್ರವಾದಿ ಮುಹಮ್ಮದ್ ಅವರ 1,500ನೇಜಯಂತಿಯಪ್ರಯುಕ್ತಕೊಪ್ಪಳ ನಗರದ ಪಬ್ಲಿಕ್ ಗ್ರೌಂಡ್‌ನಲ್ಲಿ ಅ.18 ರಂದು ವಿಶ್ವಶಾಂತಿ ಸಂದೇಶ ಸಾರುವ ಐತಿಹಾಸಿಕಸಮಾರಂಭದಲ್ಲಿಇಬ್ಬರಿಗೂ ಸನ್ಮಾನನಡೆಯಲಿದೆ.ಹಿಂದೂಮುಸ್ಲಿಂ ಭಾವೈಕ್ಯತೆಯ ಸಂಕೇತ ಸಾರುವುದು ಇರ್ವರ ಮುಖ್ಯ ಉದ್ದೇಶವಾಗಿದೆ. ವಿಶ್ವಶಾಂತಿ ಸಂದೇಶ ಸಮಾರಂಭದಲ್ಲಿ ನೂತನವಾಗಿಸಜ್ಜಾದೆನಶೀನ್‌ಪದಗ್ರಹಣ ಹಾಗೂ ಕರ್ನಾಟಕ ವಖ್ಫ್ ಮಂಡಳಿ ಅಧ್ಯಕ್ಷರಾಗಿದಕ್ಕಾಗಿ ಸಮಾರಂಭದಲ್ಲಿ ಸನ್ಮಾನ ಜರುಗಲಿದೆ.

ಸಜ್ಜಾದೆನಶೀನಖಾಜಾಬಂದಾನವಾಜ ದರ್ಗಾಕಲಬುರಗಿಹಾಗೂಕರ್ನಾಟಕ ವಖ್ಫ್‌ಮಂಡಳಿಅಧ್ಯಕ್ಷಹಜೀಸಯ್ಯದ ಮುಹಮ್ಮದ ಅಲಿ ಅಲ್ ಹುಸ್ಸೇನಿಯವರು ಕಲಬುರ್ಗಿಯಲ್ಲಿ ಅಕ್ಷರ ಕ್ರಾಂತಿ ಮತ್ತು ಧಾರ್ಮಿಕ ಭಾವೈಕ್ಯತೆ ಸಾರುತ್ತಿದ್ದಾರೆ.ಇದರಜೊತೆಗೆಹಲವಾರು ದಶಕಗಳಿಂದ ಅಕ್ಷರ ಜ್ಞಾನದ ಕಂಪು ಹರಿಸಿದ ಶರಣಬಸವೇಶ್ವರ ಸಂಸ್ಥಾನದ 9ನೆಪೀಠಧಿಪತಿಆಗಿಅಧಿಕಾರಸ್ವೀಕರಿಸಿ ದೊಡ್ಡಪ್ಪ ಅಪ್ಪಾಜಿಯವರಜೊತೆಯೇ ಸನ್ಮಾನ ಸ್ವೀಕರಿಸುತ್ತಿದ್ದಾರೆ.

ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಶಾಸಕರು,ಸಂಸದರುಹಾಗೂರಾಜ್ಯದಹಲವು ಭಾಗಗಳಿಂದಜನರುಭಾಗವಹಿಸಲಿದ್ದಾರೆ. ಧರ್ಮಗುರುಗಳುಹಾಗೂಮಠಾಧೀಶರು ಭಾಗವಹಿಸುವ ಈ ಸಮಾರಂಭದಿಂದ ಭಾವೈಕತೆಯಸಂದೇಶನೀಡುವಉದ್ದೇಶವಿದೆ ಹೆಚ್ಚಿನ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಮ್ ಅಹ್ಮದ್ ತಿಳಿಸಿದ್ದಾರೆ.

ಕನ್ನಡ ರಾಜ್ಯೋತ್ಸವ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸೋಣ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಬೀದರ, ಅ.16 : ಜಿಲ್ಲೆಯಲ್ಲಿ ನವೆಂಬರ್.1 ರಂದು ಕನ್ನಡ ರಾಜ್ಯೋತ್ಸವವನ್ನುಅರ್ಥಪೂರ್ಣವಾಗಿ ಹಾಗೂ ಆಕರ್ಷಕವಾಗಿ ಆಚರಿಸಲು ಕ್ರಮವಹಿಸಬೇಕೆಂದುಜಿಲ್ಲಾಧಿಕಾರಿ ಶಿಲ್ಪಾಶರ್ಮಾಅವರುಅಧಿಕಾರಿಗಳಿಗೆ ಸೂಚಿಸಿದರು. ಅವರು ಗುರುವಾರ ಜಿಲ್ಲಾಧಿಕಾರಿಗಳಕಚೇರಿಸಭಾಂಗಣದಲ್ಲಿ ನವೆಂಬರ್.1ರಕನ್ನಡರಾಜ್ಯೋತ್ಸವ ಆಚರಣೆಕುರಿತುನಡೆದಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಕನ್ನಡರಾಜ್ಯೋತ್ಸವ ಕಾರ್ಯಕ್ರಮವನ್ನುವ್ಯವಸ್ಥಿತವಾಗಿ ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿರುತ್ತದೆ.ಆಯಾಸಮಿತಿಗಳಿಗೆ ವಹಿಸಿದ ಕಾರ್ಯವನ್ನು ವಿಶೇಷ ಆಸಕ್ತಿಯಿಂದನಿರ್ವಹಿಸಬೇಕು.ಪ್ರತಿ ವರ್ಷದಂತೆಈವರ್ಷವುಸಹಕನ್ನಡ ರಾಜ್ಯೋತ್ಸವದಹಿಂದಿನದಿನಸರ್ಕಾರಿ ಕಚೇರಿಹಾಗೂನಗರದವಿವಿಧವೃತ್ತಿಗಳಲ್ಲಿ ಸ್ವಚ್ಛತೆ, ವಿದ್ಯುತ್ ದೀಪಾಲಂಕಾರಕ್ಕೆ ಕ್ರಮ ಕೈಗೊಳ್ಳಬೇಕೆಂದರು.

ನವೆಂಬರ್.1 ರಂದುಬೆಳಿಗ್ಗೆ7.45 ಗಂಟೆಗೆಸರಕಾರಿಅರೇಸರ್ಕಾರಿಹಾಗೂ ಸಂಘ-ಸಂಸ್ಥೆಗಳ ಕಟ್ಟಡಗಳ ಮೇಲೆ ಕಡ್ಡಾಯವಾಗಿರಾಷ್ಟ್ರಧ್ವಜಾರೋಹಣ ಮಾಡಿಎಲ್ಲಾಕಚೇರಿಯಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಎಲ್ಲಾ ಶಾಲಾ ಕಾಲೇಜುಮಕ್ಕಳೊಂದಿಗೆಬೆಳಿಗ್ಗೆ7.50ಕ್ಕೆ ಬಸವೇಶ್ವರವೃತ್ತದಲ್ಲಿಸೇರುವುದು. ನಂತರ ಬೆಳಿಗ್ಗೆ 8 ಗಂಟೆಗೆ ತಾಯಿ ಭುವನೇಶ್ವರಿಅವರಭಾವಚಿತ್ರದೊಂದಿಗೆ ಮೆರವಣಿಗೆಪ್ರಾರಂಭಿಸಲಾಗುವುದು. ಈಮೆರವಣಿಗೆಯುನಗರದನಗರದ ಭಗತಸಿಂಗವೃತ್ತ,ಅಂಬೇಡ್ಕರ್‌ವೃತ್ತ, ಜನರಲ್ ಕರಿಯಪ್ಪ ವೃತ್ತದಿಂದ ನೇರವಾಗಿನಗರದನೆಹರುಕ್ರೀಡಾಂಗಣ ಸೇರಲಿದೆ. ನಂತರ ಬೆಳಿಗ್ಗೆ 9 ಗಂಟೆಗೆ ಜಿಲ್ಲಾನೆಹರುಕ್ರೀಡಾಂಗಣದಲ್ಲಿಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಧ್ವಜಾರೋಹಣ ಮಾಡಲಿದ್ದಾರೆ ಎಂದು ಹೇಳಿದರು. ಕ್ರೀಡಾಂಗಣದಲ್ಲಿಪೊಲೀಸ್ ಇಲಾಖೆ ಹೋಮಗಾರ್ಡ ಇನ್ನಿತರ ಇಲಾಖೆ ವತಿಯಿಂದಪರೇಡನಡೆಸಲುಕ್ರಮ ವಹಿಸಲುಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ನಂತರವಿವಿಧಶಾಲಾ ಮಕ್ಕಳಿಂದಸಾಂಸ್ಕೃತಿಕಕಾರ್ಯಕ್ರಮ ನಡೆಯುವುದು. ವಿವಿಧರಂಗಗಳಲ್ಲಿ ಅತ್ಯುತ್ತಮಸಾಧನೆಮಾಡಿದಪರಿಣತರಿಗೆ ಇದೇಸಂದರ್ಭದಲ್ಲಿಸನ್ಮಾನಿಸುವ ಕಾರ್ಯಕ್ರಮಜರುಗಲಿದೆಎಂದರು.

ಅಂದುಸಾಯಂಕಾಲ5.30ರಿಂದ ಪೂಝ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳುಜರುಗಲಿವೆಂದರು.

ಸಭೆಯಲ್ಲಿ ವಿವಿಧ ಸಂಘ ಸಂಸ್ಥೆ ಪದಾಧಿಕಾರಿಗಳಾದಕನ್ನಡಸಾಹಿತ್ಯ ಪರಿಷತ್ ಅಧ್ಯಕ್ಷರಾದ ಸುರೇಶ ಚನ್ನಶೆಟ್ಟಿ, ಜಗನ್ನಾಥ ಹೆಬ್ಬಾಳೆ, ಜನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಗಡಿ ಅಭಿವೃದ್ಧಿಪ್ರಾಧಿಕಾರದಸದಸ್ಯರಾದ ಸಂಜೀವಕುಮಾರಆತಿವಾಳೆ,ವೀರುಪಾಕ್ಷ ಗಾದಗಿ ಹಾಗೂ ಇನ್ನಿತರರು ಸಭೆಗೆ ಮಾಹಿತಿ ನೀಡಿದರು.ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಹೆಚ್ಚುವರಿ ಪೊಲೀಸ್ ಉಪವರಿಷ್ಠಾಧಿಕಾರಿಗಳಾದ ಚಂದ್ರಕಾಂತ ಪೂಜಾರ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಕರಾಳೆ, ಡಿಡಿಪಿಯು ಚಂದ್ರಕಾಂತ ಶಾಬಾದಕರ್ ಸೇರಿದಂತೆ ಜಿಲ್ಲಾ ಮಟ್ಟದಅಧಿಕಾರಿಗಳು,ಸಂಘ-ಸಂಸ್ಥೆ ಪದಾಧಿಕಾರಿಗಳುಉಪಸ್ಥಿತರಿದ್ದರು.

ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ,ಸಾಮಾನ್ಯ ಸೌಲಭ್ಯ ಕೇಂದ್ರ ಲೋಕಾರ್ಪಣೆ

ರಾಯಚೂರು ಅ16 : ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮದಲ್ಲಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರ ಲೋಕಾರ್ಪಣೆಸಮಾರಂಭಅಕ್ಟೋಬರ್ 16ರಂದು ನಡೆಯಿತು.

ಪೂರ್ವನಿಗದಿಯಂತೆಕೇಂದ್ರಸಚಿವರಾದ ನಿರ್ಮಲಾ ಸೀತಾರಾಮನ್ ಅವರು ಬೆಳಗ್ಗೆ 11.35ರ ವೇಳೆಗೆ ಸಿಂಧನೂರ ಮಾರ್ಗವಾಗಿ ಜವಳಗೇರಾ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ದೇಶಿ ಶೈಲಿಯ ಮಹಿಳಾ ಡೊಳ್ಳಿನ ತಂಡದವರಿಂದ ಹಾಗೂ ಪುಷ್ಪಾರ್ಪಣೆಯ ಮೂಲಕ ಅತ್ಮೀಯವಾಗಿ ಸ್ವಾಗತಿಸಲಾಯಿತು.

ಮೊದಲಿಗೆಸಚಿವರು,ಅಂದಾಜು2.54 ಕೋಟಿರೂವೆಚ್ಚದಲ್ಲಿ,ಸಂಸದರಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ನಬಾರ್ಡಸಂಯುಕ್ತವಾಗಿರೂಪಿಸಿರುವ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತುಸಾಮಾನ್ಯಸೌಲಭ್ಯಕೇಂದ್ರವಾದ ಕಲ್ಯಾಣಸಂಪದಕೇಂದ್ರವನ್ನು ರಿಬ್ಬನ್ ಕತ್ತರಿಸುವ ಮೂಲಕ ಲೋಕಾರ್ಪಣೆ ಮಾಡಿದರು.

ಇದೆವೇಳೆಸಚಿವರು,ಕಲ್ಯಾಣಸಂಪದ ಕಟ್ಟಡದಲ್ಲಿನಕಂಪನಜರಡಿಯಂತ್ರ,ಜಿಲ್ಲಾ ಮಿಶ್ರಣಸಂಗ್ರಹಗಾರ,ಜಿಲ್ಲಾಮಿಶ್ರಣ ಯಂತ್ರ,ಶುದ್ಧೀಕರಣಮತ್ತುಗ್ರೈಂಡಿಂಗ್ ಯಂತ್ರ,ಬಣ್ಣಆಧಾರಿತಬೇರ್ಪಡಿಸುವ ಯಂತ್ರ, ಬೇಳೆ ಪ್ಯಾಂಕಿಂಗ್ ಯಂತ್ರ, ತಯಾರಾದವಸ್ತುಗಳಸಂಗ್ರಹಗಾರದ ವೀಕ್ಷಣೆನಡೆಸಿದರು. ಬಳಿಕವೇದಿಕೆಯ ಕಾರ್ಯಕ್ರಮ ನಡೆಯಿತು.

ಈವೇಳೆಭಾರತಸರ್ಕಾರದಹಣಕಾಸು ಸಚಿವಾಲಯದ ಹಣಕಾಸು ಸೇವೆಗಳ ಇಲಾಖೆಯ ಕಾರ್ಯದರ್ಶಿ ಎಂ ನಾಗರಾಜ್, ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಅಭಿವೃದ್ಧಿಬ್ಯಾಂಕಿನನಬಾರ್ಡ ಅಧ್ಯಕ್ಷರಾದಶಾಜಿಕೆ.ವಿ., ಜಿಲ್ಲಾಧಿಕಾರಿ ನಿತೀಶ್‌ಕೆ., ಜಿಲ್ಲಾಪಂಚಾಯತ್‌ಸಿಇಓ ಈಶ್ವರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಪುಟ್ಟಮಾದಯ್ಯ ಎಂ., ಮುಖಂಡರಾದವೆಂಕಟರಾವ್‌ನಾಡಗೌಡ, ಕೆ.ವಿರುಪಾಕ್ಷಪ್ಪ, ಜವಳಗೇರಾ ಗ್ರಾಪಂ ಅಧ್ಯಕ್ಷರಾದನಾಗಲಿಂಗಯಮನೂರಪ್ಪ ಹಾಗೂ ಇತರರು ಇದ್ದರು.

ಬಾಗೇವಾಡಿ: ಡಿಜಿಟಲ್ ಸಾರ್ವಜನಿಕ ಗ್ರಂಥಾಲಯಕ್ಕೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ-ಸಂವಾದ

ಬಳ್ಳಾರಿ,ಅ.16:ಸಿರುಗುಪ್ಪತಾಲ್ಲೂಕಿನ ಬಾಗೇವಾಡಿಗ್ರಾಮದಲ್ಲಿರುವಡಿಜಿಟಲ್ ಸ್ಪರ್ಶಹೊಂದಿದಸಾರ್ವಜನಿಕಗ್ರಂಥಾಲಯಕ್ಕೆ ಭಾರತ ಸರ್ಕಾರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾಸೀತಾರಾಮನ್‌ಅವರುಗುರುವಾರ ಭೇಟಿ ನೀಡಿ, ವಿದ್ಯಾರ್ಥಿಗಳು ಮತ್ತು ಶಿಕ್ಷಕರೊಂದಿಗೆ ಸಂವಾದ ನಡೆಸಿದರು.

ಜಿಲ್ಲಾಪಂಚಾಯತ್‌ನಅನುದಾನ24 ಲಕ್ಷ ರೂ.ವೆಚ್ಚದಲ್ಲಿಸುಸಜ್ಜಿತಕಟ್ಟಡದೊಂದಿಗೆ ನಿರ್ಮಾಣಗೊಂಡಡಿಜಿಟಲ್‌ಸಾರ್ವಜನಿಕ ಗ್ರಂಥಾಲಯವುಅತ್ಯಂತವ್ಯವಸ್ಥಿತವಾಗಿ ನಿರ್ವಹಣೆಮಾಡಲಾಗಿದ್ದು,ಓದುಗರಿಗೆ ಓದಲುಬೇಕಾದಉತ್ತಮವಾತಾವರಣ ನಿರ್ಮಾಣ ಮಾಡಲಾಗಿದೆ.

ಈಗ್ರಂಥಾಲಯದಲ್ಲಿ5800ಕ್ಕೂಹೆಚ್ಚು ವಿವಿಧವಿಷಯಗಳಿಗೆಸಂಬಂಧಿಸಿದಂತೆ ಪುಸ್ತಕಗಳ ಸಂಗ್ರಹ, ಕಂಪ್ಯೂಟರ್ ವ್ಯವಸ್ಥೆಇದ್ದು,ಡಿಜಿಟಲ್‌ಸೌಲಭ್ಯವೂ ಸಹಒಳಗೊಂಡಿದೆಹಾಗೂಓದುಗರ ಆಕರ್ಷಣೆಯ ಕೇಂದ್ರವಾಗಿದೆ.

ಈ ವೇಳೆ ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ,ರಾಜ್ಯಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರೂ ಆದ ಉಮಾ ಮಹಾದೇವನ್, ಜಿಲ್ಲಾಧಿಕಾರಿನಾಗೇಂದ್ರಪ್ರಸಾದ್.ಕೆ., ಜಿಪಂಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್,ಸಚಿವರಆಪ್ತಕಾರ್ಯದರ್ಶಿ ಅನಿರುದ್ಧ್ ಶ್ರವಣ್, ಸಹಾಯಕ ಆಯುಕ್ತಪಿ.ಪ್ರಮೋದ್,ಸಿರುಗುಪ್ಪ ತಹಶೀಲ್ದಾರರಾದಗೌಸಿಯಾಬೇಗಂ, ತಾಪಂ ಇಒ ಪವನ್ ಕುಮಾರ್ ಸೇರಿದಂತೆಗ್ರಂಥಾಲಯಾಧಿಕಾರಿಗಳು ಮತ್ತು ವಿದ್ಯಾರ್ಥಿಗಳು, ಶಿಕ್ಷಕರು ಹಾಜರಿದ್ದರು.

ಬಿಪಿಎಲ್ ಕಾರ್ಡಗೆ ಅರ್ಹರಿದ್ದರು ಕಾರ್ಡ್ ರದ್ದು ಮಾಡಿದ ಅಧಿಕಾರಿಗಳು

(ವರದಿ: ರಾಜಕುಮಾರ್ ಆರ್. ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.16: ಪಟ್ಟಣದ ಜನತಾ ನಗರ ಕಾಲೋನಿಯ ನಿವಾಸಿ ಸುಮಾ ಗಂಡ ಗೋಪಾಲ ಡಾಂಗೆ ಇವರು ಕಡು ಬಡವರಾಗಿದ್ದು ಇಷ್ಟು ದಿನ ಬಿಪಿಎಲ್ ಕಾರ್ಡುದಾರರಾಗಿರುತ್ತಾರೆ. ಆಹಾರ ಇಲಾಖೆಯ ಅಧಿಕಾರಿಗಳ ಲೋಪದಿಂದ ಈತನ ಬಿಪಿಎಲ್ ಕಾರ್ಡ್ ರದ್ದು ಮಾಡಿ ಎಪಿಎಲ್‌ಕಾರ್ಡ್ ಎಂದುಮಾರ್ಪಡಿಸಿದ್ದಾರೆ ಎಂದು ಫಲಾನುಭವಿ ಪತ್ರಿಕೆಗೆ ಮಾಹಿತಿ ನೀಡಿದ್ದಾರೆ.ಇದೇರೀತಿಚಿಟಗುಪ್ಪಪಟ್ಟಣದ ಫಾತ್ಮಪುರ್ ಸೇರಿದಂತೆಇತರೆಕಡೆಯೂ ಕೂಡಇಂತಹಘಟನೆಗಳುನಡೆದಬಗ್ಗೆತಿಳಿದು ಬಂದಿದೆ. ಹಾಗಾಗಿ ಆಹಾರ ಇಲಾಖೆಯ ಆಯುಕ್ತರು ಹಾಗೂ ಜಿಲ್ಲಾಡಳಿತ ಅರ್ಹ ಬಿಪಿಎಲ್‌ಕಾರ್ಡ್‌ಫಲಾನುಭವಿಗಳಿಗೆಸೂಕ್ತ ನ್ಯಾಯದೊರಕಿಸಿಕೊಡುವಂತೆಮಾಡಬೇಕು ಪಡಿತರ ಕಾರ್ಡ್ ರದ್ದು ಮಾಡುವುದು ಎಷ್ಟರಮಟ್ಟಿಗೆಸೂಕ್ತ ಎಂಬುದುಬಡವರ ಪ್ರಶ್ನೆ ಆಗಿದೆ. ಈಬಗ್ಗೆಮೇಲಧಿಕಾರಿಗಳು ಯಾವರೀತಿಕ್ರಮಕ್ಕೆಗೊಳ್ಳುತ್ತಾರೆಎಂದು ಕಾದು ನೋಡಬೇಕಿದೆ.

ಬಿಪಿಎಲ್ ಕಾರ್ಡ್ ರದ್ದು ಆಗಿರುವ ಬಗ್ಗೆ ಬೀದರ್ ಹಾಗೂ ಚಿಟಗುಪ್ಪ ಆಹಾರ ಇಲಾಖೆ ಅಧಿಕಾರಿಗಳಿಗೆಮಾಹಿತಿಕೇಳಲುಪ್ರಯತ್ನಿಸಿದಾಗಯಾವುದೇ ರೀತಿಯ ಮಾಹಿತಿ ನೀಡಿರುವುದಿಲ್ಲ. ಎಷ್ಟೇ ಸಲ ಕರೆ ಮಾಡಿದರೂ ಕರೆಗೆ ಸ್ಪಂದಿಸದೇ ಇರುವುದು ಸರಿಯಲ್ಲ, ಸಮಸ್ಯೆ ಕುರಿತು ಸ್ಪಂದಿಸಿಸಮಸ್ಯೆಯಪರಿಹಾರದಕುರಿತಂತೆ ಭರವಸೆ ನೀಡಿದರೇ ಕಾರ್ಡುದಾರರಿಗೆ ನೆಮ್ಮದಿ ಸಿಗಲಿದೆ ಎಂಬುದು ಪತ್ರಿಕೆಯ ಆಶಯವಾಗಿದೆ.

ಲೈಂಗಿಕ ದೌರ್ಜನ್ಯ ಎಸಗಿದ್ದ ಅಪರಾಧಿಗೆ 20 ವರ್ಷ ಜೈಲು

ಕಲಬುರಗಿ,ಅ.16:ತಾಲ್ಲೂಕಿನಗ್ರಾಮವೊಂದರಲ್ಲಿ17ವರ್ಷದಬಾಲಕಿಯನ್ನುಅಪಹರಿಸಿ ಲೈಂಗಿಕದೌರ್ಜನ್ಯ ಎಸಗಿದ್ದಪ್ರಕರಣಕ್ಕೆಸಂಬಂಧಿಸಿದಂತೆಅಪರಾಧಿಗೆಇಲ್ಲಿನಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 20 ವರ್ಷ ಜೈಲು ಹಾಗೂ 2.50 ಲಕ್ಷ ರೂ ದಂಡವಿಧಿಸಿದೆ. ಕಳಗಿತಾಲ್ಲೂಕಿನಅರಣಕಲ್ ಗ್ರಾಮಸ್ಥಮಲ್ಲಿಕಾರ್ಜುನಅಲಿಯಾಸ್ ಮಲ್ಲಪ್ಪಕಲಗುರ್ತಿಅಪರಾಧಿ. ಈತಬಾಲಕಿಯನ್ನುತಾಲ್ಲೂಕಿನಗ್ರಾಮವೊಂದರ